ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 217
20-2-2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 217

## ಮುಡಾ ಕೇಸ್: ಸಿಎಂಗೆ ಬಿಗ್ ರಿಲೀಫ್ ಲೋಕಾಯುಕ್ತ ಪೊಲೀಸರಿಂದ ಬಿ ರಿಪೋರ್ಟ್ ಸಲ್ಲಿಕೆಗೆ ಸಿದ್ಧತೆ




**ಮೈಸೂರು:** ರಾಜ್ಯ ರಾಜಕೀಯದಲ್ಲಿ ತೀವ್ರ ಬಿರುಗಾಳಿ ಎಬ್ಬಿಸಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ನಿವೇಶ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಮತ್ತು ಇತರರ ವಿರುದ್ಧ ತನಿಖೆ ಪೂರ್ಣಗೊಳಿಸಿರುವ ಲೋಕಾಯುಕ್ತ ಪೊಲೀಸರು ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ. ಈ ಸಂಬಂಧ ಲೋಕಾಯುಕ್ತ ಪೊಲೀಸರು ದೂರುದಾರ ಸ್ನೇಹಮಯಿ ಕೃಷ್ಣಗೆ ನೋಟಿಸ್ ನೀಡಿದ್ದು, ಅದರಲ್ಲಿ ಸಾಕ್ಷ್ಯಾಧಾರಗಳ ಕೊರತೆ ಇದೆ ಎಂದು ಹೇಳಿದ್ದು, ಎಲ್ಲ ಆರೋಪಗಳು ಸಾಕ್ಷ್ಯಾಧಾರಗಳ ಕೊರತೆಯಿಂದ ಸಾಬೀತಾಗಿಲ್ಲ ಎಂದು ತಿಳಿಸಿದೆ. ಲೋಕಾಯುಕ್ತ ಎಸ್ಪಿ ಉದೇಶ್ ಅವರು, ಸ್ನೇಹಮಯಿ ಕೃಷ್ಣ ಅವರಿಗೆ ನೋಟಿಸ್ ನೀಡಿದ್ದು, ಇದರಲ್ಲಿ ನೀವು ನೀಡಿದ ದೂರಿನ ಸಂಬಂಧ 01 ಆರೋಪಿಯಿಂದ 0 4 ಆರೋಪಿವರೆಗೆ ವಿಚಾರಣೆ ನಡೆಸಲಾಗಿದೆ. ಇದು ಸಿವಿಲ್ ಸ್ವರೂಪದ್ದೂ, ತನಿಕೆ ನಡೆಸಲು ತಕ್ಕುದಲ್ಲ, ಕಾನೂನಿನ ತಪ್ಪು ತಿಳುವಳಿಕೆಯಿಂದ ಕೂಡಿದೆ. ಅಲ್ಲದೆ ದೂರಿನಲ್ಲಿ ವಜಾ ಮಾಡಿದ ಪ್ರಕರಣಗಳು ಸಹ ಇದೆ. ಸಾಕಷ್ಟು ಸಾಕ್ಷ್ಯಾಧಾರಗಳ ಕೊರತೆ ಇದೆ ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

# ಶಿವಾಜಿ ಮಹಾರಾಜರ ಶೌರ್ಯ ಇಂದಿನ ಜನಾಂಗಕ್ಕೂ ಸ್ಫೂರ್ತಿ

**ದಾವಣಗೆರೆ:** ಶಿವಾಜಿ ಮಹಾರಾಜರ ಹೋರಾಟ ಮನೋಭಾವ, ಧೈರ್ಯ ಹಾಗೂ ಶೌರ್ಯ ಇಂದಿನ ಜನಾಂಗಕ್ಕೆ ಸ್ಫೂರ್ತಿಯಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ಕ್ಷತ್ರಿಯ ಮರಾಠ ವಿದ್ಯಾವರ್ಧಕ ಸಂಘದ ವತಿಯಿಂದ ಬುಧವಾರ ಜಿಲ್ಲಾಡಳಿತ ಕಚೇರಿ ಆಯೋಜಿಸಲಾಗಿದ್ದ, ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ, ಬಳಿಕ ಅವರು ಮಾತಾನಾಡಿದರು.

ಶೌರ್ಯಕ್ಕೆ ಮತ್ತೊಂದು ಹೆಸರು ಛತ್ರಪತಿ ಶಿವಾಜಿ. ಶೋಷಿತರ, ಮಹಿಳೆಯರ, ಬಡವರ ಪರವಾಗಿ ಶಿವಾಜಿ ಕೆಲಸ ಮಾಡಿದರು. ಚಿಕ್ಕಂದಿನಿಂದಲೇ ನಾಯಕತ್ವದ ಗುಣಗಳನ್ನು ಶಿವಾಜಿ ಮೈಗೂಡಿಸಿಕೊಂಡಿದ್ದರು. ಸಮಾಜದ ಎಲ್ಲಾ ವರ್ಗದ ಜನರನ್ನು ರಕ್ಷಣೆ ಮಾಡಿದ್ದರು. ಹಿಂದೂ ಧರ್ಮ ರಕ್ಷಣೆ ಮಾಡಿದ ಕೀರ್ತಿ ಶಿವಾಜಿಗೆ ಸಲ್ಲುತ್ತದೆ. ಮೊಘಲರ ವಿರುದ್ಧ ಅನೇಕ ಯುದ್ಧಗಳನ್ನು ಮಾಡಿ ಅವರನ್ನು ಸೋಲಿಸಿ ಮರಾಠ ಚಕ್ರವರ್ತಿ ಎಂದು ಗುರುತಿಸಿಕೊಂಡರು. ಇಂತಹ ಮಹಾನ್ ವ್ಯಕ್ತಿಯ ಜಯಂತಿಯನ್ನು ಸರ್ಕಾರದಿಂದ ಆಚರಿಸುತ್ತಿರುವುದು ಸಂತಸ ಎನಿಸುತ್ತದೆ. ಶಿವಾಜಿಯ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ಸಮಾಜದ ಏಳಿಗೆಗಾಗಿ ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಗಂಗಾಧರ್ ಹೇಳಿದರು.



ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಮಹಾನಗರಪಾ ಪಾಲಿಕೆಯ ಮಹಾಪೌರ ಚಮನ್ ಸಾಬ್.ಕೆ, ಪಾಲಿಕೆ ಆಯುಕ್ತೆ ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಕ್ಷತ್ರಿಯ ಮರಾಠ ವಿದ್ಯಾವರ್ಧಕ ಸಂಘ(ರಿ)ದ ಗೌರವಾಧ್ಯಕ್ಷರಾದ ಯಶವಂತರಾವ್ ಜಾಧವ್, ಅಧ್ಯಕ್ಷರಾದ ಡಿ. ಮಾಲತೇಶರಾವ್ ಜಾದವ್, ಸಂಘದ ಪದಾಧಿಕಾರಿಗಳು ಉಪಸ್ಥಿತಿರಿದ್ದರು.

# ಅಂಬೇಡ್ಕರ್ ಭವನಗಳು ಸಾಂಸ್ಕೃತಿಕ ಚಟುವಟಿಕೆಗಳ ಕೇಂದ್ರವಾಗಲಿ: ಬಸವಂತಪ್ಪ

**ದಾವಣಗೆರೆ:** ಸಂವಿಧಾನ ಶಿಲ್ಪಿ ಹಾಗೂ ಶೋಷಿತರ ಪಾಲಿನ ಸೂರ್ಯ ಡಾ. ಬಿ.ಆರ್. ಅಂಬೇಡ್ಕರ್ ಭವನವನ್ನು ತಾಲ್ಲೂಕಿನ ಪ್ರತಿ ಗ್ರಾಮದಲ್ಲಿ ನಿರ್ಮಾಣ ಮಾಡಬೇಕಾಗಿದೆ. ಈ ಭವನಗಳು ಸಮುದಾಯದ ಸಾಂಸ್ಕೃತಿಕ ಚಟುವಟಿಕೆಗಳ ಕೇಂದ್ರವಾಗಬೇಕು ಎಂದು ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಹಾಗೂ ತಾಲ್ಲೂಕಿನ ನೇರ್ಲಿಗಿ ಗ್ರಾಮದಲ್ಲಿ ಮಂಗಳವಾರ ಪಂಚಾಯತ್ ರಾಜ್ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2021-22 ನೇ ಸಾಲಿನ ಎಸ್ ಸಿಪಿ- ಟಿಎಸ್ಪಿ ಯೋಜನೆಯಡಿಯಲ್ಲಿ ಮಂಜೂರಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, 'ಗ್ರಾಮ ಮಟ್ಟದ ಭವನಗಳನ್ನು ತಮ್ಮ ಮನೆಗಳಂತೆ ನೋಡಿಕೊಳ್ಳಬೇಕು. ಗ್ರಾಮಸ್ಥರಿಗೆ ಅನುಕೂಲವಾಗುವಂತೆ ಮೇಲ್ವಿಚಾರಣೆ ಮಾಡಬೇಕು' ಎಂದರು.



ಅಂಬೇಡ್ಕರ್ ಅವರ ಸಂವಿಧಾನದ ಕಾರಣದಿಂದಾಗಿ ನಾವೆಲ್ಲರೂ ಇಂದು ಈ ಸ್ಥಿತಿಯಲ್ಲಿದ್ದೇವೆ. ಇಲ್ಲದಿದ್ದರೆ, ನಮ್ಮ ಪರಿಸ್ಥಿತಿಯನ್ನು ಊಹಿಸಿಕೊಳ್ಳಲು ಸಹ ಸಾಧ್ಯವಾಗುತ್ತಿರಲಿಲ್ಲ. ನೂರಾರು ವರ್ಷಗಳಿಂದ ಅವಕಾಶ ವಂಚಿತರಾದವರಿಗೆ ಸಂವಿಧಾನದತ್ತವಾಗಿ ಹಲವು ಸೌಲಭ್ಯಗಳನ್ನು ಕೊಟ್ಟರು. ರಾಜಕೀಯವಾಗಿ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ನಾವು ಸ್ವಾವಲಂಬಿಗಳಾಗಿ ಬದುಕಲು ಬುನಾದಿ ಹಾಕಿದರು' ಎಂದು ತಿಳಿಸಿದರು.

'ಸಮ ಬಾಳು ಮತ್ತು ಸಮ ಪಾಲು ಅಂಬೇಡ್ಕರ್ ಅವರ ಆಶಯವಾಗಿತ್ತು. ಅದು ಈಡೇರಬೇಕಾದರೆ, ಅವರು ಹಾಕಿಕೊಟ್ಟ ಹಾದಿಯಲ್ಲಿ ನಾವೆಲ್ಲರೂ ನಡೆಯಬೇಕು. ಈ ನಿಟ್ಟಿನಲ್ಲಿ ನಮ್ಮೆಲ್ಲರ ಮೇಲೆ ಮಹತ್ತರವಾದ ಜವಾಬ್ದಾರಿಗಳಿವೆ. ಅವುಗಳನ್ನು ನಿರ್ವಹಿಸುವ ಮೂಲಕ ಶೋಷಿತ ಹಾಗೂ ಹಿಂದುಳಿದ ಸಮುದಾಯಗಳ ಅಭಿವೃದ್ಧಿಗೆ ಶ್ರಮಿಸಬೇಕು. ಆ ಮೂಲಕ, ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು' ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಎಇಇ ಶಿವಮೂರ್ತೆಪ್ಪ, ಎಪಿಎಂಸಿ ಮಾಜಿ ಅಧ್ಯಕ್ಷ ಎಸ್.ಕೆ. ಚಂದ್ರಣ್ಣ, ಪ್ರಭಣ್ಣ, ಅಂಜಿನಪ್ಪ, ನಾಗರಾಜ್, ರಮೇಶ್ ನಾಯ್ಕ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಮಾರ್ಚ್ 1 ರಿಂದ 20 ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ:

# ಕಟ್ಟುನಿಟ್ಟಾಗಿ ಪರೀಕ್ಷೆ ಕಾರ್ಯ ನಿರ್ವಹಿಸಿ: ಜಿಲ್ಲಾಧಿಕಾರಿ ಮೀನಾ ನಾಗರಾಜ್

**ಚಿಕ್ಕಮಗಳೂರು: ಫೆ. 19:** ಮಾರ್ಚ್ 01 ರಿಂದ 20 ರವರೆಗೆ ಜಿಲ್ಲೆಯ 19 ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ನಡೆಯಲಿದೆ. ಜಿಲ್ಲೆಯಲ್ಲಿ ಈ ಬಾರಿ ಒಟ್ಟು 9137 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಹೇಳಿದರು.

ನಗರದ ಕೆಸ್ವಾನ್‌ನಲ್ಲಿ ವಿಡಿಯೋ ಕಾನ್ಫರೆನ್ಸ್‌ನಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಸಿದ್ಧತೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ಯಾವುದೇ ಲೋಪದೋಷ ಸಂಭವಿಸದಂತೆ ಕಟ್ಟುನಿಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪದವಿ ಪೂರ್ವ ಶಿಕ್ಷಣ ಇಲಾಖೆ ರೂಪಿಸಿರುವ ಪರೀಕ್ಷಾ ಮಾರ್ಗದರ್ಶಿ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು ಎಂದ ಅವರು ಪರೀಕ್ಷಾ ಕಾರ್ಯನಿರ್ವಹಿಸುವಲ್ಲಿ ಬೇಜವಾಬ್ದಾರಿ ಹಾಗೂ ನಿರ್ಲಕ್ಷತೆ ಬೇಡ. ಪರೀಕ್ಷೆಗಳು ಸುಸೂತ್ರವಾಗಿ ನಡೆಯಬೇಕು, ನಿಯಮಗಳು ಸರಿಯಾದ ರೀತಿಯಲ್ಲಿ ಪಾಲನೆ ಮಾಡದಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.



ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಆಯಾ ಕೇಂದ್ರಗಳಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳ ಬಗ್ಗೆ ಖಚಿತ ಪಡಿಸಿಕೊಳ್ಳಬೇಕು. ಪರೀಕ್ಷಾ ಕೇಂದ್ರದಲ್ಲಿ ಯಾವುದೇ ರೀತಿಯ ಫೋನ್, ಸ್ಮಾರ್ಟ್ ಫೋನ್ ಹಾಗೂ ಎಲೆಕ್ಟ್ರಿಕಲ್ ವಸ್ತುಗಳನ್ನು ಕೊಂಡೊಯ್ಯಲು ಅವಕಾಶವಿಲ್ಲ ಎಂದರು.

ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಮೇಲ್ವಿಚಾರಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸಹ ಮೊಬೈಲ್ ಬಳಸುವಂತಿಲ್ಲ. ಪರೀಕ್ಷಾ ಕೇಂದ್ರದ ಒಳಗೆ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಿಸಲು ಅವಕಾಶವಿದೆ. ಪೋಷಕರಿಗೆ ಅವಕಾವಿಲ್ಲ. ಪರೀಕ್ಷಾ ಕೊಠಡಿಗಳಲ್ಲಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆ ಕಲ್ಪಿಸಬೇಕು ಎಂದು ಹೇಳಿದರು. ಸಿಸಿ ಟಿವಿ ಕ್ಯಾಮರಾ ಕಣ್ಗಾವಲು: ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಕೊಂಡೊಯ್ಯಲು ತಹಶೀಲ್ದಾರ್, ಬಿ.ಇ.ಓ ಹಾಗೂ ಪ್ರಾಚಾರ್ಯರನ್ನೊಳಗೊಂಡ ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ಪರೀಕ್ಷಾ ಕೇಂದ್ರದ ಸಂಕೇತಗಳನ್ನು ಸರಿಯಾಗಿ ಪರಿಶೀಲಿಸಿ ಜಿಪಿಎಸ್ ಅಳವಡಿಸಿದ ವಾಹನದಲ್ಲಿ ನಿಗದಿಪಡಿಸಿದ ಮಾರ್ಗ ಹಾಗೂ ಸಮಯಾನುಸಾರ ಪೊಲೀಸ್ ರಕ್ಷಣೆಯಲ್ಲಿ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆಗಳನ್ನು ತಲುಪಿಸಬೇಕು. ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಸಿ.ಸಿ. ಟಿವಿ ಕಣ್ಗಾವಲಿನಲ್ಲಿ ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಪಡೆದು ಸರಿಯಾದ ಸಮಯಕ್ಕೆ ಪರೀಕ್ಷಾ ಮೇಲ್ವಿಚಾರಕರಿಗೆ ತಲುಪಿಸಬೇಕು ಎಂದು ತಿಳಿಸಿದರು.

ವಿಡಿಯೋ ಕಾನ್ಫರೆನ್ಸ್‌ನಲ್ಲಿ ಜಿ.ಪಂ. ಉಪಕಾರ್ಯದರ್ಶಿ ಶಂಕರ್ ಕೊರವರ, ಜಿಲ್ಲಾ ಖಜಾನಾಧಿಕಾರಿ ಓಂಕಾರಪ್ಪ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟನಾಯ್ಕ, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು, ಬಿ.ಇ.ಓ. ಗಳು ಹಾಗೂ ಉಪನ್ಯಾಸಕರು ಹಾಜರಿದ್ದರು.

# ಪರಕೀಯರನ್ನು ಹಿಮ್ಮೆಟ್ಟಿಸಿ ರಾಷ್ಟ್ರ ಕಟ್ಟಿದ ಶಿವಾಜಿ ಮಹಾರಾಜರು : ಬಿ.ವೈ.ರಾಘವೇಂದ್ರ

**ಶಿವಮೊಗ್ಗ:** ಪರಕೀಯರ ದಾಳಿಯನ್ನು ಹಿಮ್ಮೆಟ್ಟಿಸಿ ರಾಷ್ಟ್ರ ಕಟ್ಟಿದ ಛತ್ರಪತಿ ಶಿವಾಜಿ ಮಹಾರಾಜರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸದೇ ಎಲ್ಲರೂ ಸೇರಿ ಜಯಂತಿಯನ್ನು ಆಚರಣೆ ಮಾಡೋಣ ಎಂದು ಸಂಸದರಾದ ಬಿ.ವೈ.ರಾಘವೇಂದ್ರ ಕರೆ ನೀಡಿದರು.

ಜಿಲ್ಲಾಡಳಿತ, ಜಿ.ಪಂ, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಕೀಯ ಆಕ್ರಮಣಕಾರರನ್ನು ಹಿಮ್ಮೆಟ್ಟಿಸಿ, ದೇಶದಲ್ಲಿ ಹಿಂದೂ ಸಾಮ್ರಾಜ್ಯ ಸ್ಥಾಪಿಸಲು ಹೋರಾಡಿದ ದಾರ್ಶನಿಕರು ಶಿವಾಜಿ ಮಹಾರಾಜರು. ತಾಯಿ ಜೀಜಾಬಾಯಿಯವರು ಶೌರ್ಯದಿಂದ ಮಗನನ್ನು ಬೆಳೆಸಿದ ಪ್ರತಿಫಲವಾಗಿ ಅವರು ಹಿಂದೂ ರಾಷ್ಟ್ರ ಕಟ್ಟುವಲ್ಲಿ ಸಫಲರಾದರು.

ಶಿವಮೊಗ್ಗಕ್ಕೂ ಶಿವಾಜಿಯವರ ಕುಟುಂಬಕ್ಕೂ ಅವಿನಾಭಾವ ಸಂಬಂಧ ಇದೆ. ಶಿವಾಜಿಯವರ ಮಕ್ಕಳು ಮೊಘಲರಿಂದ ತಪ್ಪಿಸುಕೊಳ್ಳುವಾಗ ಕೆಳದಿ ರಾಣಿ ಚೆನ್ನಮ್ಮ ಅವರನ್ನು ರಕ್ಷಿಸುವಲ್ಲಿ ಸಹಾಯ ಮಾಡಿದ್ದರು ಎಂದು ಸ್ಮರಿಸಿದರು.



ಮೊಘಲರು ಸೇರಿದಂತೆ ಇತರೆ ಆಕ್ರಮಣಕಾರರ ವಿರುದ್ಧ ಹೋರಾಡಿದ್ದ ಶಿವಾಜಿ ಹಾಗೂ ವಂಶಸ್ಥರನ್ನು ನಾವು ಸ್ಮರಿಸಬೇಕು ಎಂದ ಅವರು ಪ್ರಸ್ತುತ ಪ್ರಯಾಗರಾಜ್‌ಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿ ಸಹ ಶಿವಾಜಿ ಮಹಾರಾಜರ ಕೊಡುಗೆ ಇದೆ ಎಂದರು.

ಯುವ ವಾಗ್ಮಿ ಕುಮಾರಿ ಹಾರಿಕ ಮಂಜುನಾಥ್ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ನಮ್ಮ ದೇಶದ ಗುಡಿ ಗೋಪುರಗಳನ್ನು ಉಳಿಸಿದ ಶಿವಾಜಿ ಮಹಾರಾಜರು ದೇವರ ಸಮಾನರು. ನಮ್ಮ ಸನಾತನ ಧರ್ಮವನ್ನು ನಾಶಗೊಳಿಸಲು ಪ್ರಯತ್ನಿಸಿದವರ ವಿರುದ್ಧ ನಿಂತು ರಾಷ್ಟ್ರ ರಕ್ಷಣೆಯಲ್ಲಿ ತೊಡಗಿದ್ದ ಶೌರ್ಯವಂತರು.

ಹಿಂದು ಧರ್ಮ ಪಾಲನೆಗೆ ಅಡೆತಡೆಗಳಿದ್ದವು ಹಾಗೂ ನಮ್ಮ ಸನಾತನ ಧರ್ಮಕ್ಕೆ ನಿರಂತರವಾಗಿ ಒಂದು ಸಾವಿರ ವರ್ಷಗಳ ದಾಳಿ ನಡೆದರೂ ಶಿವಾಜಿಯಂತಹ ಹೋರಾಟಗಾರರಿಂದ ಧರ್ಮ ರಕ್ಷಣೆಯಾಗಿದೆ. ಜಾಗತಿಕ ಮಟ್ಟದಲ್ಲಿ ಅನೇಕ ಪ್ರಾಚೀನ ಮತ, ಪಂಥಗಳು ಕಣ್ಮರೆಯಾಗಿರುವುದನ್ನು ಕಾಣಬಹುದಾಗಿದೆ. ಆದರೆ ಶಿವಾಜಿಯಂತಹವರು ಪರಕೀಯ ದೇಶಗಳ ಸರಣಿ ದಾಳಿಯಿಂದ ರಾಷ್ಟ್ರ ರಕ್ಷಣೆ ಮಾಡಿದ್ದಾರೆ.

ಧರ್ಮ ರಕ್ಷಣೆಗಾಗಿಯೇ ಎಂಬಂತೆ ಚಿಕ್ಕಂದಿನಿಂದಲೇ ಹೋರಾಟ ಮಾಡುತ್ತಾ ಬಂದ ಶಿವಾಜಿ ಮಹಾರಾಜರು, ಸಂಘಟಿತ ಬಲ ನೀಡಿ, ದೇಶ ರಕ್ಷಿಸಿದರು. ಸಂಘಟನಾ ತತ್ವದ ಕುರಿತು ಸಾರಿದರು. ಇದಕ್ಕೆಲ್ಲಾ ಕಾರಣ ತಾಯಿ ಜೀಜಾಬಾಯಿ. ಅವರು ವೀರತ್ವ ಮತ್ತು ಶೌರ್ಯದ ಕನಸನ್ನು ಕಟ್ಟಿಕೊಟ್ಟಿದ್ದರು. ಹಾಗೆಯೇ ಎಲ್ಲ ತಾಯಂದಿರು ತಮ್ಮ ಮಕ್ಕಳು ಉತ್ತಮ ಪ್ರಜೆಯಾಗಬೇಕೆಂಬುದನ್ನು ಕಲಿಸಬೇಕು ಎಂದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಚಂದ್ರಭೂಪಾಲ್, ಎಎಸ್‌ಪಿ ಅನಿಲ್ ಕುಮಾರ್ ಭೂಮರಡ್ಡಿ, ಶಿವಮೊಗ್ಗದ ತಹಶೀಲ್ದಾರ ವಿ.ಎಸ್.ರಾಜೀವ್ ಮತ್ತಿತರರಿದ್ದರು.

## ನೇರ ಸಂದರ್ಶನ

ಚಿಕ್ಕಮಗಳೂರು: ಫೆ. 19: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಚಿಕ್ಕಮಗಳೂರು ಕಛೇರಿಯಲ್ಲಿ ಫೆಬ್ರವರಿ 21 ರಂದು ಬೆಳಿಗ್ಗೆ 10.30 ಗಂಟೆಗೆ ಖಾಸಗಿ ಕಂಪನಿಯಾದ ಯುತ್ ಪೊರ್ ಜಾಬ್ಸ್, ಬೆಂಗಳೂರು ಇವರು ತಮ್ಮಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಉಚಿತ ಪ್ರವೇಶವಾಗಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 30 ವರ್ಷ ವಯೋಮಿತಿಯ ಅಂಗವಿಕಲ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ: 9945198500/ 08262-295538 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಬೆಲೆ ಕಡಿತಗೊಳಿಸಲಿ: ಎಎಪಿ ಆಗ್ರಹ

ದಾವಣಗೆರೆ: ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಎಲ್ಲದರ ಬೆಲೆ ಏರಿಸುವ ಮೂಲಕ ಜನವಿರೋಧಿ ಸರ್ಕಾರಗಳಾಗಿದ್ದು, ಈ ಕೂಡಲೇ ಬೆಲೆಗಳನ್ನು ಕಡಿತಗೊಳಿಸಬೇಕೆಂದು ಆಮ್ ಆದ್ಮಿ ಪಕ್ಷ ಆಗ್ರಹಿಸುತ್ತದೆ ಎಂದು ಎಎಪಿ ಜಿಲ್ಲಾಧ್ಯಕ್ಷ ಕೆ.ಎಸ್. ಶಿವಕುಮಾರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಕೊಡುವ ನೆಪದಲ್ಲಿ ಸಾರ್ವಜನಿಕರ ಮೂಗಿಗೆ ತುಪ್ಪ ಸವರುವ ಮುಖಾಂತರ ಸಾರ್ವಜನಿಕರನ್ನು ಸುಲಿಗೆ ಮಾಡುವ ಸರ್ಕಾರವಾಗಿದೆ ಎಂದು ಆರೋಪಿಸಿದರು. ಇದಕ್ಕೆ ಮೂಲ ಕಾರಣ ಸರ್ಕಾರದ ಬೆಲೆ ಏರಿಕೆಯಾಗಿದೆ. ಆಸ್ತಿ ತೆರಿಗೆ ಶುಲ್ಕಶೇ. 600 ಮಾರ್ಗದರ್ಶನ ಮೌಲ್ಯಗಳು ಶೇ. 30 ವಾಹನ ನೋಂದಣಿ ಶುಲ್ಕ ಶೇ. 10 ಆಸ್ಪತ್ರೆ ಸೇವಾ ಶುಲ್ಕ ಶೇ. 5, ಬೆಂಗಳೂರು ಮೇಟ್ರೋ ದರಗಳ ಶೇ. 50 ನೀರಿನ ಸುಂಕಗಳು ಶೇ. 30, ವಿದ್ಯುತ ದರಗಳು ಶೇ. 14., ಬಸ್ ದರ ಶೇ. 15, ಹಾಲಿನ ದರ ಶೇ. 15 ಬೀಜ ಬೆಲೆಗಳ ಶೇ. 60, ಬಿಯರ್‌ಗಳ ಬೆಲೆಗಳ ಶೇ. 45, ಇನ್ನೂ ಅನೇಕ ದರಗಳ ಏರಿಸುವ ಮುಖಾಂತರ ಇದು ದರ ಏರಿಕೆ ಗ್ಯಾರಂಟಿ ಸರ್ಕಾರವಾಗಿದೆ ಎಂದರು.




ಇನ್ನು ಕೇಂದ್ರ ಸರ್ಕಾರವು ಪೆಟ್ರೋಲ್, ಡಿಸೇಲ್, ಅಡುಗೆ ಅನಿಲ, ರೈಲು ದರ, ಇನ್ನೂ ಅನೇಕ ಸಾಮಗ್ರಿಗಳ ಮೇಲೆ ದರಗಳನ್ನು ಏರಿಸುವ ಮುಖಾಂತರ ಸಾಮಾನ್ಯ ಜನರು ಮೇಲೆ ಬರೆ ಎಳೆದಂತಾಗಿದೆ ಎಂದು ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ, ಎಸ್.ಕೆ. ಆದಿಲ್ ಖಾನ್, ಸಿದ್ದಪ್ಪ ಸುರೇಶ್, ಕೆ. ರವೀಂದ್ರ ಉಪಸ್ಥಿತರಿದ್ದರು.

## ದಾವಣಗೆರೆಗೆ ಇಂದು ಸಭಾಪತಿ ಯು.ಟಿ. ಖಾದರ್ ಆಗಮನ

**ದಾವಣಗೆರೆ:** ರಾಜ್ಯ ವಿಧಾನಸಭೆಯ ಸಭಾಪತಿ ಯು.ಟಿ. ಖಾದರ್ ಇಂದು ಗುರುವಾರದಂದು ಬೆಳಿಗ್ಗೆ 10 ಗಂಟೆಗೆ ದಾವಣಗೆರೆ ನಗರದ ಬಾಪೂಜಿ ಗೆಸ್ಟ್ ಹೌಸ್ ಗೆ ಆಗಮಿಸಲಿದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ. ಶೆಟ್ಟಿ ತಿಳಿಸಿದ್ದಾರೆ.

ಜಿಲ್ಲೆಯ ಸಚಿವರು, ಎಲ್ಲಾ ಶಾಸಕರು, ಸಂಸದರು, ಕಾಂಗ್ರೆಸ್ ಪಕ್ಷದ ಎಲ್ಲಾ ಜನಪ್ರತಿನಿಧಿಗಳು, ಕೆಪಿಸಿಸಿ ಸದಸ್ಯರು, ಸರ್ಕಾರದಿಂದ ನೇಮಕಗೊಂಡಿರುವ ನಾಮನಿರ್ದೇಶನ ಸದಸ್ಯರುಗಳು, ಗ್ಯಾರಂಟಿ ಜಿಲ್ಲಾ ಮತ್ತು ತಾಲೂಕು ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಡಿಸಿಸಿ ಬ್ಯಾಂಕ್ ನಿರ್ದೇಶಕರು, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಜಿಲ್ಲಾ ಕಾಂಗ್ರೆಸ್ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತರ, ಅಂಗವಿಕಲರ, ಕಿಸಾನ್ ಕಾಂಗ್ರೆಸ್, ಕಾರ್ಮಿಕರ, ವೈದ್ಯರ, ವಕೀಲರ ವಿಭಾಗಗಳು, ಎನ್.ಎಸ್.ಯು.ಐ., ಯುವ ಘಟಕ, ಮಹಿಳಾ ಘಟಕ ಹಾಗೂ ಕಾಂಗ್ರೆಸ್ ಪಕ್ಷದ ಎಲ್ಲಾ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಆಗಮಿಸುವಂತೆ ಶೆಟ್ಟಿ ಕೋರಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ದಾವಣಗೆರೆ:** ಕುಕ್ಕವಾಡ ಮತ್ತು ಶ್ಯಾಗಲೆ ವಿದ್ಯುತ್ ವಿತರಣ ಕೇಂದ್ರದಲ್ಲಿ ತುರ್ತಾಗಿ ನಿರ್ವಾಹಣ ಕಾರ್ಯ ಹಮ್ಮಿಕೊಂಡಿರುವುದರಿಂದ ಫೆ.20 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಕುಕ್ಕವಾಡ, ಕೊಲಕುಂಟೆ, ಗಿರಿಯಾಪುರ, ಕೈದಾಳೆ, ಹದಡಿ, ಕಲಬಂಡೆ, ಲೋಕಿಕೆರೆ, ಬಲ್ಲೂರು, ಕನಗೊಂಡನಹಳ್ಳಿ, ಮತ್ತಿ, ನಾಗರಸನಹಳ್ಳಿ, ಹೂವಿನಮಡು ಗ್ರಾಮಗಳು ಹಾಗೂ ಶ್ಯಾಗಲೆ, ಕಂದ್ಗಲ್ಲು, ಕೋಡಿಹಳ್ಳಿ, ಗೋಣಿವಾಡ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

**ದಾವಣಗೆರೆ:** ಈ ತಿಂಗಳ 27 ರಂದು ಜಿಲ್ಲೆಯಲ್ಲಿ ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆಯ ಅಗತ್ಯಗಳನ್ನು ಪೂರೈಸುವ ಇಪಿಎಫ್‌ಒ (ನೌಕರರ ಭವಿಷ್ಯ ನಿಧಿ ಸಂಸ್ಥೆ), ಜಿಲ್ಲೆಗಳಲ್ಲಿ ಹೆಜ್ಜೆ ಗುರುತು ಮತ್ತು ಉಪಸ್ಥಿತಿಯನ್ನು ಹೆಚ್ಚಿಸುವ ಉದ್ದೇಶದಿಂದ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಒಗ್ಗೂಡಿಸುವ ಮಾಹಿತಿ ವಿನಿಮಯ, ಕುಂದು ಕೊರತೆ ನಿವಾರಣಾ ವೇದಿಕೆಯಾಗಿ ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ ಕಾರ್ಯನಿರ್ವಹಿಸಲಿದೆ. ಫೆಬ್ರವರಿ 27 ರಂದು ನಗರದ ಎಂ.ಸಿ.ಸಿ.ಬಿ ಬ್ಲಾಕ್, ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪ ಹಿಂಭಾಗದ ಚಿರಾಗ್ ಮೆಡಿಕೇರ್ ಸಲ್ಯೂಷನ್ ಪ್ರವೈಟ್ ಲಿಮಿಟೆಡ್‌ನಲ್ಲಿ ಕಾರ್ಯಕ್ರಮವನ್ನು ನಡೆಸಲಾಗುವುದು ಇಪಿಎಫ್‌ಒ ಮತ್ತು ಇಎಸ್‌ಐಸಿ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಭಾಗವಹಿಸಲಿದ್ದಾರೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

## ಲೋಕಾಯುಕ್ತ: ಸಾರ್ವಜನಿಕರ ಕುಂದು ಕೊರತೆ ಅಹವಾಲು ಸ್ವೀಕಾರ ಸಭೆ

ಶಿವಮೊಗ್ಗ : ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಜಿಲ್ಲಾ ಅಧಿಕಾರಿಗಳು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಫೆಬ್ರವರಿ-2025ರ ಮಾಹೆಯ ಕೆಳಕಂಡ ದಿನಗಳಂದು ಸಾರ್ವಜನಿಕರ ಕುಂದು ಕೊರತೆ ಅರ್ಜಿ ಸ್ವೀಕಾರ ಸಭೆ ನಡೆಸುವರು.

ಫೆ. 21 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಸೊರಬ ತಾಲೂಕು ಕಚೇರಿ ಸಭಾಂಗಣ ಮತ್ತು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ತೀರ್ಥಹಳ್ಳಿ ತಾಲೂಕು ಕಚೇರಿ ಸಭಾಂಗಣ. ಫೆ.24 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಶಿಕಾರಿಪುರ ತಾಲೂಕು ಕಚೇರಿ ಸಭಾಂಗಣ ಮತ್ತು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಸಾಗರ ತಾಲೂಕು ಪಂಚಾಯಿತಿ ಸಭಾಂಗಣ. ಫೆ.25 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಹೊಸನಗರ ತಾಲೂಕು ಕಚೇರಿ ಸಭಾಂಗಣ ಮತ್ತು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30 ರವರೆಗೆ ಭದ್ರಾವತಿ ನಗರಸಭೆ ಸಭಾಂಗಣ, ಫೆ.28 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಶಿವಮೊಗ್ಗ ತಾಲೂಕು ಪಂಚಾಯಿತಿ ಸಭಾಂಗಣಗಳಲ್ಲಿ ಕುಂದುಕೊರತೆ ಅರ್ಜಿ ಸ್ವೀಕಾರ ಸಭೆ ನಡೆಯಲಿದೆ.

ಸರ್ಕಾರಿ ಕರ್ತವ್ಯ ನಿರ್ವಹಿಸಲು ಬೇಜವಾಬ್ದಾರಿತನ, ನಿರ್ಲಕ್ಷ್ಯ, ಅನಗತ್ಯ ವಿಳಂಬ ಮತ್ತು ಅಧಿಕೃತ ಕೆಲಸಕ್ಕಾಗಿ ಲಂಚಕ್ಕೆ ಬೇಡಿಕೆ ಇಟ್ಟಂತಹ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ಲಿಖಿತ ಅಹವಾಲು ಸಲ್ಲಿಸುವಂತೆ ಶಿವಮೊಗ್ಗದ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ರಕ್ತದೊತ್ತಡವನ್ನು ಉಂಟುಮಾಡಬಹುದು. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು. ನಿಮ್ಮ ಸಂಬಂಧಿಕರ ಭೇಟಿ ನೀವು ಆಲೋಚಿಸಿದ್ದಕ್ಕಿಂತಲೂ ಹೆಚ್ಚು ಒಳ್ಳೆಯವಾಗಿರುತ್ತದೆ. ನೀವು ನಿಮ್ಮ ಪ್ರೀತಿಪಾತ್ರರನ್ನು ನಿಮ್ಮ ಜೀವನ ಸಂಗಾತಿಯನ್ನಾಗಿ ಮಾಡಲು ಬಯಸುತ್ತಿದ್ದರೆ, ಇಂದು ನೀವು ಅವರೊಂದಿಗೆ ಮಾತನಾಡಬಹುದು.

### ವೃಷಭ ರಾಶಿ

ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ– ಜೀವನದ ಆನಂದವನ್ನು ಹೀರಿಕೊಳ್ಳುತ್ತದೆ ಹಾಗೂ ನಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ–ಆದ್ದರಿಂದ ಇದು ನಿಮ್ಮನ್ನು ಹೇಡಿಯಾಗಿಸುವ ಮೊದಲು ಅದನ್ನು ಮೊಗ್ಗಿನಲ್ಲೇ ಚಿವುಟಿಹಾಕುವುದು ಒಳ್ಳೆಯದು. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ.

### ಮಿಥುನ ರಾಶಿ

ನಿಮ್ಮ ಮೇಲೆ ಬಹಳಷ್ಟು ಅವಲಂಬಿಸಿರುತ್ತದೆ ಮತ್ತು ನಿರ್ಣಯಗಳನ್ನು ತೆಗೆದುಕೊಳ್ಳಲು ಮಾನಸಿಕ ಸ್ಪಷ್ಟತೆ ಅಗತ್ಯವಾಗಿರುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಮೂರನೇ ವ್ಯಕ್ತಿಯ ಹಸ್ತಕ್ಷೇಪ ನೀವು ಮತ್ತು ನಿಮ್ಮ ಪ್ರೀತಿಪಾತ್ರರಲ್ಲಿ ಕಂದಕ ತರಬಹುದು. ನಿಮ್ಮ ಸಹೋದ್ಯೋಗಿಗಳು ಎಂದಿಗಿಂತಲೂ ಉತ್ತಮವಾಗಿ ನಿಮ್ಮನ್ನು ಅರ್ಥ ಮಾಡಿಕೊಳ್ಳುತ್ತಾರೆ

### ಕರ್ಕ ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ.

### ಸಿಂಹ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ಇಂದು ನೀವು ಒಂದು ಹೃದಯ ಒಡೆಯುವುದನ್ನು ತಪ್ಪಿಸುತ್ತೀರಿ.

### ಕನ್ಯಾ ರಾಶಿ

ಕಣ್ಣಿನ ಪೊರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

### ತುಲಾ ರಾಶಿ

ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ನಿಮ್ಮ ರೆಸ್ಯೂಮ್ ಕಳುಹಿಸಲು ಅಥವಾ ಸಂದರ್ಶನಕ್ಕೆ ಹಾಜರಾಗಲು ಒಳ್ಳೆಯ ದಿನ.

### ವೃಶ್ಚಿಕ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ನಿಮ್ಮ ಪ್ರೀತಿಪಾತ್ರರಿಂದ ಕರೆ ಪಡೆಯುತ್ತೀರಿ ಹಾಗೂ ಇದು ನಿಮಗೆ ರೋಮಾಂಚಕ ದಿನವಾಗಿರುತ್ತದೆ.

### ಧನು ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ಮಕರ ರಾಶಿ

ಆರೋಗ್ಯದ ಆರೈಕೆ ಮಾಡಿಕೊಳ್ಳಬೇಕು. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ. ದೂರು ನೀಡಲು ಯಾವುದೇ ಅವಕಾಶ ನೀಡಬೇಡಿ.

### ಕುಂಭ ರಾಶಿ

ನೀವು ಅತಿಯಾದ ಒತ್ತಡವನ್ನು ಅನುಭವಿಸುತ್ತಿದ್ದೀರೆಂದೆನಿಸಿದರೆ – ಮಕ್ಕಳೊಂದಿಗೆ ಹೆಚ್ಚು ಸಮಯ ಕಳೆಯಿರಿ. ಅವರ ಬೆಚ್ಚಗಿನ ಅಪ್ಪುಗೆ / ಮುದ್ದಾಡುವಿಕೆ ಅಥವಾ ಮುಗ್ಧ ಮುಗುಳ್ನಗೆಯೂ ನಿಮ್ಮ ಸಮಸ್ಯೆಗಳನ್ನು ಮಾಯವಾಗಿಸಬಲ್ಲದು. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಮೀನ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ.

# ಇಂದು 'ಮಾನವತೆಯ ಬೆಳಕು–ಜಗಲೂರು ಮಹಮದ್ ಇಮಾಂ' ಪುಸ್ತಕ ಬಿಡುಗಡೆ

**ದಾವಣಗೆರೆ:** ಜೆ.ಎಂ. ಇಮಾಂ ಟ್ರಸ್ಟ್ ಹಾಗೂ ಜೆ.ಎಂ. ಇಮಾಂ ಸ್ಮಾರಕ ಶಾಲೆ ಜಗಲೂರು ವತಿಯಿಂದ ಇಂದು ಬೆಳಗ್ಗೆ 11 ಗಂಟೆಗೆ ದಾವಣಗೆರೆ ವಿದ್ಯಾನಗರದ ಕುವೆಂಪು ಕನ್ನಡ ಭವನದಲ್ಲಿ 'ಮಾನವತೆಯ ಬೆಳಕು–ಜಗಲೂರು ಮಹಮದ್ ಇಮಾಂ' ಪುಸ್ತಕ ಬಿಡುಗಡೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪುಸ್ತಕ ಸಂಪಾದನಾ ಸಮಿತಿಯ ಪ್ರಧಾನ ಸಂಪಾದಕ ಎನ್.ಟಿ. ಎರ್ರಿಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಡುಗಡೆಗೆ ಸಿದ್ಧವಾಗಿರುವ ಪುಸ್ತಕ ಜೆ.ಎಂ. ಇಮಾಂ ಅವರು ಕುರಿತು ಅನೇಕ ಮಹನೀಯರು ಬರೆದಿರುವ ಸಂಪಾದಿತ ಲೇಖನಗಳ ಸಮಗ್ರ ಕೃತಿಯಾಗಿದೆ. ಒಟ್ಟು 502 ಪುಟಗಳನ್ನು ಹೊಂದಿರುವ ಕೃತಿಯಲ್ಲಿ ಶಾಮನೂರು ಶಿವಶಂಕರಪ್ಪ ಪುಸ್ತಕದ ಪ್ರಥಮ ಪ್ರತಿ ಹಸ್ತಾಂತರ ಮಾಡುವರು. ಕೃತಿ ಕುರಿತು ಕುವೆಂಪು ವಿವಿ ನಿವೃತ್ತ ಪ್ರಾಧ್ಯಾಪಕ ಡಾ. ರಾಜೇಂದ್ರ ಚೆನ್ನಿ ಮಾತನಾಡಲಿದ್ದು, ಇಮಾಂ ಟ್ರಸ್ಟ್ ನ ಗೌರವಾಧ್ಯಕ್ಷ ಹಾಜಿ ಜೆ.ಕೆ. ಹುಸೇನ್ ಮಿಯ್ಯಾ ಸಾಬ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಶಾಸಕರಾದ ಚಿಕ್ಕಮ್ಮನಹಟ್ಟಿ ಬಿ. ದೇವೇಂದ್ರಪ್ಪ, ವಿಧಾನ ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್, ಮಹಾಪೌರರಾದ ಕೆ. ಚಮನ್ ಸಾಬ್ ಹಾಗೂ ರಾಜ್ಯ ಪಿಂಜಾರ/ನದಾಫ್ ಸಂಘದ ಅಧ್ಯಕ್ಷ ಜಲೀಲ್ ಸಾಬ್, ಇಮಾಂ ಅವರು ಪುತ್ರ ಹೆಚ್.ಇ. ದಾದಾ ಖಲಂದರ್ ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.




ಪಾಟೀಲ್ ಪುಟ್ಟಪ್ಪ, ಜಿ.ಪಿ. ರಾಜರತ್ನಂ, ಬಿ.ಡಿ. ಜತ್ತಿ, ವಾಜಪೇಯಿಯವರಂತಹ ಗಣ್ಯರ ಬರಹಗಳಿವೆ. ಇಂದಿನ ಲೇಖಕರಾದ ಜೆ.ಆರ್. ಲಕ್ಷ್ಮಣರಾವ್, ರೆಹಮತ್ ತರೀಕೆರೆ, ರಂಜಾನ್ ದರ್ಗಾ ಸೇರಿದಂತೆ 70 ಜನರ ಲೇಖನಗಳನ್ನು ತನ್ನ ಒಡಲಲ್ಲಿ ತುಂಬಿಕೊಂಡಿದೆ ಎಂದು ವಿವರಿಸಿದರು.

ಫೆ.20 ರಂದು ನಡೆಯುವ ಪುಸ್ತಕ ಬಿಡುಗಡೆ ಸಮಾರಂಭಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಚಾಲನೆ ನೀಡಲಿದ್ದಾರೆ. ಗೌರವಾನ್ವಿತ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಕೃತಿ ಲೋಕಾರ್ಪಣೆ ಮಾಡಲಿದ್ದಾರೆ. ಶಾಸಕ ಡಾ.

ಮತ್ತೊಬ್ಬ ಪ್ರಧಾನ ಸಂಪಾದಕ ಡಾ. ದಾದಾಪೀರ್ ನವಿಲೇಹಾಳ್ ಮಾತನಾಡಿ, ಜೆ.ಎಂ. ಇಮಾಂ ಅವರು ಕಾಲಘಟ್ಟ ಮೌಲ್ಯಾಧಾರಿತ ರಾಜಕಾರಣದ ಕಾಲಘಟ್ಟವಾಗಿತ್ತು. ಅವರ ಆದರ್ಶ, ಮೌಲ್ಯಗಳನ್ನು ಇಂದಿನ ಯುವಜನಾಂಗಕ್ಕೆ ತಲುಪಿಸುವ ಪ್ರಯತ್ನ ಈ ಪುಸ್ತಕ ಬಿಡುಗಡೆಯ ಮೂಲ ಉದ್ದೇಶವಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ, ಪುಸ್ತಕ ಸಂಪಾದನಾ ಸಮಿತಿಯ ಸದಸ್ಯರಾದ ಆರ್. ಖಾಸಿಂ ಸಾಬ್, ಹಿರಿಯರಾದ ಹೆಚ್. ಹಾಲಪ್ಪ ಉಪಸ್ಥಿತರಿದ್ದರು.

# ಆರ್ಥಿಕ ಸಬಲೀಕರಣಕ್ಕೆ ಜೇನು ಸಾಕಾಣಿಕೆ ಸಹಕಾರಿ : ಶೈಲಾ ಎನ್



**ಶಿವಮೊಗ್ಗ:** ಆರ್ಥಿಕ ಸಬಲೀಕರಣಕ್ಕೆ ಜೇನು ಸಾಕಾಣಿಕೆ ಒಂದು ಉತ್ತಮ ಮಾರ್ಗವಾಗಿದ್ದು, ಜೇನು ಸಾಕಾಣಿಕೆ ತರಬೇತಿಯ ಸದುಪಯೋಗ ಪಡೆಯಬೇಕೆಂದು ತೀರ್ಥಹಳ್ಳಿ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಶೈಲಾ ಎನ್ ತಿಳಿಸಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ತಾ.ಪಂ ತೀರ್ಥಹಳ್ಳಿ ಇವರ ಸಂಯುಕ್ತಾಶ್ರಯದಲ್ಲಿ ಐಸಿಎಆರ್, ಟಿಎಸ್ಪಿ ಯೋಜನೆ ?ಕರ್ನಾಟಕದ ಶಿವಮೊಗ್ಗ ಜಿಲ್ಲೆಯಲ್ಲಿ ಜೇನು ಸಾಕಾಣಿಕೆಯ ತಂತ್ರಗಳೊಂದಿಗೆ ಪರಿಶಿಷ್ಟ ಪಂಗಡಗಳ ಸಬಲೀಕರಣ? ಎಂಬ ವಿಷಯದಡಿ ಫೆ.14 ರಿಂದ 16 ರವರೆಗೆ ತೀರ್ಥಹಳ್ಳಿ ಗ್ರಾಮೀಣಾಭಿವೃದ್ಧಿ ಭವನದಲ್ಲಿ ಏರ್ಪಡಿಸಲಾಗಿದ್ದ ಜೇನು ಸಾಕಾಣಿಕೆ ತರಬೇತಿಯ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೇನು ಸಾಕಾಣಿಕೆ ಒಂದು ಉತ್ತಮ ತರಬೇತಿಯಾಗಿದೆ. ಪ್ರಾರಂಭದಲ್ಲಿ ಸಣ್ಣ ಪ್ರಮಾಣದಲ್ಲಿ ಸಾಕಾಣಿಕೆ ಕೈಗೊಂಡು ನಂತರ ಹಲವಾರು ಪೆಟ್ಟಿಗೆಗಳನ್ನು ಇಟ್ಟು ದೊಡ್ಡ ಪ್ರಮಾಣದಲ್ಲಿ ಮಾಡಿ ಕುಟುಂಬದ, ಸಮಾಜದ ಹಾಗೂ ದೇಶದ ಅಭಿವೃದ್ಧಿಗೆ ಕಾರಣರಾಗುವಂತೆ ಕರೆ ನೀಡಿದರು.

ಆರ್ಥಿಕ ಸಬಲೀಕರಣಕ್ಕೆ ಈ ತರಬೇತಿಯು ಸಹಕಾರಿಯಾಗಿದ್ದು ಆಸಕ್ತರೆಲ್ಲ ಈ ತರಬೇತಿಯ ಪ್ರಯೋಜನ ಪಡೆದುಕೊಂಡು ತಮ್ಮ ಜೀವನ ಸುಧಾರಿಸಿಕೊಳ್ಳುವಂತೆ ಸಲಹೆ ನೀಡಿದರು.

ಇದೇ ವೇಳೆ ಶಿಬಿರಾರ್ಥಿಗಳಿಗೆ ತರಬೇತಿ ಪ್ರಮಾಣ ಪತ್ರದೊಂದಿಗೆ ಜೇನು ಸಾಕಾಣಿಕೆಗೆ ಅಗತ್ಯವಾದ ಪರಿಕರಗಳನ್ನು ವಿತರಣೆ ಮಾಡಲಾಯಿತು.

ನೋಡಲ್ ಅಧಿಕಾರಿ ಹಾಗೂ ಪ್ರಧಾನ ಪರಿಶೋಧಕರಾದ ಡಾ.ಜಯಲಕ್ಷ್ಮಿ?ಮ ನಾರಾಯಣ ಹೆಗಡೆ ಕಾರ್ಯಕ್ರಮ ನಿರ್ವಹಿಸಿ, ಮೂರು ದಿನಗಳ ಕಾಲ ನಡೆದ ತರಬೇತಿಯ ಕುರಿತು ವಿವರಣೆ ನೀಡಿದರು. ವಿಘ್ನೇಶ ತಲಕಾಲಕೊಪ್ಪ, ಪ್ರತೀಕ್ ಇತರರು ಹಾಜರಿದ್ದರು. ತೀರ್ಥಹಳ್ಳಿ ತಾಲ್ಲೂಕಿನ ಸುತ್ತಮುತ್ತಲಿನ ಪರಿಶಿಷ್ಟ ಪಂಗಡಗಳ 30 ರೈತ ಮಹಿಳೆಯರು, ರೈತರು, ಯುವಕ ಯುವತಿಯರು ಭಾಗವಹಿಸಿದ್ದರು.

# ಕುಟುಂಬದೊಂದಿಗೆ ಉತ್ತಮ ಭಾಂದವ್ಯ ವೃದ್ಧಿಸಿಕೊಳ್ಳಬೇಕು : ಜಿಲ್ಲಾಧಿಕಾರಿ ಸತ್ಯಭಾಮ

**ಹಾಸನ :** ಕುಟುಂಬದೊಂದಿಗೆ ಉತ್ತಮ ಭಾಂದವ್ಯ ವೃದ್ಧಿಸಿಕೊಂಡು, ಹೊಂದಾಣಿಕೆಯಿಂದಿರಬೇಕು, ಆದರೆ ಇಂದಿನ ದಿನಮಾನಗಳಲ್ಲಿ ಸಣ್ಣ ಸಣ್ಣ ಮನಸ್ತಾಪದಿಂದ ಹೊಂದಾಣಿಕೆ ಇಲ್ಲದೆ ಕೌಟುಂಬಿಕ ದೌರ್ಜನ್ಯಗಳು ನಡೆಯುತ್ತಿವೆ ಎಂದು ಜಿಲ್ಲಾಧಿಕಾರಿ ಸತ್ಯಭಾಮ ಹೇಳಿದ್ದಾರೆ.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೋಲಿಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಇವರ ಸಂಯುಕ್ತಾಶ್ರಯದಲ್ಲಿ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿಂದು ಆಯೋಜಿಸಿದ್ದ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ –2005 ಅನು?ಾನ ಕುರಿತು ಒರಿಯೆಂಟೇ?ನ್ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಹಿಂದಿನ ಕಾಲದಲ್ಲಿ ವಿಚ್ಛೇದನ ಬಹಳ ಕಡಿಮೆ ಇರುತ್ತಿದ್ದವು ಆದರೆ ಪ್ರಸ್ತುತ ದಿನಮಾನಗಳಲ್ಲಿ ಪಾಶ್ಚತ್ಯರಿಗಿಂತ ಹೆಚ್ಚಾಗುತ್ತಿದೆ ಎಂದರು.

ತಂದೆ ತಾಯಿ ಹುಡುಕಿದ ವಧು ವರನನ್ನು ವಿವಾಹವಾಗಬೇಕು, ಅವರು ಹುಡುಕಿದ ವಧು–ವರರ ಕುರಿತು ನಕರಾತ್ಮಕ ಆಲೋಚನೆಯನ್ನು ಮಾಡಬಾರದು, ವಿವಾಹವೆಂಬುದು ಕೇವಲ ಇಬ್ಬರು ವ್ಯಕ್ತಿಗಳು ಆಗುವುದು ಅಲ್ಲ ಎರಡು ಕುಟುಂಬಗಳು, ಅವರ ಆಚಾರ ವಿಚಾರಗಳು ಸಮ್ಮಿಲನವಾಗುವಂತಹದ್ದಾಗಿದೆ ಎಂದು ತಿಳಿಸಿದರು.

ಹೆಣ್ಣು ಮಕ್ಕಳು ಸ್ವಭಾವತಃ ಶಕ್ತಿವಂತರೆ ಆದರೆ ಕೆಲವು ಮಹಿಳೆಯರು ಬಲಹೀನರಿದ್ದಾರೆ ಅವರ ಸಬಲೀಕರಣಕ್ಕಾಗಿ ಈ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಇದರ ಕುರಿತು ಸಾರ್ವಜನಿಕರಿಗೆ ಹಾಗೂ ದೌರ್ಜನ್ಯ, ಹಿಂಸೆ ಅನುಭವಿಸುತ್ತಿರುವವರಿಗೆ ಹೊಂದಾಣಿಕೆಯಿಂದ ಸಂಬಂಧ ವೃದ್ಧಿಸಿಕೊಳ್ಳಲು ತಿಳಿಹೇಳಿ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಬಿ.ಕೆ ಮಾತನಾಡಿ ಹೆಣ್ಣು ಅಬಲೆ ಅಲ್ಲ, ಸಬಲಳಾಗಿದ್ದಾಳೆ ಆರ್ಥಿಕವಾಗಿಯೂ ಸ್ವಾತಂತ್ರ್ಯಳಾಗಿದ್ದಾಳೆ, ಕುಟುಂಬದಲ್ಲಿ ಹಿರಿಯರ ಅನುಭವದ ಮಾತುಗಳನ್ನು ಕೇಳಿ ಅದರಂತೆ ನಡೆದುಕೊಂಡರೆ ಕೋರ್ಟ್‌ಗಳಿಗೆ ಹೋಗುವುದನ್ನು ತಪ್ಪಿಸಬಹುದು, ಹಿಂದೆ ಅವಿಭಕ್ತ ಕುಟುಂಬಗಳಿದ್ದವು ಆದರೆ ಇಂದು ವಿಭಕ್ತ ಕುಟುಂಬಗಳಾಗಿ ಮಾರ್ಪಡುತ್ತಿವೆ, ಕೌಟುಂಬಿಕ ಹಿಂಸೆ ಎಂಬುದು ನಾಲ್ಕು ಗೋಡೆಗಳ ಮದ್ಯೆ ನಡೆಯುವಂತಹದ್ದಾಗಿದೆ, ಗಂಡು ಮಕ್ಕಳಿಗೂ ದೌರ್ಜನ್ಯಗಳಾಗುತ್ತಿವೆ ಆದರೆ ಅವರು ತಮ್ಮ ಘನತೆ ಗೌರವದ ನಿಮಿತ್ತ ವ್ಯಕ್ತಪಡಿಸುತ್ತಿಲ್ಲ, ಇಂದು ವಿಚ್ಛೇದನ ಎಂಬುದು ಸಾಮಾನ್ಯವಾಗಿದೆ, ಸಾರ್ವಜನಿಕರಿಗೆ ಇದರ ಕುರಿತು ಅರಿವು ಮೂಡಿಸಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್ ಪೂರ್ಣಿಮ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಡಿ.ಟಿ ಪ್ರಸನ್ನ, ಪ್ರೇರಣಾ ವಿಕಾಸ ವೇದಿಕೆಯ ರೂಪ ಹಾಸನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಧರಣಿ ಕುಮಾರ್ ಎಮ್.ಆರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಜೋತಿ ಲಕ್ಷ್ಮೀ ಕೆ.ಸಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ರಾಜ್ಯ ಮಟ್ಟದ ಯುವಜನೋತ್ಸವ

# ಗಾಂಧೀಜಿಯವರ ಮೂಲ ಕೃತಿಗಳ ಅನುವಾದಿತ ಪುಸ್ತಕಗಳ ಬಿಡುಗಡೆ ಸಮಾರಂಭ

ಗದಗ(ಕರ್ನಾಟಕ ವಾರ್ತೆ) ಫೆಬ್ರುವರಿ 18:ಯುವಕರು ಗಾಂಧಿಯವರ ವಿಚಾರಗಳನ್ನು ಅಳವಡಿಸಿಕೊಂಡು ದೇಶದ ಪರಿವರ್ತನೆಯ ಕಡೆಗೆ ಶ್ರಮಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ತಿಳಿಸಿದರು.

ನಗರದ ಆರ್ ಡಿ ಪಿ ಆರ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಕ್ಯಾಂಪಸ್ ನಲ್ಲಿ ಮಂಗಳವಾರ ರಾಜ್ಯ ಎನ್.ಎಸ್.ಎಸ್ ಕೋಶ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆ ಸಹಯೋಗದಲ್ಲಿ 2024–25 ನೇ ಸಾಲಿನ ರಾಜ್ಯಮಟ್ಟದ ಯುವಜನೋತ್ಸವ ಹಾಗೂ ಗಾಂಧೀಜಿಯವರ ಮೂಲ ಕೃತಿಗಳ ಅನುವಾದಿತ ಪುಸ್ತಕಗಳ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆ ಸಂಗೀತ ಸಾಂಸ್ಕೃತಿಕ ಸೇರಿದಂತೆ ಎಲ್ಲಾ ರಂಗಗಳಲ್ಲಿ ತನ್ನ ಛಾಪನ್ನು ಮೂಡಿಸಿದೆ. ಜಿಲ್ಲೆಯ ಕಣಗಿನಹಾಳ ಗ್ರಾಮದಲ್ಲಿ ಸಹಕಾರ ಚಳುವಳಿಯ ಪರಿಕಲ್ಪನೆ ಹೊಂದಿ ಉದಯವಾಗಿದೆ. ದೇಶದಲ್ಲಿ ಸ್ವಾತಂತ್ರ ಹೋರಾಟ ನಿರ್ಮಾಣ ಮಾಡುವಲ್ಲಿ ಮುಂಬೈ ಪ್ರಾಂತ್ಯದಲ್ಲಿಯೇ ಗದದ ಜಿಲ್ಲೆಯು ಅತ್ಯಂತ ಉತ್ಸಾಹದಿಂದ ಭಾಗವಹಿಸಿದ್ದು ಈ ಹಿಂದೆ ಕರ್ನಾಟಕ ರಾಜ್ಯ ಪ್ರದೇಶ ಕಾಂಗ್ರೆಸ್ ಕೇಂದ್ರ ಕಚೇರಿಯು ಗದಗನಲ್ಲಿ ನಾವೆಲ್ಲರೂ ಮರೆಯುವಂತಿಲ್ಲ. ಕನ್ನಡ ಸಾಹಿತ್ಯಕ್ಕೆ ಅಗಾಧವಾದ ಕೊಡುಗೆಯನ್ನು ನೀಡಿರುವಂತಹ ಪಂಪ ರನ್ನ ಕುಮಾರವ್ಯಾಸ ಅತ್ತಿಮಬ್ಬೆ ಚಾಮರಸ ದುರ್ಗಸಿಂಹ ಅಬ್ಬಯಕ್ಕ ನಯಸೇನ ಇವರೆಲ್ಲರೂ ಗದಗ ಜಿಲ್ಲೆಯ ಕೊಡುಗೆ ಎಂಬುದು ನಮ್ಮೆಲ್ಲರಿಗೂ ತಿಳಿದಿರುವ ವಿಷಯವಾಗಿದೆ. ಈಗಿನ ಆಧುನಿಕ ಸಾಹಿತ್ಯದಲ್ಲಿ ಆರ್‌ಸಿ ಹಿರೇಮಠ್ ಚನ್ನವೀರ್ ಕಣವಿ,ಗಿರಡ್ಡಿ ಗೋವಿಂದರಾಜು ಸೋಮಶೇಖರ್ ಇಮ್ರಾಪುರ್,ಅಂದಾನಪ್ಪ ಮೇಟಿ ಹೀಗೆ ಹಲವರ ಕೊಡುಗೆ ಅಪಾರವಾದದ್ದಾಗಿದೆ ಎಂದರು.




ದಿನದಿಂದ ದಿನಕ್ಕೆ ಗ್ರಾಮೀಣ ವ್ಯವಸ್ಥೆಯ ಆರ್ಥಿಕತೆ ಸೊರಗುತ್ತಿದೆ. ಹಳ್ಳಿಗಳಲ್ಲಿ ಎತ್ತುಗಳ ಸಂಖ್ಯೆ ಕಡಿಮೆಯಾಗುತ್ತಿದೆ. ವ್ಯವಸಾಯ ಮಾಡುವ ಯುವಕರ ಸಂಖ್ಯೆ ಕಡಿಮೆಯಾಗುತ್ತಿದೆ. ಇದು ಎಲ್ಲರಿಗೂ ಆತಂಕ ತರುವ ವಿಷಯ. ಗಾಂಧಿಜಿಯವರ ಕನಸಿನಂತೆ ಗ್ರಾಮದ ಅಭಿವೃದ್ಧಿ ದೇಶದ ಅಭಿವೃದ್ಧಿಯಾಗಿದೆ. ಯುವಕರು ಕೆಲಸವನ್ನ ಆರಿಸಿ ನಗರಕ್ಕೆ ಹೋಗುತ್ತಿದ್ದಾರೆ ಇದರ ಬಗ್ಗೆ ಗಂಭೀರವಾದ ಚಿಂತನೆ ನಡೆಯಬೇಕಿದೆ ಎಂದರು.

ವಿದ್ಯಾರ್ಥಿಯ ಅಂಗೈಯಲ್ಲಿ ಇಡೀ ಪ್ರಪಂಚದ ಮಾಹಿತಿ ಇದೆ ಹಾಗಾಗಿ ಒಂದು ವಿಷಯದ ಕುರಿತು ಶ್ರದ್ಧೆಯನ್ನು ಬಿಟ್ಟು ಆ ಕ್ಷೇತ್ರದಲ್ಲಿ ಸಾಧನೆ ಮಾಡಬೇಕೆಂದು ಶಿಸ್ತಿನಿಂದ ಕ್ರಮವಹಿಸಿದಾಗ ಎಂತಹ ಕೆಲಸವು ಅಸಾಧ್ಯ ವಾಗದು ಹಾಗಾಗಿ ಆ ನಿಟ್ಟಿನೊಳಗಡೆ ಎಲ್ಲರೂ ಕೆಲಸ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕುಲಪತಿ (ಪ್ರ) ಕುಲಸಚಿವರಾದ ಪ್ರೊ.ಡಾ.ಸುರೇಶ ನಾಡಗೌಡರ,ಡಿ ಜೀವನಕುಮಾರ, ಡಾ.ಮೀನಾ ದೇಶಪಾಂಡೆ, ಪ್ರಶಾಂತ ಮೇರವಾಡೆ,ಡಾ.ಅಬ್ದುಲ್ ಮುಲ್ಲಾ ಸೇರಿದಂತೆ ಎನ್.ಸಿಸಿ ಎನ್ ಎಸ್ ಎಸ್ ವಿಶ್ವ ವಿದ್ಯಾಲಯದ ವಿದ್ಯಾರ್ಥಿಗಳು ಹಾಜರಿದ್ದರು.

ಕಾರ್ಯಕ್ರಮವನ್ನು ಪ್ರಕಾಶ ಮಾಚೇನಹಳ್ಳಿ ನಿರ್ವಹಿಸಿದರು.

## ಅರ್ಜಿ ಆಹ್ವಾನ

**ದಾವಣಗೆರೆ :** ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ವಿವಿಧ ನಿಗಮ, ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು, ಕಾರ್ಮಿಕರಿಗೆ ವೇತನ ಪಾವತಿ ಮತ್ತು ಕಾನೂನಾತ್ಮಕವಾಗಿ ನೀಡಬೇಕಾದ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ದಾವಣಗೆರೆ ಜಿಲ್ಲಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿಗಮವನ್ನು ನೂತನವಾಗಿ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ.ಈಗಾಗಲೇ ವಿವಿಧ ಸಂಸ್ಥೆಗಳ ಮೂಲಕ ಹೊರಗುತ್ತಿಗೆಯಡಿ ಟೆಂಡರ್ ಮೂಲಕ ಸೇವೆಯನ್ನು ಸಲ್ಲಿಸಲಾಗುತ್ತಿದ್ದು ಈ ಎಲ್ಲಾ ಹೊರಗುತ್ತಿಗೆ ನೌಕರರು ಇನ್ನು ಮುಂದೆ ದಾವಣಗೆರೆ ಜಿಲ್ಲಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘದಡಿಯಲ್ಲಿ ಕೆಲಸ ನಿರ್ವಹಿಸುವರು. ಈ ನೌಕರರಿಗೆ ಜಿಲ್ಲಾ ಸಂಘದಿಂದಲೇ ನೇರವಾಗಿ ವೇತನ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಹೊರಗುತ್ತಿಗೆ ನೌಕರರು ಈ ಸಹಕಾರ ಸಂಘದ ಸದಸ್ಯರಾಗಿರುವರು. ಆದ್ದರಿಂದ ಹೊರಗುತ್ತಿಗೆ ನೌಕರ ಸಿಬ್ಬಂದಿಯವರು ಸಂಘದ ಸದಸ್ಯತ್ವ ಪಡೆಯಬಹುದಾಗಿದ್ದು ತಮ್ಮ ಇಲಾಖೆ ಮುಖ್ಯಸ್ಥರುಗಳಿಂದ ಅರ್ಜಿ ಪಡೆದು ನೊಂದಣಿ ಮಾಡಿಕೊಳ್ಳಲು ತಿಳಿಸಿದ್ದಾರೆ.

## ಜೀವಿತ ಪ್ರಮಾಣ ಪತ್ರ ಸಲ್ಲಿಕೆ

**ದಾವಣಗೆರೆ:** ಕಾರ್ಮಿಕರ ಭವಿಷ್ಯ ನಿಧಿ ಸಂಘನೆಯ ಪಿಂಚಣಿ ಯೋಜನೆಯಡಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಪಿಂಚಣಿದಾರರು ಪಿಂಚಣಿ ಪಡೆಯುತ್ತಿದ್ದು ಇದರಲ್ಲಿ 5577 ಪಿಂಚಣಿದಾರರು ಇದುವರೆಗೆ ತಮ್ಮ ಜೀವಿತ ಪ್ರಮಾಣ ಪತ್ರವನ್ನು ಸಲ್ಲಿಸಿರುವುದಿಲ್ಲ. ಪಿಂಚಣಿದಾರರು ಜೀವಿತ ಪ್ರಮಾಣಪತ್ರವನ್ನು ಅಂಚೆ ಕಚೇರಿಯಲ್ಲಿ ಅಥವಾ ಬ್ಯಾಂಕ್ನಲ್ಲಿ ಸಲ್ಲಿಸಬಹುದು. ಅಥವಾ ತಮ್ಮ ಆಂಡ್ರಾಯ್ಡ್ ಮೊಬೈಲ್ ಫೋನ್ ಮೂಲಕ ಫೇಸ್ ಅಂಥೆಂಟಿಕೇಶನ್ ಟೆಕ್ನಾಲಜಿಯನ್ನು ಅಳವಡಿಸಿಕೊಂಡು ಜೀವಿತ ಪ್ರಮಾಣಪತ್ರವನ್ನು ಸಲ್ಲಿಸಬಹುದೆಂದು ಕ್ಷೇತ್ರಿಯ ಭವಿಷ್ಯನಿಧಿ ಆಯುಕ್ತರು ತಿಳಿಸಿದ್ದಾರೆ.

## ಛತ್ರಪತಿ ಶಿವಾಜಿ ಮತ್ತು ಸಂತ ಕವಿ ಸರ್ವಜ್ಞ ಜಯಂತಿ

**ದಾವಣಗೆರೆ:** ಜಿಲ್ಲಾಡಳಿತ ವತಿಯಿಂದ ಫೆಬ್ರವರಿ 19 ರಂದು ಛತ್ರಪತಿ ಶಿವಾಜಿ ಜಯಂತಿ ಹಾಗೂ ಫೆಬ್ರವರಿ 20 ರಂದು ಸಂತ ಕವಿ ಸರ್ವಜ್ಞ ಜಯಂತಿಯನ್ನು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

## ಗ್ರಾಮೀಣ ಅಂಚೆ ಸೇವಕರ ನೇಮಕಾತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಅಂಚೆ ಇಲಾಖೆಯಲ್ಲಿ ಗ್ರಾಮೀಣ ಅಂಚೆ ಸೇವಕರ ನೇಮಕಾತಿ ಸಂಬಂಧ ಇಲಾಖೆಯಲ್ಲಿ ಖಾಲಿ ಇರುವ ಶಾಖಾ ಅಂಚೆ ಪಾಲಕ, ಸಹಾಯಕ ಶಾಖಾ ಅಂಚೆ ಪಾಲಕ ಮತ್ತು ಡಾಕ್ ಸೇವಕ್ ಹುದ್ದೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೆಬ್ಸೈಟ್ www.indiapostgdsonline.gov.in ನಲ್ಲಿ ಮಾರ್ಚ್ 3 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಎಲ್ಲಾ ಹುದ್ದೆಗಳಿಗೆ 10ನೇ ತರಗತಿ ತೇರ್ಗಡೆ ಕಡ್ಡಾಯ, ಇಂಗ್ಲೀಷ್ ಮತ್ತು ಗಣಿತದಲ್ಲಿ ಉತ್ತೀರ್ಣ ಅಂಕಗಳೊಂದಿಗೆ 10ನೇ ತರಗತಿಯಲ್ಲಿ, ಕನ್ನಡವನ್ನು ಒಂದು ಭಾಗಿಯಾಗಿ ಅಧ್ಯಯನ ಮಾಡಿರಬೇಕು. 18 ರಿಂದ 40 ವರ್ಷ ವಯೋಮಾನದವರಾಗಿರಬೇಕು. ಹೆಚ್ಚಿನ ಮಾಹಿಗಾಗಿ ಸಮೀಪದ ಯಾವುದೇ ಅಂಚೆ ಕಚೇರಿಯನ್ನು ಅಥವಾ ಮೇಲೆ ತಿಳಿಸಿದ ವೆಬ್ಸೈಟ್ ಲಿಂಕ್ನ್ನು ಸಂಪರ್ಕಿಸಲು ಅಂಚೆ ಅಧೀಕ್ಷರು ತಿಳಿಸಿದ್ದಾರೆ.

## ಎತ್ತಿನಗಾಡಿ ಹಾಗೂ ಕುದುರೆಗಾಡಿಗಳಿಗೆ ಪ್ರಾಣಿಗಳನ್ನು ಕಟ್ಟಿ ಹಿಂಸೆ ಮಾಡುತ್ತಿರುವುದನ್ನು ತಡೆಗಟ್ಟುವ ಕುರಿತು

**ಗದಗ :** ಸಂಪ್ರದಾಯದ ಪ್ರಕಾರ ಪ್ರತಿ ವರ್ಷವು ವಿವಿಧ ಗ್ರಾಮಗಳಲ್ಲಿ ಹಾಗೂ ಪಟ್ಟಣಗಳಲಿ ಜಾತ್ರಾ ಮಹೋತ್ಸವಗಳು ನಡೆಯುವುದ ಸರ್ವೆ ಸಾಮಾನ್ಯವಾಗಿವೆ. ಆದರೆ ಜಾತ್ರಾ ಮಹೋತ್ಸವಕ್ಕೆ ತೆರಳುವ ಭಕ್ತಾದಿಗಳು ಅಧಿಕ ಸಂಖ್ಯೆಯಲ್ಲಿ ಎತ್ತಿನ ಗಾಡಿ/ ಎತ್ತಿನಬಂಡಿ ಹಾಗೂ ಕುದುರೆ ಗಾಡಿಗಳನ್ನು ತೆಗೆದುಕೊಂಡು ಜಾತ್ರೆಗೆ ಹೋಗುವುದು ಸಾಮಾನ್ಯವಾಗಿದೆ. ಆದರೆ ಈ ಎತ್ತಿನಗಾಡಿ/ ಎತ್ತಿನಬಂಡಿ ಹಾಗೂ ಕುದುರೆಗಾಡಿಗೆ ಕಟ್ಟಿರುವ ಎತ್ತು, ಕುದುರೆ ಹಾಗೂ ಬೇರೆ ಬೇರೆ ಪ್ರಾಣಿಗಳನ್ನು ಜೋಡಿ ಮಾಡಿ ಕಟ್ಟಿಕೊಂಡು ಮದ್ದು ಬರುವ ಔಷಧ ನೀಡಿ ಅವುಗಳಿಗೆ ಮನಬಂದಂತೆ ಹೊಡೆಯುತ್ತಾ ರಸ್ತೆಯಲ್ಲಿ ಓಡಾಡಿಸುತ್ತಾ ಹಾಗೂ ಅವುಗಳೊಂದಿಗೆ ಮೋಜು/ ಮಸ್ತಿ ಮಾಡುತ್ತಾ ಮತ್ತು ಸಾರ್ವಜನಿಕರಿಗೆ ತೊಂದರೆ ಉಂಟುಮಾಡುತ್ತಾ ಜನನಿಬಿಡ ಪ್ರದೇಶದಲ್ಲಿ ಪ್ರಾಣಿಗಳನ್ನು ಸ್ಪರ್ಧೆಯ ರೀತಿಯಲ್ಲಿ ಅಟ್ಟಾಡಿಸಿಕೊಂಡು ಹೋಗುವುದರ ಮೂಲಕ ಪ್ರಾಣಿಗಳಿಗೆ ಹಿಂಸೆ ಮಾಡುವುದು ಕಂಡುಬಂದಿರುತ್ತದೆ. ಈ ರೀತಿ ಮಾಡುವವರ ವಿರುದ್ಧ ಭಾರತೀಯ ದಂಡ ಸಂಹಿತೆ ಮತ್ತು ಪ್ರಾಣಿಗಳ ಮೇಲಿನ ಕ್ರೌರ್ಯ ತಡೆ ಕಾಯಿದೆ 1960 ಸೆಕ್ಷನ್ 11 (1) ಹಾಗೂ ಭಾರತೀಯ ನ್ಯಾಯ ಸಂಹಿತೆ –2023 , 285, 291 ಹಾಗೂ 325 ನೇದರ ಪ್ರಕಾರ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ನರಗುಂದ ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರೋ ದರ ಏರಿಕೆ: ಬೊಟ್ಟು ಮಾಡುವುದು ಬಿಟ್ಟು, ಕೇಂದ್ರದ ಮೇಲೆ ಒತ್ತಡ ಹೇರಿ; ರಾಜ್ಯ ಸರ್ಕಾರಕ್ಕೆ ಸದಾನಂದಗೌಡ ಆಗ್ರಹ

**ಮೈಸೂರು:** ಮೆಟ್ರೋ ದರ ಏರಿಕೆ ವಿಚಾರದಲ್ಲಿ ಕೇಂದ್ರ ಸರ್ಕಾರದ ಮೇಲೆ ಬೊಟ್ಟು ಮಾಡುವುದನ್ನು ಬಿಡಿ ಎಂದು ರಾಜ್ಯ ಸರ್ಕಾರದ ವಿರುದ್ಧ ಮಾಜಿ ಸಚಿವ ಡಿವಿ ಸದಾನಂದಗೌಡ ಅವರು ಬುಧವಾರ ವಾಗ್ದಾಳಿ ನಡೆಸಿದ್ದಾರೆ.ಟಿ ನರಸೀಪುರದ ತ್ರಿವೇಣಿ ಸಂಗಮದಲ್ಲಿ ಮಾತನಾಡಿದ ಅವರು, ಮೆಟ್ರೋ ದರ ಏರಿಕೆ ಸಂಬಂಧ ರಾಜ್ಯ ಸರ್ಕಾರ ವಿಶೇಷ ಒತ್ತಡ ಹಾಕುವುದು ಪ್ರಥಮ ಜವಾಬ್ದಾರಿ. ಕೇಂದ್ರದ ಮೇಲೆ ಬೊಟ್ಟು ಮಾಡುವುದನ್ನು ಬಿಡಿ. ಮೆಟ್ರೋ ದರ ಕಡಿಮೆ ಆಗಬೇಕು. ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು. ರಾಜ್ಯ ಸರಕಾರ ಮೊದಲು ಒತ್ತಡ ಹಾಕಬೇಕು. ರಾಜ್ಯ ಸರ್ಕಾರ ಕರೆದರೆ ಕೇಂದ್ರದ ಬಳಿಗೆ ನಾವೂ ಜೊತೆಯಾಗಿ ಹೋಗುತ್ತೇವೆಂದು ಹೇಳಿದರು.ಉದಯಗಿರಿ ಪ್ರಕರಣ ಕುರಿತು ಪ್ರತಿಕ್ರಿಯಿಸಿ, ಯಾವಾಗ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬರುತ್ತದೆಯೋ ಆಗೆಲ್ಲಾ ಒಂದು ಕೋಮಿನ ಜನರು ಕಾನೂನನ್ನು ಕೈಗೆತ್ತಿಕೊಳ್ಳುತ್ತಾರೆ. ಪರಮೇಶ್ವರ್'ಗೆ ಕಾನೂನು ಸುವ್ಯವಸ್ಥೆ ನಿಭಾಯಿಸಲು ಬರುತ್ತಿಲ್ಲ. ಸಿಎಂ ತಲೆಯಲ್ಲಿ ಬರೀ ಮುಡಾ ತುಂಬಿದೆ. ಸಿದ್ದರಾಮಯ್ಯ ಹೆಸರಿನಲ್ಲಿ ಇರುವ ಸಿದ್ದ ಎಂಬುದನ್ನು ತೆಗೆಯಬೇಕಾದ ಸ್ಥಿತಿ ಬಂದಿದೆ. ಆ ಮಟ್ಟಕ್ಕೆ ಸಿದ್ದರಾಮಯ್ಯ ಎರಡನೇ ಬಾರಿ ಸಿಎಂ ಆದಾಗ ಬದಲಾಗಿದ್ದಾರೆ.ಪರಮೇಶ್ವರ್ ಕೇವಲ ಕುರ್ಚಿಗೆ ಅಂಟಿಕೊಂಡು ಕುಳಿತಿದ್ದಾರೆ. ರಾಜಣ್ಣ, ಜಾರಕಿಹೊಳಿ, ಪರಮೇಶ್ವರ್ ಯಾರು ಮಂತ್ರಿ ಕೆಲಸ ಮಾಡುತ್ತಿಲ್ಲ. ಬರೀ ಓಲೈಕೆ ರಾಜಕಾರಣ ಮಾಡುತ್ತಿದ್ದಾರೆ. ಇದು ಅತ್ಯಂತ ಭ್ರಷ್ಟ ಸರ್ಕಾರ. ಎರಡು ಕಡೆ ಪುಣ್ಯಸ್ನಾನ ಮಾಡಿ ಡಿ ಕೆ ಶಿವಕುಮಾರ್ ಅವರ ಪಾಪ ಸ್ವಲ್ಪ ಪರಿಹಾರ ಆಗಿರಬಹುದು. ಸ್ವ–ಯಂಕೃತ ಅಪರಾಧದಿಂದ ಸಿದ್ದರಾಮಯ್ಯ ಕೆಳಗೆ ಇಳಿಯುತ್ತಾರೆ. ಹೈಕಮಾಂಡ್ ಬೆಂಬಲದಿಂದಷ್ಟೇ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗಬಹುದು ಎಂದು ತಿಳಿಸಿದರು.ಬಿಜೆಪಿಯಲ್ಲಿ ಆಂತರಿಕ ಕಚ್ಚಾಟ ವಿಚಾರ ಕುರಿತು ಪ್ರತಿಕ್ರಿಯಿಸಿ, ನನ್ನ ಪಕ್ಷಕ್ಕೆ ಈ ಪರಿಸ್ಥಿತಿ ಬರಬಾರದಿತ್ತು. ನಮ್ಮಲ್ಲಿ ಆಂತರಿಕ ಅವ್ಯವಸ್ಥೆ ಇದೆ. ನಮ್ಮ ಪಕ್ಷ ರಾಜ್ಯದಲ್ಲಿ ದಯಾನೀಯ ಸ್ಥಿತಿಯಲ್ಲಿದೆ. ಹೈಕಮಾಂಡ್ ಮಧ್ಯ ಪ್ರವೇಶಿಸಬೇಕು. ಸಾಕು ಇನ್ನೂ ಈ ಮೌನ. ನಮ್ಮ ಜಗಳ ಹೆಚ್ಚಾಗಿದ್ದು, ಕಾಂಗ್ರೆಸ್‌ಗೆ ಸ್ವಲ್ಪ ಪ್ಲಸ್ ಪಾಯಿಂಟ್ ಆಗಿದೆ. ಒಂದು ವಾರ ಕಾಯಿರಿ. ಎಲ್ಲಾ ಸರಿ ಆಗುತ್ತದೆ ಎಂದರು.

## ಮೋದಿಗೆ ಅಮೆರಿಕದ ಆಹ್ವಾನವೇ ಇರಲಿಲ್ಲ, ಜೈಶಂಕರ್ ಹೋಗಿ ವ್ಯವಸ್ಥೆ ಮಾಡಿಸಿದ್ದಾರೆ: ಖರ್ಗೆ

**ಕಲಬುರಗಿ:** ಅಮೆರಿಕದಿಂದ ಗಡಿಪಾರು ಮಾಡಲಾದ ಭಾರತೀಯ ವಲಸಿಗರೊಂದಿಗೆ ಅಮೆರಿಕ ಅಮಾನವೀಯವಾಗಿ ನಡೆದುಕೊಂಡ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನಿ ನರೇಂದ್ರ ಮೋದಿ ತಮ್ಮ 'ಹಳೆಯ ಸ್ನೇಹಿತ' ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಕರೆ ಮಾಡಿ, ಭಾರತೀಯರನ್ನು ಈ ರೀತಿ ವಾಪಸ್ ಕಳುಹಿಸಬೇಡಿ ಎಂದು ಹೇಳಬೇಕಿತ್ತು ಎಂದು ಬುಧವಾರ ಹೇಳಿದ್ದಾರೆ.ಪ್ರಧಾನಿ ಮೋದಿ ಅವರು ಬುಧವಾರದಿಂದ ಎರಡು ದಿನಗಳ ಕಾಲ ಅಮೆರಿಕಕ್ಕೆ ಅಧಿಕೃತ ಭೇಟಿ ನೀಡಲಿದ್ದು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ."ಮೋದಿಗೆ ಆರಂಭದಲ್ಲಿ ಅಮೆರಿಕಕ್ಕೆ ಆಹ್ವಾನ ಬಂದಿರಲಿಲ್ಲ. ಆದರೆ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅಮೆರಿಕಕ್ಕೆ ಹೋಗಿ ವ್ಯವಸ್ಥೆ ಮಾಡಿದ್ದಾರೆ. ಅನಂತರವೇ ಮೋದಿಗೆ ಆಹ್ವಾನ ಬಂದಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.ಮೋದಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ನನ್ನ ಆತ್ಮೀಯ ಸ್ನೇಹಿತ ಎನ್ನುತ್ತಾರೆ. ಸ್ನೇಹಿತನಾಗಿದ್ದರೆ ಭಾರತೀಯರನ್ನು ಸರಕು ಸಾಗಿಸುವ ವಿಮಾನದಲ್ಲಿ ಕಳುಹಿಸುತ್ತಿರಲಿಲ್ಲ. ಅವರಿಗೆ ಕೊನೆಯ ಪಕ್ಷ ನಾಗರಿಕ ವಿಮಾನವನ್ನು ಮಾಡಿಕೊಡಬೇಕಿತ್ತು ಅಥವಾ ನಮ್ಮ ವಿಮಾನವು ಅಲ್ಲಿಗೆ ತಲುಪುವವರೆಗೂ ಕಾಯಬೇಕಿತ್ತು ಎಂದರು.ಭಾರತೀಯ ವಲಸಿಗರನ್ನು ಸರಕು ವಿಮಾನದಲ್ಲಿ ಭಾರತಕ್ಕೆ ಮರಳಿ ಕರೆತಂದು "ಕಸಕ್ಕಿಂತ ಕೆಟ್ಟದಾಗಿ ನಡೆಸಿಕೊಳ್ಳಲಾಗಿದೆ" ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ವಾಗ್ದಾಳಿ ನಡೆಸಿದರು.ಈ ವಲಸಿಗರನ್ನು ಪ್ರಯಾಣಿಕ ವಿಮಾನದಲ್ಲಿ ಕಳುಹಿಸುವಂತೆ ಮೋದಿ ಟ್ರಂಪ್ ಅವರಿಗೆ ಹೇಳಲಿಲ್ಲ ಅಥವಾ ಭಾರತದಿಂದ ವಿಮಾನದ ವ್ಯವಸ್ಥೆ ಮಾಡಲಿಲ್ಲ. ಇದು ಅವರು ಆಪ್ತ ಸ್ನೇಹಿತ ಎಂದು ಹೇಳುತ್ತಿರುವುದು ಸುಳ್ಳು ಎಂದು ಸಾಬೀತುಪಡಿಸುತ್ತದೆ ಎಂದು ಕಾಂಗ್ರೆಸ್ ಅಧ್ಯಕ್ಷರು ಹೇಳಿದರು.ಮೋದಿಯವರಿಗೆ ಸುಳ್ಳು ಹೇಳುವ ಛಾಳಿ ಇದೆ. ಟ್ರಂಪ್ ಈಗಾಗಲೇ ಹೆದರಿಸುತ್ತಿದ್ದಾರೆ. ಅವರಿಂದ ನಮ್ಮ ದೇಶಕ್ಕೆ ಒಳ್ಳೆಯದಾಗುತ್ತೆ ಅಂತ ಹೇಗೆ ಹೇಳೋದು? ನಮ್ಮ ಎಂಜಿನಿಯರ್ಗಳು, ವೈದ್ಯರು ಹಾಗೂ ಕಂಪ್ಯೂಟರ್ ತಜ್ಞರಿಗೆ ನಿರ್ಬಂಧ ಹೇರುತ್ತಾರೆ" ಎಂದರು.



# ಮಾರ್ಚ್ ಅಂತ್ಯಕ್ಕೆ ಮರಳು ಲಭ್ಯ: ಹರಾಜು ಪ್ರಕ್ರಿಯೆ ಆರಂಭ



**ದಾವಣಗೆರೆ:** ಒಂದೂವರೆ ವರ್ಷದಿಂದ ನನೆಗುದಿಗೆ ಬಿದ್ದಿದ್ದ ಮರಳು ಬ್ಲಾಕ್ಗಳ ಹರಾಜು ಪ್ರಕ್ರಿಯೆಗೆ ಕೊನೆಗೂ ಚಾಲನೆ ಸಿಕ್ಕಿದೆ. ಜಿಲ್ಲೆಯ ತುಂಗಭದ್ರಾ ನದಿಪಾತ್ರದಲ್ಲಿ ಗುರುತಿಸಿದ 24 ಮರಳು ಬ್ಲಾಕ್ಗಳ ಪೈಕಿ 20 ಬ್ಲಾಕ್ಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆ ಗುತ್ತಿಗೆ ನೀಡುತ್ತಿದೆ. ಬ್ಲಾಕ್ಗಳಲ್ಲಿ ಮರಳು ಪಡೆಯಲು ಸಾರ್ವಜನಿಕರು
'ನೂತನ ಮರಳು ನೀತಿ'ಯ ಪ್ರಕಾರ ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಈ ತೀರ್ಮಾನ ಕೈಗೊಂಡಿದೆ. ಮುಂದಿನ ಐದು ವರ್ಷಗಳಿಗೆ ಬ್ಲಾಕ್ಗಳನ್ನು ಗುತ್ತಿಗೆ ನೀಡಲಾಗುತ್ತಿದೆ. ಮರಳು ಅಲಭ್ಯತೆಯಿಂದ ಕಾಣಿಸಿಕೊಂಡಿರುವ ಅಕ್ರಮ ಗಣಿಗಾರಿಕೆಗೆ ಕಡಿವಾಣ ಬೀಳುವ ಸಾಧ್ಯತೆ ಇದೆ.
ನ್ಯಾಮತಿ ತಾಲ್ಲೂಕಿನ ಮರಿಗೊಂಡನಹಳ್ಳಿ, ತಗ್ಗಿಹಳ್ಳಿ, ಗೋವಿನಕೋವಿ, ಕೋಟೆಹಾಳ್,ಹೊನ್ನಾಳಿ ತಾಲ್ಲೂಕಿನ ಬೀರಗೊಂಡನಹಳ್ಳಿ ಮತ್ತು ಬುಳ್ಳಾಪುರದ ತಲಾ ಎರಡು, ಬಾಗೇವಾಡಿ, ಹಿರೇಬಾಸೂರು, ಬೇಲಿಮಲ್ಲೂರು, ರಾಂ ಪುರ, ಚಿಕ್ಕಬಾಸೂರು ಹರಿಹರ ತಾಲ್ಲೂಕಿನ ಗೋವಿನಹಾಳು, ಎಳೆಹೊಳೆ, ಚಿಕ್ಕಬಿದರೆ, ಗುತ್ತೂರು, ಮಳಲಹಳ್ಳಿ, ಬಿಳಸನೂರು ಬ್ಲಾಕ್ಗಳನ್ನು ಖಾಸಗಿ ಬಳಕೆಗೆ ಹರಾಜುಮಾಡಲಾಗುತ್ತಿದೆ.ಹೊನ್ನಾಳಿ ತಾಲ್ಲೂಕಿನ ಬಿದರಗಡ್ಡೆ, ಹರಿಹರ ತಾಲ್ಲೂಕಿನ ಧೂಳೆಹೊಳೆ,
ಮಳಲಹಳ್ಳಿ ಹಾಗೂ ನ್ಯಾಮತಿ ತಾಲ್ಲೂಕಿನ ಮಳಲಿ ಬ್ಲಾಕ್ಗಳನ್ನು ಸರ್ಕಾರಿ ಕಾಮಗಾರಿಗಳಿಗೆ ಮೀಸಲಿಡಲಾಗಿದೆ.
ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅಧ್ಯಕ್ಷತೆಯ ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಜನವರಿ ಮೊದಲ ವಾರದಲ್ಲಿ ಮರಳು ಗುತ್ತಿಗೆಗೆ ತೀರ್ಮಾನ ಕೈಗೊಂಡಿತ್ತು.
ಫೆಬ್ರುವರಿ 2ನೇ ವಾರಕ್ಕೆ ಪೂರ್ಣಗೊಳ್ಳಬೇಕಿದ್ದ ಈ ಪ್ರಕ್ರಿಯೆ ತಾಂತ್ರಿಕ ಕಾರಣಗಳಿಂದ ಮಾರ್ಚ್‌ವರೆಗೆ ವಿಸ್ತರಣೆಗೊಂಡಿದೆ.

ಜಿಲ್ಲೆಯಲ್ಲಿ 2017–18ರಲ್ಲಿ ಮರಳು ಹರಾಜು ಪ್ರಕ್ರಿಯೆ ನಡೆದಿತ್ತು. ಐದು ವರ್ಷಗಳ ಅವಧಿ 2022–23ರಲ್ಲಿ ಪೂರ್ಣಗೊಂಡಿತ್ತು. ಒಂದೂವರೆ ವರ್ಷದಿಂದ ಜಿಲ್ಲೆಯ ಮರಳು ಬ್ಲಾಕ್ಗಳಲ್ಲಿ ಗಣಿಗಾರಿಕೆಗೆ ಅವಕಾಶ ಇರಲಿಲ್ಲ. ಕಟ್ಟಡ ನಿರ್ಮಾ ಣಕ್ಕೆ ಅಗತ್ಯವಿದ್ದ ಮರಳನ್ನು ಶಿವಮೊಗ್ಗ, ಹಾವೇರಿ ಹಾಗೂ ವಿಜಯನಗರ ಜಿಲ್ಲೆಯಿಂದ ಖರೀದಿ ಮಾಡಬೇಕಿತ್ತು. ಈ ಅವಧಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಚಟುವಟಿಕೆಗಳು ಕೂಡ ಹೆಚ್ಚಾಗಿದ್ದವು.
'2017–18ರಲ್ಲಿ ಗುತ್ತಿಗೆ ನೀಡಿದ ಕೆಲ ಬ್ಲಾಕ್ಗಳಿಗೆ ಪರಿಸರ ನಿರಾಕ್ಷೇ ಪಣಾ ಪತ್ರ (ಇಸಿ) ಸಿಗುವುದು ವಿಳಂಬವಾಗಿತ್ತು. ಸಾರಥಿ, ಚಿಕ್ಕಬಿದರೆ ಸೇರಿ ಜಿಲ್ಲೆಯ ಐದು ಮರಳು ಬ್ಲಾಕ್ಗಳ ಅವಧಿ ಇತ್ತೀಚೆಗಷ್ಟೇ ಪೂರ್ಣಗೊಂಡಿ–ದೆ. ಖಾಸಗಿ ಕಟ್ಟಡಗಳಿಗೆ ಅಗತ್ಯವಿದ್ದ ಮರಳು ಈ ಬ್ಲಾಕ್ಗಳಿಂದ ಪೂರೈಕೆ ಆಗುತ್ತಿತ್ತು. 'ಎಂ –ಸ್ಯಾಂಡ್' ಬಳಕೆಗೆ ಉತ್ತೇಜನ ನೀಡಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಂಡಿದ್ದೇವೆ' ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಸಿ.ಆರ್.ರಶ್ಮಿ ತಿಳಿಸಿದರು.
ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಹೊರತುಪಡಿಸಿ ಉಳಿದ ಎಲ್ಲ ದಿನಗಳಲ್ಲಿ ಮರಳು ತೆಗೆಯಲು ಅವಕಾಶವಿದೆ. ಜೂನ್ 15ರಿಂದ ಅಕ್ಟೋಬರ್ 15ರವರೆಗೆ ಮರಳು ಗಣಿಗಾರಿಕೆಗೆ ನಿರ್ಬಂಧವಿದೆ. ನದಿಯ ನೀರಿನ ಮಟ್ಟವನ್ನು ಗಮನಿಸಿ ಮರಳು ತೆಗೆಯಲು ಗಣಿ ಮತ್ತು ಭೂವಿಜ್ಞಾನ ಇಲಾಖೆ ಅನುಮತಿ ನೀಡುತ್ತದೆ.
ರಾತ್ರಿ ಗಸ್ತಿಗೆ ತಂಡ ರಚನೆ ಜಿಲ್ಲೆಯ ತುಂಗಭದ್ರಾ ನದಿ ಪಾತ್ರದಲ್ಲಿ ನಡೆಯುತ್ತಿರುವ ಅಕ್ರಮ ಮರಳು ಗಣಿಗಾರಿಕೆಗೆ ಕಡಿವಾಣ ಹಾಕಲು ರಾತ್ರಿ ಗಸ್ತಿಗೆ ತಂಡಗಳನ್ನು
ರಚಿಸಲಾಗಿದೆ. ಗಣಿ ಮತ್ತು ಭೂವಿಜ್ಞಾನ ಕಂದಾಯ ಪೊಲೀಸ್ ಹಾಗೂ ಗ್ರಾಮೀಣ ಪಂಚಾಯತ್‌ರಾಜ್ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ತಂಡದಲ್ಲಿದ್ದಾರೆ.
ಮರಳು ಅಕ್ರಮ ಚಟುವಟಿಕೆಗಳ ನಿರ್ಬಂಧಕ್ಕೆ ತಂಡಗಳು ರಾತ್ರಿ ಗಸ್ತು ಮಾಡುತ್ತಿವೆ. ಪ್ರಮುಖ ರಸ್ತೆ ಆಯಕಟ್ಟಿನ ಸ್ಥಳಗಳಲ್ಲಿ ಲಾರಿ ಟ್ರ್ಯಾ ಕ್ಟರ್ ಹಾಗೂ ಇತರ ವಾಹನಗಳ ತಪಾಸಣೆ ಮಾಡಲಾಗುತ್ತಿದೆ.
ಸರ್ಕಾರಿ ಮಾರ್ಗಸೂಚಿಯ ಪ್ರಕಾರ ಮರಳು ಗುತ್ತಿಗೆ ನೀಡಲಾಗುತ್ತದೆ. ಜಿಲ್ಲೆಯ ಎಲ್ಲ ಮರಳು ಬ್ಲಾಕ್ಗಳು ಮಾರ್ಚ್ 15ರ ವೇಳೆಗೆ ಅಧಿಕೃತವಾಗಿ ಕಾರ್ಯಾರಂಭ ಆಗಲಿವೆ ಎಂದು ಹಿರಿಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಭೂ ವಿಜ್ಞಾನಿ ಸಿ.ಆರ್.ರಶ್ಮಿ ತಿಳಿಸಿದ್ದಾರೆ.

## ವ್ಯಕ್ತಿಯ ಸಾಧನೆಗೆ ಶಿಕ್ಷಣವೇ ಪ್ರಮುಖ ಸಾಧನ



**ನ್ಯಾಮತಿ:** ನಾವು ಏನೆಲ್ಲಾ ಆಗುತ್ತೇನೆಂದರೆ ಅದಕ್ಕೆ ಶಿಕ್ಷಣವೇ ಗಟ್ಟಿಯಾಗಿ ಸಾಧನವಾಗಿ ನಿಲ್ಲುತ್ತದೆ. ವ್ಯಕ್ತಿಯ ಸಾಧನೆಗೆ ಶಿಕ್ಷಣ ಪ್ರಮುಖ ಒಂದು ಸಾಧನ ಎಂಬುದಕ್ಕೆ ನಾನೇ ಸಾಕ್ಷಿಯಾಗಿ ನಿಮ್ಮೆದುರಿನಲ್ಲಿರುವೆ. ನಾನು ಕಲಿತ ಶಿಕ್ಷಣದಿಂದಲೇ ಇಂದು ಸಂವಿಧಾನದ ಕನಸನ್ನ ಸಹಕಾರಗೊಳಿಸಲು ಸಾಧ್ಯವಾಗಿದೆ. ಶಿಕ್ಷಣ ವ್ಯಕ್ತಿಯ ಕನಸು ನನಸು ಮಾಡಿ ಅತಿ ಎತ್ತರಕ್ಕೆ ಕೊಂಡೊಯ್ಯಬಲ್ಲದು ಎಂದು ಹಿಮಾಚಲ ಪ್ರದೇಶದ ಮಾಜಿ ಮುಖ್ಯ ನ್ಯಾಯಧೀಶ ಹಾಗು ದೆಹಲಿ ಲೋಕಪಾಲರವರಾದ ಎಲ್. ನಾರಾಯಣ ಸ್ವಾಮಿ ಹೇಳಿದರು.
ತಾಲೂಕಿನ ದೊಡ್ಡೇರಿ ಗ್ರಾಮದಲ್ಲಿ ಜ್ಞಾನವಾಹಿನಿ ವಿದ್ಯಾಸಂಸ್ಥೆಯ 25ವರ್ಷದ ಸಂಭ್ರಮ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಸಂಸ್ಥೆಯ ಡಿಜಿಲಿಕರಣ ಕಾರ್ಯಕ್ರಮ ಉದ್ಘಾಟಿಸಿ, ನಾಗರೀಕ ಸನ್ಮಾನವನ್ನು ಸ್ವಿಕರಿಸಿ ಸಮಾರಂಭವನ್ನು ಮಾತನಾಡಿದರು. ಇಂದು ನಗರ ಪ್ರದೇಶಕ್ಕೆ ಹೋಗಿ ಸಿಬಿಎಸ್‌ಇ ಸೇರಿದಂತೆ ಇನ್ನಿತರೆ ಶಿಕ್ಷಣ ಸೌಲಭ್ಯಗಳಿಗೆ ವಿದ್ಯಾರ್ಥಿಗಳು ಹೋಗುವ ಅನಿವಾರ್ಯತೆ ಈಗಿಲ್ಲ. ಗ್ರಾಮೀಣ ಪ್ರದೇಶದಲ್ಲೂ ಜ್ಞಾನವಾಹಿನಿಯಂತಹ ವಿದ್ಯಾಸಂಸ್ಥೆಗಳು ಶೈಕ್ಷಣಿಕ ಪ್ರಗತಿಗೆ ಮುಂದಾಗಿದ್ದು ಗ್ರಾಮೀಣ ಪ್ರದೇಶದಲ್ಲಿ ರವಿಶಂಕರ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದ ಅವರು ಅಬ್ದುಲ್ ಕಲಾಂ ಮಾತನ್ನು ಮತ್ತೊಮ್ಮೆ ಪುನರುಚ್ಚಿಸುವೆ ಅವರು, ವಿದ್ಯಾರ್ಥಿಯು ಬಹುದೊಡ್ಡ ಕನಸು ಕಾಣಬೇಕು ಕನಸು ಸಹಕಾರಗೊಳಿಸಲು ಶ್ರಮಪಡಬೇಕಿದೆ ಎಂದರು.
ಶಿಕ್ಷಣ ಒಂದೆ ಮನುಷ್ಯನ ಸಾಧನೆ ಎಂದು ಹೇಳಲಾಗದು. ಅದರ ಹೊರತಾಗಿಯು ಮಗುವಿನ ಪಠ್ಯೇತರ ಆಸಕ್ತಿಯನ್ನ ಪೋಷಕರು ಪ್ರೋತ್ಸಾಹಿಸುವ ಕೆಲಸವಾಗಬೇಕು. ಶಾಲೆಯಿಂದ ಹೊರಹಾಕಿದ ವ್ಯಕ್ತಿ ಬಲ್ಬಅನ್ನು ಕಂಡುಹಿಡಿದಿದ್ದು, ಭೂಮಿ ಇರುವವರೆಗೂ ಅವರ ಹೆಸರು ಉಳಿಯಲಿದೆ. ಇದನ್ನ ತಾಯಿಯೊಬ್ಬಳು ಸಾಂದರ್ಭಿಕ ಸುಳ್ಳು ಹೇಳಿದರು ಅವಳಲ್ಲಿದ್ದ ಜ್ಞಾನದಾರೆ ಆಸಕ್ತಿಯಿಂದ ಇದು ಸಾಧ್ಯ ಇದನ್ನ ಪೋಷಕರು ಮನಗಾಣಬೇಕೆಂದು ಹೇಳಿದರು ಹಲವಾರು ಪ್ರಸಿದ್ಧ ಕ್ರೀಡಾಪಟುಗಳು, ಚಿತ್ರನಟರು ಸೇರಿದಂತೆ ಸಾಧಕರು ಓದಿದ್ದು ಅತಿ ಕಡಿಮೆಯಾದರು ಅವರ ಸಾಧನೆ ಇನ್ನೊಬ್ಬರಿಗೆ ಸ್ಫೂರ್ತಿ ಯಾಗಿರುತ್ತದೆ ಆದರೆ ಒಬ್ಬ ಮಗುವನ್ನ ಇನ್ನೊಬ್ಬ ಮಗುವಿಗೆ ಹೋಲಿಕೆ ಮಾಡುವುದು ಬೇಡ ಎಂದರು.ನನ್ನ ಮಾತಿನಿಂದ ಒಬ್ಬರಿಗೆ ಪ್ರೇರಣೆ ಆಗುತ್ತದೆ ಎಂದರೆ ಮಾತ್ರ ಮಾತನಾಡುವೆ, ನನ್ನ ಜ್ಞಾನಾರ್ಜನೆಗೆ ಬೇರೆಯವರ ಮಾತಿನಿಂದ ಸಾಧ್ಯ ಎಂದರೆ ಮಾತ್ರ ಕೇಳುವೆ ಇದಕ್ಕೆ ಉದಾಹರಣೆ ಎಂದರೆ ತಾವು ಆತ್ಮೀಯರೊಬ್ಬರ ಮನೆಗೆ ತೆರಳಿದ್ದು ಇಂಜಿನೀಯರ ಓದುತ್ತಿದ್ದ ಒಬ್ಬ ಹುಡುಗನ ಗಮನಿಸಿ ಮಾತು ಮುಂದುವರೆಸಿದೆ. ಅವನ ಗಮನ ನನ್ನ ಮೇಲಿರದಿದ್ದರು ಮಾತು ಆಲಿಸುತ್ತಿದ್ದ ಅವನು ಮುಂದೆ ಐಎಸ್‌ಐ ಪಾಸು ಮಾಡಿದ. ಕುಟುಂಬದಿಂದ ಆ ದಿನ ರಾತ್ರಿ 10.30 ಕರೆ ಬಂತು. ತಮ್ಮನ್ನು ಕಾಣುವುದಾಗಿ ಸೆಕ್ಯೂರಿಟಿ ಇದೆ ಬರಲು ಸಾಧ್ಯವಿಲ್ಲ ಎಂದೆ. ಮನವಿ ಮಾಡಿ ಬಂದು ಸಿಹಿ ಹಂಚಿದರು. ಇಂತಹ ಮತ್ತೊಂದು ಘಟನೆ ಒಬ್ಬ ವಿದ್ಯಾರ್ಥಿಗೆ ಪ್ರೇರಣೆಯಾದ ಮಾತು ಸತತ 3ನೇ ಬಾರಿಗೆ ಪ್ರಯತ್ನಿಸಿ ಐಪಿಎಸ್ ಮಾಡಿ ಮಹರಾಷ್ಟ್ರದ ಐಪಿಎಸ್ ಆದ ಇದೆಲ್ಲದಕ್ಕೆ ಮುಖ್ಯ ಕಾರಣ ಮಗುವಿಗೆ ಸ್ಫೂರ್ತಿದಾಯಕ ಮಾತುಗಳು ಎಂಬುದನ್ನು ಪೋಷಕರು ಮರೆಯದಿರಿ ಎಂದರು.
ಶಾಸಕ ಶಾಂತನಗೌಡ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾಸಂಸ್ಥೆ ಆರಂಭದಿಂದ 2 ದಶಕಗಳು ಪ್ರಗತಿಯನ್ನುಕಾಣುತ್ತಾ ಮುಂದುವರೆದಿದ್ದು, ಕರೊನಾ ಸಂದರ್ಭದಲ್ಲಿ ಬ್ಯಾಂಕನವರು ಬೀಗ ಹಾಕುವುದನ್ನು ಬಿಡಲಿಲ್ಲ ಇದನ್ನು ತಾವು ತಿಳಿದಿದ್ದು, ಇದನ್ನೆಲ್ಲಾ ದಾಟಿದ ಸ್ನೇಹಿತ ಸಂಸ್ಥೆಯ ಕಾರ್ಯದರ್ಶಿ ರವಿಶಂಕರ ಧೈರ್ಯವು ಮತ್ತೊಬ್ಬರಿಗೆ ಮಾದರಿಯಾಗಿದೆ ಈ ವಿದ್ಯಾಸಂಸ್ಥೆಗೆ ಸುತ್ತೂರು ಶ್ರೀಗಳು 8 ವರ್ಷಗಳ ಹಿಂದೆ ಬಂದು ಹೋಗಿದ್ದನ್ನು ಸ್ಮರಿಸಿ, ಸಂವಿಧಾನದ ಆಶಯದಂತೆ ಕಾರ್ಯನಿರ್ವಹಿಸುವ ಲೋಕಪಾಲರೊಂದಿಗೆ ವೇದಿಕೆ ಹಂಚಿಕೊಂಡಿದ್ದು ಅವರು ಕನ್ನಡಿಗರೆಂಬುದು ಹೆಮ್ಮೆಯ ಸಂಗತಿಯಾಗಿದೆ. ಇವರೊಂದಿಗೆ ಅಂಬೇಡ್ಕರ ಅವರೊಂದಿಗೆ ವೇದಿಕೆ ಹಂಚಿಕೊಂಡಂತೆ ಭಾಸವಾಗುತ್ತಿದ್ದು, ಮೂರು ಭಾರಿ ಶಾಸಕರಾದರು ಈ ವೇದಿಕೆ ಸದಾ ಸ್ಮರಣೆಯಲ್ಲಿರಲಿದೆ ಇದಕ್ಕೆ ಕಾರಣ ಸಂಸ್ಥೆಯ ಕಾರ್ಯದರ್ಶಿ ಯಾಗಿರುವರೆಂದರು.
ಕ್ಷೇತ್ರ ಶಿಕ್ಷಣಾಧಿಕಾರಿ ನಿಂಗಪ್ಪ ಮಾತನಾಡಿ ಈ ಸಂಸ್ಥೆಯು 1ರಿಂದ 10ನೇ ತರಗತಿ ವರೆಗೆ 405 ವಿದ್ಯಾರ್ಥಿಗಳಿದ್ದು, 25 ವರ್ಷಗಳಿಂದಲೂ ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಶಿಕ್ಷಣ ನೀಡುತ್ತಾ ಬರುತ್ತಿರುವುದು, ನಾನು ಶಾಲಾ ಸಂದರ್ಶನದ ವೇಳೆ ತಿಳಿದ್ದಿದ್ದೇನೆ ಎಂದರು.
ವಿದ್ಯಾರ್ಥಿಯ ಓದಿಗೆ ಶಾಲೆಯ ಆಯ್ಕೆ ಪೋಷಕರದ್ದು, ಶಿಕ್ಷಣ ಪಡೆಯುವ ಹಕ್ಕು ವಿದ್ಯಾರ್ಥಿಯದ್ದಾಗಿದೆ. ಮಕ್ಕಳು ಸೇರಿಸುವ ಪೋಷಕರು ತಮ್ಮ ಆಯ್ಕೆಯು ಶಾಲೆಯು ಇಲಾಖೆಯ ನೊಂದಣಿ ಹಾಗೂ ಸರಿಯಾದ ಅನುಮತಿ ಪಡೆದಿದೆಯೆ ಎಂದು ತಿಳಿಯುವುದು ಅತ್ಯವಶ್ಯಕ ಏಕೆಂದರೆ ಒಂದು ಶಾಲೆಯಲ್ಲಿ ಓದಿದ ವಿದ್ಯಾರ್ಥಿಗೆ ದಾಖಲೆ ಸರಿ ಇರದೆ ಮೆಡಿಕಲ್ ವಂಚಿತಳಾಗಿದ್ದಾಳೆ ವಿಷಯ ಶಾಸಕರ ಗಮನಕ್ಕೂ ಬಂದಿದೆ ಎಂದು ತಿಳಿಸಿ, ಪೋಷಕರ ಜಾಗೃತಿಯ ಬಗ್ಗೆ ವಿವರಿಸಿದರು.ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ರವಿಶಂಕರ, ಮಾಜಿ ಸಚಿವ ರೇಣುಕಾಚಾರ್ಯ, ಶಾಲಾ ಮುಖ್ಯ ಶಿಕ್ಷಕಿ ಹೇಮಾವತಿ, ಹರ್ಷಕಾಮತ್, ಕ್ಷಿಜಲೀಆಪ್ ಸಂಸ್ಥಾಪಕ ದೀಪಕ್‌ರಾಮಚಂದ್ರ, ಪಿ.ಆರ್.ಒ.ಅಣ್ಣಪ್ಪ ಇತರರಿದ್ದರು. ಹರ್ಷಕಾಮತ್ ಲೋಕಾಯುಕ್ತರ ಪರಿಚಯಿಸಿದರು. ಡಾ.ತುಷಾರ್ ಪ್ರಸ್ತಾವಿಕ ಮಾತನಾಡಿದರು. ಪ್ರತಿಭಾನ್ವಿತ ವಿದ್ಯಾರ್ಥಿನಿ ಪದ್ಮಶ್ರೀ ಹಾಗು ನಾಟ್ಯ ವಿಷಾರದೆ ಅಮೂಲ್ಯ ಇವರನ್ನ ಸನ್ಮಾನಿಸಲಾಯಿತು. ಯಮುನಾ ಪ್ರಾರ್ಥಿಸಿ, ಹೇಮಾವತಿ ಸ್ವಾಗತಿಸಿದರು, ಸಹನಾ ನಿರೂಪಿಸಿ, ಅಂಬಿಕ ವಂದಿಸಿದರು.

## ಸಿಎಂ ತವರು ಜಿಲ್ಲೆಯಲ್ಲೇ ಗಲಭೆ ನಡೆದಿರುವುದು ದುರದೃಷ್ಟಕರ: ಯದುವೀರ್

**ಮೈಸೂರು:** ಉದಯಗಿರಿ ಪೊಲೀಸ್ ಠಾಣೆ ಮೇಲಿನ ದಾಳಿಯನ್ನು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ತೀವ್ರವಾಗಿ ಖಂಡಿಸಿದ್ದು, ರಾಜ್ಯಾದ್ಯಂತ ಹೆಚ್ಚುತ್ತಿರುವ ಹಿಂಸಾಚಾರ, ಕೊಲೆ ಮತ್ತು ಕಲ್ಲು ತೂರಾಟ ಘಟನೆಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನಿನ್ನೆ ನಮ್ಮ ಮೈಸೂರಿನ ಉದಯಗಿರಿ ಪೊಲೀಸ್ ಸ್ಟೇಷನ್ ಮೇಲೆ ಮತ್ತು ಪೊಲೀಸರ ಮೇಲೆ ನಡೆದ ಹಲ್ಲೆ,ಡಿ.ಸಿ.ಪಿ ಯವರ ವಾಹನದ ಮೇಲೆ ಕಲ್ಲು ತೂರಾಟ ನಡೆಸಿರುವುದು ಖಂಡನೀಯ. ರಾಜ್ಯದಲ್ಲಿ ಪ್ರತಿನಿತ್ಯ ಹಿಂಸಾಚಾರ□ ಕೊಲೆ□ ಕಲ್ಲು ತೂರಾಟಗಳಂತಹ ಕೃತ್ಯಗಳು ಸಾಲುಸಾಲಾಗಿ ನಡೆಯುತ್ತಿವೆ. ಶಾಂತಿ□ ಸಮೃದ್ಧಿ□ ಸಂಸ್ಕೃತಿಗೆ ಇಡಿ ವಿಶ್ವಕ್ಕೆ ಮಾದರಿಯಾಗಿರುವ ಮೈಸೂರಿನಲ್ಲಿ ಈ ರೀತಿಯ ಗಲಾಟೆಗಳು ನಡೆಯುವುದು ಮತ್ತು ಅದನ್ನು ನಿಯಂತ್ರಿಸುವಲ್ಲಿ ಸರ್ಕಾರ ವಿಫಲವಾಗುವುದು ಈ ನಾಡಿಗೆ ಶೋಭೆ ತರುವುದಿಲ್ಲ ಎಂದು ಹೇಳಿದ್ದಾರೆ.ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿನಿಂತಿದ್ದರೂ□ ರಾಜ್ಯ ಸರ್ಕಾರ ಮಾತ್ರ ಈ ಕುರಿತಾಗಿ ಯಾವುದೇ ಕಠೀಣ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ ಎಂಬುದು ವಿಷಾದನೀಯ. ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿಯೇ ಇಂತಹ ಗಲಭೆ ನಡೆದಿರುವುದು ದುರದೃಷ್ಟಕರ ಸಂಗತಿ. ಕೂಡಲೇ ತಪ್ಪಿತಸ್ಥರನ್ನು ಹುಡುಕಿ ಅವರ ವಿರುದ್ಧ ಕಠಿಣ ಕಾನೂನೂ ಕ್ರಮ ಜರುಗಿಸಬೇಕೆಂದು. ಈ ಮೂಲಕ ಕಾನೂನು ಸುವ್ಯವಸ್ಥೆ ಕಾಪಾಡಬೇಕೆಂದು ನಾನು ಒತ್ತಾಯಿಸುತ್ತೇನೆಂದು ತಿಳಿಸಿದ್ದಾರೆ.ಮತ್ತೊಂದು ಪೋಸ್ಟ್‌ನಲ್ಲಿ ಸಚಿವ ರಾಜಣ್ಣ ವಿರುದ್ಧವೂ ಯದುವೀರ್ ಅವರು ಕಿಡಿಕಾರಿದ್ದಾರೆ. ಕೆ.ಎನ್. ರಾಜಣ್ಣ ಅವರಂತಹ ಹಿರಿಯ ಸಚಿವರಾದವರು ಪರಿಸ್ಥಿತಿಯ ಗಂಭೀರತೆಯನ್ನು ಪರಿಹರಿಸುವ ಬದಲು ಸ್ಥಳೀಯ ಪೊಲೀಸರ ಮೇಲೆ ಆರೋಪ ಹೊರಿಸುತ್ತಿದ್ದಾರೆ. ಇಂತಹ ಬೇಜವಾಬ್ದಾರಿ ಹೇಳಿಕೆ ನೀಡುವ ಮೂಲಕ, ಅವರು ಪೊಲೀಸ್ ಪಡೆಯ ಆತ್ಮಸ್ಥೈರ್ಯವನ್ನು ಕುಗ್ಗಿಸುವುದಲ್ಲದೆ, ಗಲಭೆಕೋರರ ತಪ್ಪನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ. ಇದು ಒಂದು ನಿರ್ದಿಷ್ಟ ಸಮುದಾಯವನ್ನು ಸಮಾಧಾನಪಡಿಸುವ ಪ್ರಯತ್ನದಂತೆ ಕಾಣುತ್ತದೆ.
ಕಾನೂನಿನ ಮುಂದೆ ಎಲ್ಲರೂ ಒಂದೇ ಸಮಾಜದಲ್ಲಿ ಸಮಾನತೆಯನ್ನು ಕಾಯಬೇಕೆ ಹೊರತು ಕಾನೂನು ಜಾರಿ ಸಂಸ್ಥೆಯ ನೈತಿಕತೆಯನ್ನು ದುರ್ಬಲಗೊಳಿಸುವ ಮತ್ತು ಹಿಂಸಾಚಾರವನ್ನು ಸಮರ್ಥಿಸಿಕೊಳ್ಳುವಂತಹ ಹೇಳಿಕೆಗಳನ್ನು ನೀಡುವುದನ್ನು ನಿಲ್ಲಿಸಿ□ ರಾಜ್ಯದ ಸುಸ್ಥಿರತೆಯನ್ನು ಕಾಪಾಡುವಲ್ಲಿ ರಾಜ್ಯ ಸರ್ಕಾರ ಗಂಭೀರತೆಯಿಂದ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

## ಗ್ಯಾರೆಂಟಿ ಯೋಜನೆಗಳಿಗೆ ರಾಜ್ಯಪಾಲರ ಮೆಚ್ಚುಗೆ

**ಬೆಂಗಳೂರು:** ರಾಜ್ಯದಲ್ಲಿ 76ನೇ ಗಣರಾಜ್ಯೋತ್ಸವದ ಸಂಭ್ರಮ ಜೋರಾಗಿದೆ. ಗಣರಾಜ್ಯೋತ್ಸವದ ಹಿನ್ನೆಲೆಯಲ್ಲಿ ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಧ್ವಜಾರೋಹಣ ನೆರವೇರಿಸಿದರು.ರಾಜ್ಯದ ಜನರನ್ನು ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಜನರ ಸಂಕಷ್ಟಗಳನ್ನು ಅರಿತು ಸರ್ಕಾರ ಜಾರಿಗೆ ತಂದ 5 ಗ್ಯಾರಂಟಿ ಕಲ್ಯಾಣ ಯೋಜನೆಗಳು ಯಶಸ್ವಿಯಾಗಿದ್ದು, ದೇಶದ ಗಮನ ಸೆಳೆದಿವೆ 5 ಗ್ಯಾರಂಟಿ ಯೋಜನೆಗಳಿಂದ ಆರ್ಥಿಕ ಬಿಕ್ಕಟ್ಟು ಉಂಟಾಗುತ್ತದೆ. ಅಭಿವೃದ್ಧಿ ಕುಂಠಿತವಾಗುತ್ತದೆ ಎಂಬ ಭವಿಷ್ಯವೂ ಸುಳ್ಳಾಗಿದೆ. ಕರ್ನಾಟಕ ರಾಜ್ಯವು ಆರ್ಥಿಕ ಬೆಳವಣಿಗೆ ಮತ್ತು ಸಾಮಾಜಿಕ ನ್ಯಾಯ ಎರಡನ್ನು ನಿಭಾಯಿಸುತ್ತಾ ದೇಶದಲ್ಲೇ ಅತ್ಯುತ್ತಮ ಅಭಿವೃದ್ಧಿ ಸಾಧಿಸುತ್ತಿರುವ ರಾಜ್ಯಗಳ ಪೈಕಿ ಒಂದು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಹೇಳಿದರು.

## ನಟ ಅನಂತ್ ನಾಗ್ ಗೆ ಪದ್ಮಭೂಷಣ ಪ್ರಶಸ್ತಿ

**ಬೆಂಗಳೂರು:** 76ನೇ ಗಣರಾಜ್ಯೋತ್ಸವದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ 2025ನೇ ಸಾಲಿನ ಅತ್ಯುನ್ನತ ನಾಗರಿಕ ಸೇವಾ ಪ್ರಶಸ್ತಿಗಳಾದ ಪದ್ಮವಿಭೂಷಣ, ಪದ್ಮಭೂಷಣ ಹಾಗೂ ಪದ್ಮಶ್ರೀ ಪುರಸ್ಕೃತರ ಹೆಸರುಗಳನ್ನು ಪ್ರಕಟಿಸಿದ್ದು, ರಾಜ್ಯದ 9 ಸಾಧಕರು ಈ ಬಾರಿ ಪದ್ಮ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.ಪದ್ಮ ವಿಭೂಷಣ ಪ್ರಶಸ್ತಿಯನ್ನು ವಯೋಲಿನ್ ವಾದಕ ಲಕ್ಷ್ಮೀನಾರಾಯಣ ಸುಬ್ರಮಣಿಯಂ ಅವರಿಗೆ ಲಭಿಸಿದ್ದರೆ, ನಟ ಅನಂತನಾಗ್, ಶಿಕ್ಷಣ ತಜ್ಞ ಎ. ಸೂರ್ಯಪ್ರಕಾಶ್ ಪದ್ಮ ಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಇನ್ನು ಗ್ರ್ಯಾಮಿ ಪ್ರಶಸ್ತಿ ವಿಜೇತ ಸಂಗೀತ ನಿರ್ದೇಶಕ ರಿಕ್ಕಿ ಕೇಜ್, ಜಾನಪದ ಕಲಾವಿದ ವೆಂಕಪ್ಪ ಅಂಬಾಜಿ, ವೈದ್ಯಕೀಯ ಕ್ಷೇತ್ರದಲ್ಲಿ ವಿಜಯಲಕ್ಷ್ಮಿ ದೇಶಮಾನೆ, ಭೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತರ, ಹಾಸನ ರಘು ಮತ್ತು ಪ್ರಶಾಂತ್ ಪ್ರಕಾಶ್ ಅವರು ಪದ್ಮಶ್ರೀ ಗೌರವಕ್ಕೆ ಭಾಜನರಾಗಿದ್ದಾರೆ. ಈ ಬಾರಿ ರಾಷ್ಟ್ರಪತಿಗಳು 139 ಪದ್ಮ ಪ್ರಶಸ್ತಿಗಳನ್ನು ಅನುಮೋದಿಸಿದ್ದಾರೆ.

## ಸಿಎಂ ಗೆ ಕೋರ್ಟ್ ನೋಟೀಸ್

**ಬೆಂಗಳೂರು:** ತಮ್ಮ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಸಾಮಾಜಿಕ ಕಾರ್ಯಕರ್ತ ಟಿಜೆ ಅಬ್ರಾಹಂ ಸಲ್ಲಿಸಿದ್ದ ಖಾಸಗಿ ದೂರಿನ ಅನ್ವಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನಗರದ ವಿಶೇಷ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ. ಟಿಜೆ ಅಬ್ರಹಾಂ ಅವರು ಸಲ್ಲಿಸಿದ ದೂರಿನ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಲಯವು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೋಟಿಸ್ ಜಾರಿ ಮಾಡಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಸಿದ್ದರಾಮಯ್ಯ ಅವರ ವಿರುದ್ಧ ತನಿಖೆಗೆ ಅನುಮತಿ ನೀಡುವಂತೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರನ್ನು ಒತ್ತಾಯಿಸಿದ ಅರ್ಜಿದಾರರಲ್ಲಿ ಟಿ.ಜೆ.ಅಬ್ರಹಾಂ ಕೂಡ ಒಬ್ಬರಾಗಿದ್ದಾರೆ. ಇದರ ಬೆನ್ನಲ್ಲೇ ಸಿದ್ದರಾಮಯ್ಯ ಅವರು ತಮ್ಮ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದರು.

## ಖ್ಯಾತ ಹೃದ್ರೋಗ ತಜ್ಞ ಡಾ. ಕೆ.ಎಂ ಚೆರಿಯನ್ ನಿಧನ

**ಬೆಂಗಳೂರು:** ಖ್ಯಾತ ಹೃದ್ರೋಗ ತಜ್ಞ, ದೇಶದ ಮೊದಲ ಯಶಸ್ವಿ ಪರಿಧಮನಿ ಬೈಪಾಸ್ ಶಸ್ತ್ರಚಿಕಿತ್ಸೆಗೆ ಹೆಸರುವಾಸಿಯಾದ ವೈದ್ಯ ಡಾ. ಕೆ. ಎಂ. ಚೆರಿಯನ್ ಬೆಂಗಳೂರಿನಲ್ಲಿ ನಿಧನರಾದರು. ಬೆಂಗಳೂರಿನಲ್ಲಿ ಮದುವೆ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದ ಚೆರಿಯನ್ ಕುಸಿದುಬಿದ್ದಿದ್ದರು. ಕೂಡಲೇ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ರಾತ್ರಿ 11.55 ಕ್ಕೆ ನಿಧನರಾಗಿದ್ದಾರೆ. ಡಾ. ಚೆರಿಯನ್ ಫ್ರಾಂಟಿಯರ್ ಲೈಫ್ಲೈನ್ ಮತ್ತು ಡಾ. ಚೆರಿಯನ್ ಹಾರ್ಟ್ ಫೌಂಡೇಶನ್ ಸ್ಥಾಪಕರೂ ಆಗಿರುವ ಚೆರಿಯನ್ 1991 ರಲ್ಲಿ ಪದ್ಮಶ್ರೀ ಸೇರಿದಂತೆ ವಿವಿಧ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. 1975 ರಲ್ಲಿ ಚೆನ್ನೈನ ಪೆರಂಬೂರಿನ ದಕ್ಷಿಣ ರೈಲ್ವೆ ಪ್ರಧಾನ ಕಚೇರಿ ಆಸ್ಪತ್ರೆಯಲ್ಲಿ ಭಾರತದ ಮೊದಲ ಯಶಸ್ವಿ ಪರಿಧಮನಿ ಅಪಧಮನಿ ಬೈಪಾಸ್ ಶಸ್ತ್ರಚಿಕಿತ್ಸೆ ನಡೆಸಿದ್ದರು.

# ಅಂಗೈನಲ್ಲೇ ಆನೆಗಳ ಚಲನವಲನ



**ಅಮೃತಪುರಿ (ಕೇರಳ):** ಪಶ್ಚಿಮಘಟ್ಟದ ವ್ಯಾಪ್ತಿಯ ಜಿಲ್ಲೆಗಳಲ್ಲಿ ಹೆಚ್ಚಾಗುತ್ತಿರುವ ಆನೆಗಳ ದಾಳಿ, ಉಪಟಳದ ನಿಯಂತ್ರಣಕ್ಕೆ ಕೇರಳದ ಅಮೃತ ವಿದ್ಯಾಪೀಠಂ ವಿಶ್ವವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪರಿಹಾರ ಕಂಡು ಹಿಡಿದಿದ್ದಾರೆ.
ಮಲೆನಾಡು, ಅರಣ್ಯದಂಚಿನ ಗ್ರಾಮಗಳಲ್ಲಿ ಆನೆಗಳು ಇತ್ತೀಚೆಗೆ ನಿರಂ ತರ ಹಾವಳಿಮಾಡುತ್ತಿವೆ. ಕಷ್ಟಪಟ್ಟು ಬೆಳೆದ ಬೆಳೆಗಳನ್ನು ನಾಶಮಾಡುವ ಜತೆಗೆ, ಹಲವು ರೈತರ ಜೀವಕ್ಕೂ ಎರವಾಗುತ್ತಿವೆ. ಅರಣ್ಯ ಇಲಾಖೆ ಹಾಗೂ ಸ್ಥಳೀಯರು ಆನೆಗಳನ್ನು ಓಡಿಸಲು ಏನೇ ಶ್ರಮಪಟ್ಟರೂ ಫಲ ಸಿಗುತ್ತಿಲ್ಲ. ಇಂತಹ ಸಮಸ್ಯೆಗೆ ಪರಿಹಾರ ದೊರಕಿಸಲು ಸತತ ಪ್ರಯತ್ನ ಮಾಡಿದ್ದ ವಿಶ್ವವಿದ್ಯಾಲಯದ ಸಾಮಾಜಿಕ ಮತ್ತು ನಡವಳಿಕೆ ವಿಜ್ಞಾನ ವಿಭಾಗದ ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ರೈತರ ಬೆಳೆಗಳಿಗೆ ಹಾನಿಮಾಡುವ, ಜನ ವಸತಿ ಪ್ರವೇಶಿಸುವ ಆನೆಗಳ ಚಲನವಲನದಮಾಹಿತಿಯನ್ನು ರೈತರು ಹಾಗೂ ಸ್ಥಳೀಯರ ಮೊಬೈಲ್ಗೆ ರವಾನೆ ಮಾಡುವ ನೂತನ ಆಪ್ ಸಿದ್ಧಪಡಿಸಿದ್ದಾರೆ.

**ಮುನ್ಸೂಚನೆ ಹೇಗೆ?**

ಆನೆಗಳ ಹಾವಳಿ ನಿರಂತರವಾಗಿರುವ ಪ್ರದೇಶಗಳಲ್ಲಿ ಅಧ್ಯಯನ ನಡೆಸಿದ ತಂಡವು, ಬದಲಾಗಿರುವ ಆನೆಗಳ ಕಾರಿಡಾರ್ಗಳನ್ನು ಮೊದಲ ಹಂತದಲ್ಲಿ ಗುರುತಿಸಿದೆ.
ನಿರಂತರವಾಗಿ ಹಾವಳಿಮಾಡುವ ಗ್ರಾಮಗಳು, ಜಮೀನುಗಳನ್ನು ಎರಡನೇ ಹಂತದಲ್ಲಿ ಪಟ್ಟಿ ಮಾಡಿಕೊಂಡಿದೆ. ಎಲ್ಲಿಂದ ಬಂದು ಎಲ್ಲಿಗೆ ಮರಳುತ್ತವೆ ಎನ್ನುವ ಸಂಪೂರ್ಣ ದಾರಿಗಳನ್ನು ಗುರುತಿಸಿದ ನಂ ತರ ಅಂ ತಹ ಸ್ಥಳಗಳಲ್ಲಿ ಅತ್ಯಾಧುನಿಕ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿದೆ. ಆಮಾರ್ಗದಲ್ಲಿ ಆನೆಗಳು ಬಂದ ತಕ್ಷಣ ಆ ಸ್ಥಳದ ಹೆಸರು, ಎಷ್ಟು ಆನೆಗಳಿವೆ ಎಂಬ ಸಂದೇಶ ಆಪ್ ಅಳವಡಿಸಿಕೊಂಡ ಎಲ್ಲರ ಮೊಬೈಲ್ಗೂ ರವಾನೆಯಾಗುತ್ತದೆ. ಆನೆಗಳು ಬರುತ್ತಿರುವ ಮನ್ಸೂಚನೆ ಸಿಕ್ಕ ತಕ್ಷಣ ಸ್ಥಳೀಯರು ಜಾಗೃತರಾಗುತ್ತಾರೆ. ತಂ ಡವಾಗಿ ಅವುಗಳನ್ನು ಮರಳಿ ಕಾಡಿನತ್ತ ಓಡಿಸಲು ಸಿದ್ಧತೆಮಾಡಿಕೊಳ್ಳುತ್ತಾರೆ.

**ಕರ್ನಾಟಕದಲ್ಲೂ ನಿಯಂತ್ರಣಕ್ಕೆ ಹರಸಾಹಸ:**

ಕರ್ನಾಟಕದ ಮಲೆನಾಡಿನ ಭಾಗದಲ್ಲೂ ಆನೆ–ಮಾನವ ಸಂಘರ್ಷ ತಡೆಗೆ ಮೊದಲು ಕಂದಕಗಳನ್ನು ನಿರ್ಮಿಸಲಾಗಿತ್ತು. ಆರಂಭದಲ್ಲಿ ಸ್ವಲ್ಪ ನಿಯಂತ್ರಣಕ್ಕೆ ಬಂದಿದ್ದ ಆನೆಗಳು ನಂತರ ಆ ಕಂದಕಗಳನ್ನೇ ದಾಟಿ ಬರುವಮಾರ್ಗವನ್ನೂ ಕಂಡುಕೊಂಡಿದ್ದವು. ನಂತರ ರೈಲ್ವೆ ಹಳಿಗಳ ಬ್ಯಾರಿಕೇಡ್ ಅಳವಡಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿತ್ತು.
ಅರಣ್ಯದಂಚಿನ ಗ್ರಾಮಗಳಲ್ಲಿ ಜೀವ ಮತ್ತು ಬೆಳೆ ಹಾನಿ ಉಂಟುಮಾಡುತ್ತಿರುವ ಕಾಡಾನೆ– ಕಾಡೆಮ್ಮೆಗಳ ಹಾವಳಿ ತಡೆಗೆ ಪರ್ಯಾಯ ಮಾರ್ಗೋಪಾಯಗಳ ಬಗ್ಗೆ ಅಧ್ಯಯನ ನಡೆಸಲಾಗುತ್ತಿದೆ. ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಪ್ರತಿ ಕಿ.ಮೀ.ಗೆ 1.50 ಕೋಟಿ ವೆಚ್ಚವಾಗುತ್ತಿದೆ. ಅಗತ್ಯದಷ್ಟು ರೈಲ್ವೆ ಹಳಿಗಳೂ ಸಿಗುವುದಿಲ್ಲ.
ತಮಿಳುನಾಡು ಅಳವಡಿಸಿರುವ ಉಕ್ಕಿನ ಹಗ್ಗದ ತಡೆಗಳಿಗೆ (ಸ್ಟೀಲ್ ರೋಪ್) ಪ್ರತಿ ಕಿ.ಮೀ 45 ಲಕ್ಷ ವೆಚ್ಚವಾಗುತ್ತದೆ. ಈ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಬೇಕು. ರಾಜ್ಯದಲ್ಲಿ ಈಗಾಗಲೇ 312 ಕಿ.ಮೀ ರೈ ಲ್ವೆ ಬ್ಯಾರಿಕೇ ಡ್ ಅಳವಡಿಸಲಾಗಿದೆ. ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಮುನ್ನ ಮತ್ತು ಅಳವಡಿಕೆ ನಂತರದ ಜೀವಹಾನಿ ಮತ್ತು ಬೆಳೆಹಾನಿ ಕುರಿತು ತುಲನಾತ್ಮಕ ವರದಿ ಸಲ್ಲಿಸಬೇಕು ಎಂದು ಅರಣ್ಯ ಸಚಿವ ಈಶ್ವರ ಖಂ ಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.(ಸಂಸ್ಥೆಯ ಸಂಸ್ಥೆಯ ಆಹ್ವಾನದ ಮೇ ರೆಗೆ ಪ್ರತಿನಿಧಿಯುಭೇಟಿ ನೀಡಿದ್ದರು)

**ಭೂಕುಸಿತದ ಮುನ್ನೆಚ್ಚರಿಕೆ ವ್ಯವಸ್ಥೆ**

ವಯನಾಡ್ ಭೂಕುಸಿತ ಹಾಗೂ ಸಾವುನೋವಿನ ನಂತರ ಆ ಪ್ರದೇಶದ ನಿರಂತರ ಅಧ್ಯಯನ ನಡೆಸಿದ ಅಮೃತ ವಿಶ್ವವಿದ್ಯಾಲಯದ ತಜ್ಞರು, ನಂತರ ಇಂತಹ ಭೂಕುಸಿತದ ಇತರೆ ಪ್ರದೇಶಗಳಿಂದಲೂ ಮಣ್ಣು ಸಂಗ್ರಹಿಸಿದ್ದಾರೆ.
ವಿಶ್ವವಿದ್ಯಾಲಯದ ವೈರ್ಲೆಸ್ ನೆಟ್ವರ್ಕ್ಸ್ ಮತ್ತು ಅಪ್ಲಿಕೇಶನ್ ವಿಭಾಗದ ಮುಖ್ಯಸ್ಥೆ ಮನೀಶಾ ರಮೇಶ್ ಮತ್ತು ಅವರ ತಂಡದ ಶಬರಿ ರಮೇಶ್, ಇಂದುಕಲಾ, ನಿತಿನ್ ಅವರು ಸಂಗ್ರಹಿಸಿದ ಮಣ್ಣನ್ನು ನಿರಂತರ ಪ್ರಯೋಗಕ್ಕೆ ಒಳಪಡಿಸಿ, ಅವುಗಳ ಧಾರಣಾ ಸಾಮರ್ಥ್ಯ, ನೀರು ಇಂಗಿಸಿಕೊಳ್ಳುವ, ಸಂಗ್ರಹಿಸುವ ಹಾಗೂ ಕರಗುವ ಬಗೆ, ಪದರಗಳ ರಚನೆಯನ್ನು ನಿರಂತರವಾಗಿ ಅಧ್ಯಯನಕ್ಕೆ ಒಳಪಡಿಸಿದ್ದಾರೆ. ಈ ಎಲ್ಲ ಪ್ರಯೋ ಗಗಳ ಆಧಾರದಲ್ಲಿ ಹಿಮಾಲಯ ಪ್ರದೇಶಗಳ ಮಾದರಿಯಲ್ಲಿ ಭೂಕುಸಿತದ ಮುನ್ಸೂಚನೆ ನೀಡುವ ವ್ಯವಸ್ಥೆ ರೂಪಿಸಿದ್ದಾರೆ. ಪ್ರಯೋಗದ ಅನುಷ್ಠಾನ ಹಾಗೂ ಸಂತ್ರಸ್ತರ ಪರಿಹಾರಕ್ಕೆ ಮಾತಾ ಅಮೃತಾನಂ ದಮಯಿ ಮಠ 15 ಕೋಟಿ ನೆರವು ನೀಡಿದೆ ಎನ್ನುತ್ತಾರೆ ಮಠದ ಉಪಾಧ್ಯಕ್ಷ ಸ್ವಾಮಿ ಅಮೃತಸ್ವರೂಪಾನಂದ ಪುರಿ.



## ಅನಿಷ್ಠ ಪದ್ಧತಿಗಳ ವಿರುದ್ಧ ಧ್ವನಿ ಎತ್ತಿದವರು ಪ್ರೊ.ಬಿ.ಕೃಷ್ಣಪ್ಪ




**ಹರಿಹರ:** ಸ್ವಾತಂತ್ರ್ಯ ಪೂರ್ವ ಕಾಲದಿಂದಲೂ ದೇಶದಲ್ಲಿ ನಡೆ–ಯುತ್ತಿದ್ದ ಅನಿಷ್ಠ ಪದ್ಧತಿ ಎನ್ನಿಸಿಕೊಂಡಿದ್ದ ದೇವರ ಹೆಸರಿನಲ್ಲಿ ಬೆತ್ತಲೆ ಸೇವೆ, ದೇವದಾಸಿ ಪದ್ಧತಿ, ಜಾತಿಯ ಹೆಸರಿನಲ್ಲಿ ಮಲ ಹೊರುವ ಪದ್ಧತಿಗಳ ವಿರುದ್ಧ ಧ್ವನಿ ಎತ್ತಿದ ಏಕೈಕ ದಲಿತ ನಾಯಕ–ರೆಂದರೆ ಪ್ರೊ. ಬಿ.ಕೃಷ್ಣಪ್ಪ ಎಂದು ರಾಜ್ಯ ದಲಿತ ಸಂಘರ್ಷ ಸಮಿತಿ ಮಹಾತ್ಮ ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಡಿಎಸ್ಎಸ್‌ನ ರಾಜ್ಯ ಪ್ರಚಾರ ಸಮಿತಿ ಅಧ್ಯಕ್ಷರಾದ ಮುನಿಕೃಷ್ಣಪ್ಪ ಹೇಳಿದರು.
ನಗರದ ಹೊರ ಭಾಗದರಾಷ್ಟ್ರೀಯ ಹೆದ್ದಾರಿ 48ರ ಪಕ್ಕದಲ್ಲಿರುವ ಮೈತ್ರಿ ವನ–ಸಾಂಸ್ಕೃತಿಕ ಕಲಾ ಭವನದಲ್ಲಿ ನಡೆದ "ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಮಹಾತ್ಮ ಪ್ರೊ.ಬಿಕೃಷ್ಣಪ್ಪ ಸ್ಥಾಪಿತ ಸಂಘಟನೆಯ" ರಾಜ್ಯ ಮಟ್ಟದ ಸರ್ವ ಸದಸ್ಯರ ಸಾಮಾನ್ಯ ಸಭೆ ಹಾಗೂ ರಾಜ್ಯ ಮಟ್ಟದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.ರಾಜ್ಯದ ಶಿವಮೊಗ್ಗ ಜಿಲ್ಲೆ ಸೊರಬ ತಾಲೂಕಿನ ಚಂದ್ರಗುತ್ತಿ ಗ್ರಾಮದಲ್ಲಿರುವ ಪ್ರತಿವರ್ಷ ನಡೆಯುತ್ತಿದ್ದ ಚಂದ್ರಗುತ್ತೆಮ್ಮದೇವಿ ಜಾತ್ರೆಯ ಸಮಯದಲ್ಲಿ ರಾಜ್ಯದ, ಹಾಗೂ ಅಕ್ಕ–ಪಕ್ಕದ ರಾಜ್ಯದ ಅನೇಕ ಮಹಿಳೆಯರನ್ನು ಚಂದ್ರಗುತ್ತಿ ಗ್ರಾಮದ ಹತ್ತಿರದಲ್ಲಿನ ಸಿಂಗಾರ ಹೊಳೆಯಿಂದ ದೇವಸ್ಥಾನದವರೆಗೆ ಸುಮಾರು, 3 ಕಿ.ಮಿ ಉದ್ದದ ದಾರಿಯಲ್ಲಿ ನಡೆಸುತ್ತಿದ್ದ ಬೆತ್ತಲೆ ಸೇವೆಯ ಮೂಲಕ ದೇವದಾಸಿಯರನ್ನಾಗಿ ಬಿಡುವ ಅನಿಷ್ಠ ಪದ್ಧತಿಯ ವಿರುದ್ಧ ಧ್ವನಿ ಎತ್ತಿದ ಮೊದಲ ಮಹಾ ನಾಯಕರೆ–ಂದರೆ ದಿ.ಪ್ರೊ.ಬಿ.ಕೃಷ್ಣಪ್ಪರವರು ಅಂದು ನಡೆಸಿದ ಹೋರಾಟ ಅವಿಸ್ಮರಣೀಯವಾದುದ್ದಾಗಿದೆ ಎಂದರು.ತುಳಿತಕ್ಕೊಳಗಾಗಿರುವ. ದಲಿತರೆನ್ನಿಸಿಕೊಂಡಿರುವ ನಾವೆಲ್ಲಾ, ಶ್ರೇಷ್ಠರಲ್ಲಿಯೇ ಅತ್ಯಂತ ಶ್ರೇಷ್ಠರೆನ್ನಿಸಿಕೊಂಡಿರುವ ಬ್ರಾಹ್ಮಣರ ಮನೆಯಲ್ಲಿ ಪೂಜೆಗೊಳ್ಳುವ ದೇವರ ಫೋಟೋಗಳಿಗೆ ಪೂಜೆ ಸಲ್ಲಿಸುವುದನ್ನು ಬಿಟ್ಟು, ನಮ್ಮ ಏಳಿಗೆಗಾಗಿ ಹಗಲಿರುಳು ಶ್ರಮಿಸಿ ಅಮರರಾಗಿರುವ ನಮ್ಮ ದೇವರುಗಳಾದ ಅಂಬೇಡ್ಕರ್, ಬುದ್ಧ, ಬಸವ, ಕಾನ್ಸಿರಾಮ್, ಜ್ಯೋತಿ ಬಾಪುಲೆ, ಸಾವಿತ್ರಿ ಬಾಪುಲೆ ಅವರ ಫೋಟೋಗಳನ್ನು ಮನೆಗಳಲ್ಲಿಟ್ಟು ನಿತ್ಯ ಪೂಜಿಸಲು ದಲಿತರು ಮುಂದಾಗಬೇಕು. ಹಾಗೂ ಮಕ್ಕಳಿಗೆ ಅವರ ತತ್ವಸಿದ್ಧಾಂತಗಳ ಕುರಿತು ತಿಳಿ ಹೇಳಬೇಕೆಂದರು.1955 ರಲ್ಲಿ ಕಾಂಗ್ರೆಸ್ ಸರ್ಕಾರದ ಸಚಿವರಾಗಿದ್ದ ಅಂಬೇಡ್ಕರವರು, ತಂದೆಯ ಆಸ್ತಿಯಲ್ಲಿ ಮಹಿಳೆಯರಿಗೆ ಸಮಾನ ಪಾಲು ಸಿಗುವಂತೆ ಕಾಯ್ದೆ ಜಾರಿಗೆ ತರಲು ಒತ್ತಾಯಿಸಿದ್ದರು. ಆದರೆ, ಅವರಿಗೆ ಬಹುಮತ ಸಿಗದ ಕಾರಣಅಂದು ಸಚಿವ ಸ್ಥಾನಕ್ಕೆ ಅವರುರಾಜೀನಾಮೆ ನೀಡಿ ಚಳುವಳಿಯಲ್ಲಿ ಭಾಗವಹಿಸಿದ್ದರು. ಇಂದು ಕಾಂಗ್ರೆಸ್–ಬಿಜೆಪಿ ಸರ್ಕಾರಗಳು ಸಂವಿಧಾನವನ್ನು ಉಳಿಸುತ್ತಾರೆಂಬ ನಂಬಿಕೆ ನಮಗಿಲ್ಲ. ಅಂಬೇಡ್ಕರ್ ಅವರು ರಚಿಸಿದ ಸಂವಿದಾನಕ್ಕೆಧಕ್ಕೆಯಾದಲ್ಲಿ ನಾವುಗಳೆಲ್ಲಾ ಸುಮ್ಮನಿರುವುದಿಲ್ಲವೆಂದು ಎಚ್ಚರಿಕೆ ನೀಡಿದರು.
ರಾಜ್ಯ ಸಂಚಾಲಕ ಡಿ.ಆರ್ ಪಾಂಡುರಂಗ ಸ್ವಾಮಿ ಮಾತನಾಡಿ, ರಾಜ್ಯದ ಸಮಸ್ತ ದಲಿತರಿಗೆಲ್ಲಾಧ್ವನಿಯಾಗಿ. ಹೋರಾಟದ ಮೂಲಕ ಸರ್ಕಾರದ ಕಣ್ಣು ತೆರೆಸಿರುವ ನಮ್ಮೆಲ್ಲರ ಕಣ್ಮಣಿ, ಅಂಹಿಸೆಯಿಂದ ಬಳಲುತ್ತಿದ್ದ ಸ್ತ್ರೀ, ಪುರುಷರಿಗೆ ಮುಕ್ತಿ ಕೊಡಿಸಿದ ಮುಕ್ತಿದಾತ, ರಾಜ್ಯದ ದಲಿತರಲ್ಲಿ ಹೋರಾಟದ ಕಿಚ್ಚು ಹಚ್ಚಿದದಲಿತ ನಾಯಕ, ಕರ್ನಾಟಕದ ಅಂಬೇಡ್ಕರರೆಂದೇ ಖ್ಯಾತರಾಗಿದ್ದ ಪ್ರೊ.ಬಿ.ಕೃಷ್ಣಪ್ಪ ಅವರನ್ನು ಕಳೆದುಕೊಂಡಿರುವ ನಾವಿಂದು ನೋವನ್ನು ಅನುಭವಿಸುತ್ತಿದ್ದೇವೆ ಎಂದರು.ರಾಜ್ಯದ ಸಮಸ್ತ ದಲಿತರಲ್ಲಿ ಹೋರಾಟದ ಕಿಚ್ಚು ಮರುಕಳಿಸಬೇಕೆಂದರೆ, ಅವರತತ್ವ ಆದರ್ಶಗಳನ್ನು ಪಾಲಿಸಬೇಕೆಂದರೆ. ರಾಜ್ಯದ ದಲಿತರೊಮ್ಮೆ ಇವರ ಸಮಾಧಿ ಇರುವ ಮೈತ್ರಿ ವನವೆಂಬ ಈ ಸ್ಥಳಕ್ಕೊಮ್ಮೆ ಬಂದು ದಿ.ಪ್ರೊ.ಬಿ.ಕೃಷ್ಣಪ್ಪನವರ ಸಮಾಧಿಗೆ ನಮಸ್ಕರಿಸಬೇಕು ಎಂದು ಹೇಳಿದರು.
ರಾಜ್ಯ ಸಂಘಟನಾ ಸಂಚಾಲಕರಾದ ಕೊಡಿಗಲ್ ರಮೇಶ್, ತರಿಕೆರೆ ಎನ್.ವೆಂಕಟೇಶ್, ಮಾರುತಿ ಬಿ ಹೊಸಮನಿ, ಎ.ಎಲ್ ಭಾಸ್ಕರ್, ಟಿ.ಎನ್‌ಗೊವಿಂದಪ್ಪ, ಶಿವಾನಂದ ಎಂ ಸಾವಳಗಿ, ಭರಮಪ್ಪ, ಟಿ.ಎಂಅಂಜಯ್ಯ, ಎಚ್ ಮುನಿಯಪ್ಪ, ಸುನಿತಾರಾಜ್, ಭವಾನಿ ಎಂ.ವಿ ಬಾಳೆಹೊನ್ನೂರು, ತಿಪ್ಪಮ್ಮ, ಜಿಲ್ಲಾ ಸಂಚಾಲಕರಾದ ಹರಮಗಟ್ಟರಂಗಪ್ಪ, ಆರ್ ಶ್ರೀನಿವಾಸ್, ಸತೀಶ್ ಭಟ್ಟರ್ಕಿ, ಯಶೋಧರ ಭಜಂತ್ರಿ ಸಂಗಮ್, ಹುಲಿಕುಂಟೆಅಶ್ವಥಪ್ಪ, ತಮ್ಮಣ್ಣಕಾನಗಡ್ಡಿ, ಹನುಮಂತಪ್ಪ ಡಿ, ವಿಭಾಗಿಯ ಸಂಚಾಲಕ ಕೃಷ್ಣಪ್ಪಕಡೂರು ಪ್ರೊ. ಬಿ.ಕೃಷ್ಣಪ್ಪನವರ ಹೋರಾಟಗಳ ಕುರಿತು ಮಾತನಾಡಿದರು. ರಾಜ್ಯ ಸಮಿತಿ ಸದಸ್ಯರಾದ ಆರ್.ಶಿವಕುಮಾರ್, ಎಂ.ಎಸ್ ಶಂಕರ್, ಸತೀಶ್‌ಕಂಟಲಗೆರೆ, ತಾಲೂಕು ಸಮಿತಿ ಸದಸ್ಯರಾದ ಯಮನೂರು ಆರ್.ಪಿ, ಸಂತೋಷ ಎನ್.ಜಿ, ಕರಿಬಸಪ್ಪ ಗಂಗನರಸಿ, ಪ್ರಕಾಶ ಎ.ಕೆ, ತಿಪ್ಪೇಶದೇವರೆಡ್ಡಿ, ರುದ್ರೇಶಚನ್ನಗಿರಿ, ಗಣೇಶ, ಹರೀಶ್ ಬೇತೂರು, ಚಿಕ್ಕಬಿದರಿ ನಾಗಪ್ಪ, ಫಕ್ಕೀರೇಶ್‌ಯಾದವ ಇದ್ದರು. ಕಾರ್ಯಕ್ರಮ ಪ್ರಾರಂಭಕ್ಕೂ ಮುನ್ನ ಸಮಸ್ತ ದಲಿತರು ಪ್ರೊ.ಬಿ.ಕೃಷ್ಣಪ್ಪನವರ ಸಮಾಧಿಗೆ ಪೂಜೆ ಸಲ್ಲಿಸಿ, ನಮಿಸಿದರು.

## ಬಾಬ್ರಿ ಮಸೀದಿ ಒಡೆದು ರಾಮ ಮಂದಿರ ನಿರ್ಮಾಣವಾದರೂ ಒಬ್ಬನೇ ಒಬ್ಬ ಮುಸ್ಲಿಂ ವಿರೋಧಿಸಲಿಲ್ಲ: ಬಸವರಾಜ ರಾಯರೆಡ್ಡಿ

**ಕೊಪ್ಪಳ:** ಬಾಬ್ರಿ ಮಸೀದಿ ಒಡೆದು ರಾಮ ಮಂದಿರ ನಿರ್ಮಾಣ ಮಾಡಿದರು, ಆದರೆ ಒಬ್ಬನೇ ಒಬ್ಬ ಮುಸ್ಲಿಂ ಸಹ ಅದನ್ನು ವಿರೋಧಿಸಲಿಲ್ಲ ಹಿಂದೂಗಳಿಗೆ ಹೋಲಿಕೆ ಮಾಡಿದರೆ ಮುಸ್ಲಿಮರು ಶೈಕ್ಷಣಿಕವಾಗಿ ಹಿಂದುಳಿದಿದ್ದಾರೆ ಎಂದು ಕಾಂಗ್ರೆಸ್ ಶಾಸಕ, ವಿಶೇಷ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಹೇಳಿದ್ದಾರೆ.
ಕೊಪ್ಪಳದಲ್ಲಿ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಬಸವರಾಜ ರಾಯರೆಡ್ಡಿ, ಮುಸ್ಲಿಮರು ನಮ್ಮ ದೇಶದವರೇ, ಅವರು ಮಂಗಳ ಗ್ರಹದಿಂದ ಬಂದವರಲ್ಲ. ಹಿಂದೂಗಳಿಗೆ ಹೋಲಿಕೆ ಮಾಡಿದರೆ ಮುಸ್ಲಿಮರು ಶೈಕ್ಷಣಿಕವಾಗಿ ಹಿಂದುಳಿದಿದ್ದಾರೆ ಬಾಬ್ರಿ ಮಸೀದಿ ಒಡೆದು ರಾಮ ಮಂದಿರ ನಿರ್ಮಾಣ ಮಾಡಿದರೂ ಸಹ ಯಾವುದೇ ಒಬ್ಬ ಮುಸ್ಲಿಮರುದನ್ನು ವಿರೋಧಿಸಲಿಲ್ಲ ಎಂದು ಹೇಳಿದ್ದಾರೆ.
ಇದೇ ವೇಳೆ ಸಿಎಂ ಸಿದ್ದರಾಮಯ್ಯ ಬಗ್ಗೆಯೂ ಮಾತನಾಡಿರುವ ರಾಯರೆಡ್ಡಿ, ಸಿದ್ದರಾಮಯ್ಯ ಉತ್ತಮ ಆಡಳಿತ ನೀಡಿದ್ದಾರೆ. ಅವರು ಬಡವರ ಪರ ಕಾಳಜಿ ಹೊಂದಿದ್ದಾರೆ. ಅವರು 5 ವರ್ಷ ಸಿಎಂ ಆಗಿರಬೇಕು ಅವಧಿ ಪೂರ್ಣಗೊಳಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಕೊಪ್ಪಳ ಜಿಲ್ಲೆಗೆ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಬೇಕು ಎನ್ನುವ ಬೇಡಿಕೆಯಿದೆ. ಈ ಬಜೆಟ್ ನಲ್ಲಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಮಂಜೂರು ಮಾಡಿಸುವ ಪ್ರಯತ್ನ ಮಾಡುವೆ ಎಂದು ಭರವಸೆ ನೀಡಿದರು.
ಇನ್ನು ವಸತಿ ಸಚಿವ ಜಮೀರ್ ಬಗ್ಗೆಯೂ ಮೆಚ್ಚುಗೆ ವ್ಯಕ್ತಪಡಿಸಿರುವ ರಾಯರೆಡ್ಡಿ, ಜಮೀರ್ ಒಳ್ಳೆಯ ಹೃದಯವಂತ, ಬಡವರ ಪರ ಕಾಳಜಿಯುಳ್ಳ ನಾಯಕ ಎಂದು ಬಣ್ಣಿಸಿದ್ದಾರೆ. ಜಮೀರ್ ಹುಟ್ಟು ಶ್ರೀಮಂತನಾಗಿದ್ದಾನೆ. ಆತನಿಗೆ ರಾಜಕೀಯಕ್ಕೆ ಬಂದು ಹಣ ಗಳಿಸುವ ಅವಶ್ಯಕತೆಯಿಲ್ಲ. ಆದ–ರೆ, ಬಡವರ ಬಗ್ಗೆ ಹೆಚ್ಚು ಕಾಳಜಿಯಿದೆ, ಆತನಿಗೆ ಒಳ್ಳೆಯದಾಗಲಿ ಎಂದು ಹಾರೈಸುವುದಾಗಿ ತಿಳಿಸಿದ್ದಾರೆ.

## ಮೆಸ್ಕಾಂ ಜನಸಂಪರ್ಕ ಸಭೆ

**ಶಿವಮೊಗ್ಗ:** ಮೆಸ್ಕಾಂ ಶಿವಮೊಗ್ಗ ನಗರ ಉಪವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ರವರ ಕಚೇರಿ, ನಗರ ಉಪವಿಭಾಗ–2, ಎನ್.ಟಿ.ರಸ್ತೆ, ನ್ಯೂಮಂಡ್ಲಿ, ಶಿವಮೊಗ್ಗ ಕಛೇರಿಯಲ್ಲಿ ಫೆ.21 ರಂದು ಬೆಳಿಗ್ಗೆ 11.00 ರಿಂದ ಮಧ್ಯಾಹ್ನ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ.
ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗ ಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ಮಾ.8 ರಂದು ಲೋಕ ಅದಾಲತ್

**ದಾವಣಗೆರೆ:** ಜಿಲ್ಲಾ ನ್ಯಾಯಾಲಯ ಸೇರಿದಂತೆ ಎಲ್ಲಾ ತಾಲ್ಲೂಕಿನ ನ್ಯಾಯಾಲಯಗಳಲ್ಲಿ ಮಾರ್ಚ್ 8 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು ಇಲ್ಲಿ ರಾಜೀಯಾಗಬಲ್ಲ ಎಲ್ಲ ಪ್ರಕರಣಗಳನ್ನು ಸಂಧಾನದ ಮೂಲಕ ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ.ಎನ್ ಹೆಗಡೆ ತಿಳಿಸಿದರು.

ಮಂಗಳವಾರ(ಫೆ.18) ರಂದು ನ್ಯಾಯಾಲಯದ ಆವರಣದಲ್ಲಿನ ವಕೀಲರ ಭವನದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತಾನಾಡಿದರು. ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಅತಿ ಹೆಚ್ಚು ಪ್ರಕರಣಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಉದ್ದೇಶಿಸಲಾಗಿದೆ. ಇದರ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜಿಲ್ಲೆಯಲ್ಲಿರುವ ಎಲ್ಲಾ ನ್ಯಾಯಾಲಯಗಳ ವ್ಯಾಪ್ತಿಯಲ್ಲಿ ಲೋಕ್ ಅದಾಲತ್ ನಡೆಯಲಿದೆ.

ಈ ಲೋಕ್ ಅದಾಲತ್‌ನಲ್ಲಿ ರಾಜಿಯಾಗಬಲ್ಲ ಎಲ್ಲಾ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪರಿಹಾರ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಭೂಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಎಂ.ಎಂ.ಡಿ.ಆರ್. ಕಾಯ್ದೆಯಡಿಯ ಪ್ರಕರಣಗಳನ್ನು ಲೋಕ್ ಅದಾಲತ್ ನಲ್ಲಿ ಪರಿಹರಿಸಿಕೊಳ್ಳಬಹುದು. ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು(ವಿಚ್ಛೇಧನ ಹೊರತುಪಡಿಸಿ), ಪಿಂಚಣಿ ಪ್ರಕರಣಗಳು, ವೇತನ ಭತ್ಯೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ಕೈಗಾರಿಕೆ ಕಾರ್ಮಿಕರ ವೇತನ, ಕಾರ್ಮಿಕ ವಿವಾದ ಇತ್ಯಾದಿ ಪ್ರಕರಣಗಳನ್ನು ಪರಸ್ಪರ ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಬಹುದು. ಹಾಗೂ ಸಿವಿಲ್ ವ್ಯಾಜ್ಯಗಳಲ್ಲಿ ಪಕ್ಷಗಾರರು ಲೋಕ್ ಅದಾಲತ್‌ನಲ್ಲಿ ರಾಜಿಯಾದರೆ ಪಕ್ಷಗಾರರು ಸರ್ಕಾರಕ್ಕೆ ಪಾವತಿಸಿರುವ ನ್ಯಾಯಾಲಯದ ಶುಲ್ಕವನ್ನು ವಾಪಸ್ ಕೊಡಲು ಅವಕಾಶವಿದೆ ಎಂದರು.

1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎಂ.ಹೆಚ್. ಅಣ್ಣಯ್ಯನವರ್ ಮಾತನಾಡಿ ಲೋಕ ಅದಾಲತ್‌ನ ಮೂಲಕ ಸಾರ್ವಜನಿಕರಿಗೆ ಶೀಘ್ರ ಮತ್ತು ಕಡಿಮೆ ಖರ್ಚಿನಲ್ಲಿ ನ್ಯಾಯ ಒದಗಿಸುವಲ್ಲಿ ವಕೀಲರ ಪಾತ್ರ ಬಹು ಮುಖ್ಯವಾಗಿದೆ ಎಂದರು. ವಕೀಲರು ನ್ಯಾಯಾಲಯಕ್ಕೆ ಬರುವ ಕಕ್ಷಿದಾರರಿಗೆ ಅತ್ಯುತ್ತಮ ಮಾರ್ಗಗಳನ್ನು ನೀಡಬೇಕೆಂದು ಕರೆ ನೀಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ.ಮ. ಕರೆಣ್ಣನವರ ಮಾತನಾಡಿ ಲೋಕ್ ಅದಾಲತ್‌ನಲ್ಲಿ ಉಭಯ ಪಕ್ಷಗಾರರು ಪರಸ್ಪರ ಒಪ್ಪಿದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆಶಯದಂತೆ ಲೋಕ್ ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯಾರ್ಥಪಡಿಸಲು ಲೋಕ್–ಅದಾಲತ್ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸಾರ್ವಜನಿಕರು ವಿಶೇಷವಾಗಿ ಕಕ್ಷಿಗಾರರು ಹೆಚ್ಚಿನ ಸಂಖ್ಯೆಯಲ್ಲಿ ಲೋಕ ಅದಾಲತ್‌ನ ಸದುಪಯೋಗ ಪಡಿಸಿಕೊಳ್ಳಬೇಕೆಂದು

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್, ದಾವಣಗೆರೆ ಘಟಕದ ನ್ಯಾಯಾಧೀಶರು, ವಕೀಲ ಸಂಘದ ಎಲ್ಲಾ ಪದಾಧಿಕಾರಿಗಳು, ಹಿರಿಯ ಮತ್ತು ಕಿರಿಯ ಹಾಗೂ ಮಹಿಳಾ ನ್ಯಾಯವಾದಿಗಳು ಭಾಗವಹಿಸಿದ್ದರು.

## ನೇರ ಸಂದರ್ಶನ

**ಚಿಕ್ಕಮಗಳೂರು:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಚಿಕ್ಕಮಗಳೂರು ಕಛೇರಿಯಲ್ಲಿ ಫೆಬ್ರವರಿ 21 ರಂದು ಬೆಳಿಗ್ಗೆ 10.30 ಗಂಟೆಗೆ ಖಾಸಗಿ ಕಂಪನಿಯಾದ ಯುತ್ ಫೊರ್ ಜಾಬ್ಸ್, ಬೆಂಗಳೂರು ಇವರು ತಮ್ಮಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಉಚಿತ ಪ್ರವೇಶವಾಗಿದ್ದು, ಎಸ್‌ಎಸ್‌ಎಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 30 ವರ್ಷ ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ: 9945198500/ 08262–295538 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

**ಗದಗ :** ಗಜೇಂದ್ರಗಡ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಮಾಲ್ಕೀ ನಾಗರೀಕ ಸೌಲಭ್ಯಕ್ಕೆ ಕಾಯ್ದಿರಿಸಿದ ಜಾಗೆಯನ್ನು ರೋಣ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಮಂಜೂರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮಗಳ ಪ್ರಕಾರ ದಿ: 30–9–2024 ರಂದು ಜರುಗಿದ ಪುರಸಭೆಯ ಸಾಮಾನ್ಯ ಸಭೆಯ ಠರಾವು ಪ್ರಕಾರ 30 ವರ್ಷದ ಅವಧಿಗೆ ಮೀರದ ಹಾಗೆ ಲೀಸ್ ಆಧಾರದ ಮೇಲೆ ನಿವೇಶನಗಳನ್ನು ಡಾ.ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ನಿವೇಶನ ಹಂಚಿಕೆ ಮಾಡಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಈ ಬಗ್ಗೆ ಯಾರಾದರೂ ಸಲಹೆ/ ಸೂಚನೆ / ಆಕ್ಷೇಪಣಗೆಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ 7 ದಿನಗಳೊಳಗೆ ಲಿಖಿತವಾಗಿ ಗಜೇಂದ್ರಗಡ ಪುರಸಭೆಗೆ ಸಲ್ಲಿಸಬಹುದಾಗಿದೆ ಎಂದು ಗಜೇಂದ್ರಗಡ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂಗಾರು ಮತ್ತು ಹಿಂಗಾರು ಹಂಗಾಮಿನ ತಿರಸ್ಕೃತಗೊಂಡ ಬೆಳೆ ವಿಮೆ ಪ್ರಸ್ತಾವನೆಗಳಿಗೆ ಆಕ್ಷೇಪಣೆ ಸಲ್ಲಿಸುವ ಕುರಿತು

**ಗದಗ :** ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆ ಅಡಿ 2023–24 ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನ ಬೆಳೆ ವಿಮೆ ಪ್ರಸ್ತಾವನೆಗಳು ಬೆಳೆ ಸಮೀಕ್ಷೆಯೊಂದಿಗೆ ಹೊಂದಾಣಿಕೆಯಾಗದೆ ಇರುವ ಗದಗ ತಾಲೂಕಿನ ಮುಂಗಾರು ಹಂಗಾಮಿನ 27 ಹಾಗೂ ಹಿಂಗಾರು ಹಂಗಾಮಿನ 1570 ಒಟ್ಟಾರೆ 1597 ಬೆಳೆ ವಿಮೆ ಪ್ರಸ್ತಾವನೆಗಳನ್ನು ಅಂತಿಮವಾಗಿ ವಿಮಾ ಸಂಸ್ಥೆಯವರು ತಿರಸ್ಕರಿಸಿರುತ್ತಾರೆ. ಅಂತಹ ಪ್ರಸ್ತಾವನೆಗಳ ಮಾಹಿತಿಯನ್ನು ಆಯಾ ರೈತ ಸಂಪರ್ಕ ಕೇಂದ್ರಗಳ/ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಲಾಗಿದ್ದು, ರೈತರು ತಮ್ಮ ಆಕ್ಷೇಪಣೆಗಳೆನಾದರೂ ಇದ್ದಲ್ಲಿ ಈ ಕೆಳಕಂಡ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ. 2023–24 ರ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ನಮೂದಾದ ಬೆಳೆಯ ಉತಾರ ಅಥವಾಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೆಳೆ ಮಾರಾಟ ಮಾಡಿದ್ದರೆ ಅದರ ರಸೀದಿ ಅಥವಾ ಎ.ಪಿ.ಎಮ್.ಸಿ ಯಲ್ಲಿ ಸದರಿ ಬೆಳೆ ಮಾರಾಟ ಮಾಡಿದ್ದರ ರಸೀದಿ ಫೆಬ್ರುವರಿ 28 ರೊಳಗಾಗಿ ಸಹಾಯಕ ಕೃಷಿ ನಿರ್ದೇಶಕರು, ಗದಗ ಕಚೇರಿಗೆ ಮೇಲ್ಕಂಡ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೃಷಿ ಅಧಿಕಾರಿಗಳು, ರೈತ ಸಂಪರ್ಕ ಕೇಂದ್ರ, ಹುಲಕೋಟಿ/ಬೆಟಗೇರಿ ಅಥವಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರು, ಗದಗ ಇವರನ್ನು ಸಂಪರ್ಕಿಸಲು ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಉಪ್ಪಿನಕುದ್ರು ಗೊಂಬೆಯಾಟ ಯಕ್ಷಗಾನ ಅಕಾಡೆಮಿಯಿಂದ

## ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಯಕ್ಷಗಾನ ಗೊಂಬೆಸಿರಿ ರಾಜ್ಯ ಪ್ರಶಸ್ತಿ ಪ್ರಧಾನ




**ದಾವಣಗೆರೆ:** ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಉಪ್ಪಿನಕುದ್ರು ಗೊಂಬೆಯಾಟ ಯಕ್ಷಗಾನ ಅಕಾಡೆಮಿಯಿಂದ ಇತ್ತೀಚಿಗೆ ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ಯಕ್ಷರಂಗ, ಯಕ್ಷಗಾನ, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಯಕ್ಷಗಾನ ಗೊಂಬೆಸಿರಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿ, ಸನ್ಮಾನಿಸಲಾಯಿತು. ಎಂದು ಅಕಾಡೆಮಿಯ ಅಧ್ಯಕ್ಷರಾದ ಭಾಸ್ಕರ್ ಕೊಗ್ಗ ಕಾಮತ್ ತಿಳಿಸಿದ್ದಾರೆ.

ವಾಣಿಜ್ಯ ನಗರಿ ದಾವಣಗೆರೆಯಲ್ಲಿ ಯಕ್ಷಗಾನ ಸೇರಿದಂತೆ ಕಲೆ, ಸಾಹಿತ್ಯ, ಸಂಗೀತ ಹೀಗೆ ಸಾಂಸ್ಕೃತಿಕ ಚಟುವಟಿಕೆಗಳನ್ನು ಕಳೆದ ನಾಲ್ಕು ದಶಕಗಳಿಂದ ನಿರಂತರವಾಗಿ ಕಠಿಣ ಪರಿಶ್ರಮದಿಂದ ಯಾವುದೇ ಸ್ವಾರ್ಥ ಇಲ್ಲದೇ

ಹೊಸ ಹೊಸ ಪರಿಕಲ್ಪನೆಗಳೊಂದಿಗೆ ಸಾಧನೆಯ ಜತೆಯಲ್ಲಿ ದಾವಣಗೆರೆಯ ಮಹಿಳೆಯರಿಗೆ ಯಕ್ಷಗಾನ ಪ್ರದರ್ಶನ ಯಶಸ್ವಿಗೊಳಿಸಿದ ಶೆಣೈಯರಿಗೆ ಅಭಿಮಾನದಿಂದ ಅಭಿನಂದಿಸಲಾಗಿದೆ ಎಂದು ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಗೀತಾಂಜಲಿ ಭಾಸ್ಕರ್ ಕಾಮತ್ ಪ್ರಕಟಿಸಿದ್ದಾರೆ. ವೇದಿಕೆಯಲ್ಲಿ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಶ್ರೀಮತಿ ಸನ್ನಿಧಿ ಸಂದೀಪ್ ಶೆಣೈ, ಕುಮಾರಿ ಮಾನ್ಯ ಶೆಣೈಯವರು ಉಪಸ್ಥಿತರಿದ್ದರು.

## ಸದೃಢ ದೇಹದಲ್ಲಿ ಸದೃಢ ಮನಸ್ಸಿರಬೇಕು ಚಂದ್ರಶೇಖರ ಬಿ ಕಂದಕೂರ

**ರೋಣ :–** ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಮಲ್ಲಾಪುರ ಗ್ರಾಮ ಪಂಚಾಯಿತಿಯಲ್ಲಿ ಮಹಿಳಾ ಸಂಜೀವಿನಿ ಒಕ್ಕೂಟ ಜಂಟಿ ಆಶ್ರಯದಲ್ಲಿ ಉಚಿತ ಯೋಗ ಶಿಬಿರವನ್ನು ಹಮ್ಮಿಕೊಂಡಿದ್ದರು ಈ ಕಾರ್ಯಕ್ರಮದಲ್ಲಿ ತಾಲೂಕ ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ ಕಂದಕೂರ ಉದ್ಘಾಟಿಸಿ ಮಾತನಾಡಿದರು..

ಪ್ರತಿಯೊಬ್ಬ ಮಹಿಳೆಯರು ಕೂಡ ಯೋಗದ ಸದುಪಯೋಗ ಪಡೆದುಕೊಳ್ಳಲು ಹಾಗೂ ಸದೃಢ ದೇಹದಲ್ಲಿ ಸದೃಢ ಮನಸ್ಸಿರಬೇಕು, ಯೋಗಾಸನವು ನಿರಂತರ ಅಭ್ಯಾಸದಿಂದ ವ್ಯಕ್ತಿಯ ಒತ್ತಡವನ್ನು ನಿವಾರಿಸಬಹುದು. ದೇಹ ಮತ್ತು ಇಂದ್ರಿಯಗಳ ನಿಯಂತ್ರಣ ದೊಂದಿಗೆ ಮಾನವ ಪ್ರಜ್ಞೆಯನ್ನು ಪರಿವರ್ತಿಸುತ್ತದೆ ಮನಸ್ಸು, ದೇಹ ಮತ್ತು ಆತ್ಮ ಸೇರಿದ ಎಲ್ಲಾ ಮೂರು ಅಂಶಗಳನ್ನು ಶುದ್ಧೀಕರಿಸಲು ನೆರವಾಗುತ್ತದೆ. ಇದು ನಾವು ಮತ್ತು ಪ್ರಕೃತಿಯ ಜೊತೆಗೆ ಸಂಪರ್ಕ ವನ್ನು ಕಲ್ಪಿಸುವ ಮೂಲಕ ನಮ್ಮ ನೈಜಕತೆಯ ಹತ್ತಿರಕ್ಕೆ ಕೊಂಡೊಯ್ಯುತ್ತದೆ ಎಂದರು ವಿವರಿಸಿದರು. ಪ್ರಾಸ್ತಾವಿಕ ಮಾತನಾಡಿದಂತ ಡಾ. ಎನ್ ಕೆ ಹಿರೇಗೌಡರ್ ಮಾತನಾಡಿ ನಮ್ಮ ಭಾಗದ ಮಹಿಳೆಯರಿಗೆ ಆರೋಗ್ಯದ ಸಮಸ್ಯೆ ತುಂಬಾ



ಕಾಡುತ್ತಿರುವುದರಿಂದ ಈ ಒಂದು ವಾರದ ಯೋಗದ ಸದುಪಯೋಗವನ್ನು ಪಡೆದುಕೊಳ್ಳಲು ಗ್ರಾಮ ಪಂಚಾಯಿತಿ ಮಟ್ಟದ ಮಹಿಳೆಯರಿಗೆ ಅವಕಾಶವನ್ನು ತಾಲೂಕ ಪಂಚಾಯಿತಿಯವರು ನೀಡಿರುವುದು ತುಂಬಾ ಸಂತೋಷ ವಾದ ವಿಷಯವೆಂದು ಎಂದು ತಿಳಿಸಿದರು...

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಅಧ್ಯಕ್ಷರಾದ ಲಲಿತಾ ಕಲ್ಲನಗೌಡ್ರು, ಒಕ್ಕೂಟದ ಕಾರ್ಯದರ್ಶಿಗಳಾದ ಶ್ರೀಮತಿ ಶೈಲಾ ಕುಷ್ಟಗಿ ಹಾಗೂ ತಾಲೂಕು ಕಾರ್ಯಕ್ರಮದ ವ್ಯವಸ್ಥಾಪಕರಾದ ಗುರು ವೀರಾಪುರ್ ಮುಖ್ಯ ಪುಸ್ತಕ ಬರಹಗಾರ ಶ್ರೀಮತಿ ಈರಮ್ಮ ಕಲ್ಲನಗೌಡ ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಹಾಗೂ ಸ್ವ ಸಹಾಯ ಸಂಘದ ಸದಸ್ಯರು ಈ ಕಾರ್ಯಕ್ರಮದಲ್ಲಿ ಬಾಗವಹಿಸಿದರು.

## ನಾಗಾವಿ ಗ್ರಾಮ ಪಂಚಾಯತಿಯ ರಾಜೀವ ಗಾಂಧಿ ಸೇವಾ ಕೇಂದ್ರದ ನೂತನ ಕಟ್ಟಡದ ಉದ್ಘಾಟನೆ

**ಗದಗ:** ನಾಗಾವಿ ಗ್ರಾಮದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ, ತಾಲೂಕ ಪಂಚಾಯತ, ಗ್ರಾಮ ಪಂಚಾಯತ ಕಾರ್ಯಾಲಯ, ನಾಗಾವಿ ಇವರ ಆಶ್ರಯದಲ್ಲಿ 2019–2020 ನೇ ಸಾಲಿನ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ರಾಜೀವ ಗಾಂಧಿ ಪಂಚಾಯತ ಸಶಕ್ತಿಕರಣ ಯೋಜನೆಗಳ ಒಗ್ಗೂಡಿಸುವಿಕೆಯಿಂದ ನಾಗಾವಿ ಗ್ರಾಮ ಪಂಚಾಯತಿಯ ರಾಜೀವ ಗಾಂಧಿ ಸೇವಾ ಕೇಂದ್ರದ ನೂತನ ಕಟ್ಟಡವನ್ನು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಗ್ರಾಮಸ್ಥರು ಅಧಿಕಾರಿಗಳು ಹಾಜರಿದ್ದರು.



## ನಗರ ಗ್ರಂಥಾಲಯ ಪ್ರಾಧಿಕಾರಕ್ಕೆ ರೂ.1.99 ಕೋಟಿ

**ದಾವಣಗೆರೆ:** ಬರುವ ಆರ್ಥಿಕ ವರ್ಷಕ್ಕೆ ನಗರ ಗ್ರಂಥಾಲಯ ಪ್ರಾಧಿಕಾರಕ್ಕೆ ರೂ.1,99,80000 ಗಳ ಬಜೆಟ್ ನೀಡಿ ಮಹಾಪೌರರು ಹಾಗೂ ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷರಾದ ಕೆ. ಚಮನ್‌ಸಾಬ್ ಅನುಮೋದನೆ ನೀಡಿದ್ದಾರೆ ಎಂದು ನಗರ ಮುಖ್ಯ ಗ್ರಂಥಾಲಯಾಧಿಕಾರಿ ಪಿ.ಆರ್.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಮಂಗಳವಾರ (ಫೆ.18) ರಂದು ನಗರ ಕೇಂದ್ರ ಗ್ರಂಥಾಲಯ ಉಪನಿರ್ದೇಶಕರ ಕಚೇರಿಯಲ್ಲಿ ಆಯೋಜಿಸಲಾಗಿದ್ದ 2025–26 ನೇ ಸಾಲಿನ ಆಯವ್ಯಯ ಸಭೆಯಲ್ಲಿ ಬಜೆಟ್ಗೆ ಅನುಮೋದನೆ ನೀಡಲಾಯಿತು. ದೇವರಾಜ ಅರಸ್ ಬಡಾವಣೆ ಗ್ರಂಥಾಲಯದ ವಿಸ್ತರಣೆ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯ ಮೂಲಕ ನಿರ್ವಹಿಸಲು ಅನುಮೋದನೆ ನೀಡಿದರು. ಬಡಾವಣೆ ಪೊಲೀಸ್ ಠಾಣೆ ಎದುರಿಗಿರುವ ಸಿಲ್ವರ್ ಜ್ಯುಬಿಲಿ ಶಾಖಾ ಗ್ರಂಥಾಲಯಕ್ಕೆ ಓದುಗರ ಅನುಕೂಲಕ್ಕೆ ಬೋರ್ ವೆಲ್ ಕೊರೆಸಲು ಅನುಮೋದನೆ ನೀಡಿದ್ದಲ್ಲದೇ ಸ್ಥಳದಲ್ಲಿಯೇ ಆಯುಕ್ತರಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಸಭೆಯಲ್ಲಿ ಪರಿಷತ್ ಕಾರ್ಯದರ್ಶಿ ಶ್ರೀನಿವಾಸ ಎಸ್., ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಗೋವಿಂದರಾಜು ಎಲ್, ರಾಜನಹಳ್ಳಿ ಸೀತಮ್ಮ ಬಾಲಕೀಯರ ಪ್ರೌಢಶಾಲೆಯ ಮುಖ್ಯೋಪಾದ್ಯಾಯರಾದ ಮಂಜಪ್ಪ ಎ.ಆರ್ ಹಾಗೂ ಗ್ರಂಥಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಕಾರ್ಮಿಕ ಇಲಾಖೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿದ ಸಚಿವ ಸಂತೋಷ ಲಾಡ್

## ಕನಿಷ್ಟ ವೇತನ ಪಾವತಿಸದ ಏಜೆನ್ಸಿ ಪರವಾನಿಗೆ ರದ್ದತಿಗೆ ಸೂಚನೆ

**ಗದಗ :** ಕಾರ್ಮಿಕರ ಕಲ್ಯಾಣಕ್ಕಾಗಿಯೇ ಕಾರ್ಮಿಕ ಇಲಾಖೆ ಕರ?ಯನಿರ್ವಹಿಸಬೇಕು. ಕಾರ್ಮಿಕರಿಗೆ ಕನಿಷ್ಟ ವೇತನ ಹಾಗೂ ವಿವಿಧ ಸೌಲಭ್ಯಗಳನ್ನು ಗುತ್ತಿಗೆ ಪಡೆದ ಏಜೆನ್ಸಿದಾರರು ಪಾವತಿಸಿರುವ ಬಗ್ಗೆ ಅಧಿಕಾರಿಗಳು ಪರಿಶೀಲಿಸಿ, ನಿಯಮಾನುಸಾರ ವೇತನ ಪಾವತಿಸದ ಏಜೆನ್ಸಿಗಳ ಪರವಾನಿಗೆಯನ್ನು ರದ್ದು ಪಡಿಸಬೇಕೆಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೂಚಿಸಿದರು.

ಗದಗ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಂಗಳವಾರ ಅವರು ಮಾತನಾಡಿದರು. ಶ್ರಮ ವಹಿಸಿ ದುಡಿಯುವ ವರ್ಗಕ್ಕೆ ಸರ್ಕಾರದಿಂದ ಸರಿಯಾಗಿ ವೇತನ ಪಾವತಿಯಾಗುವಂತೆ ಕ್ರಮ ಕೈಗೊಳ್ಳಬೇಕು. ವೇತನ ಹಾಗೂ ಪಿ.ಎಫ್. ಪಾವತಿಸದ ಏಜೆನ್ಸಿಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳುವ ಮೂಲಕ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಇಲಾಖಾ ಅಧಿಕಾರಿಗಳು ಕರ್ತವ್ಯ ನಿರ್ವಹಿಸುವಂತೆ ನಿರ್ದೇಶನ ನೀಡಿದರು.

ಕಾರ್ಮಿಕ ಕಾಯ್ದೆಗಳ ಉಲ್ಲಂಘನೆ ಪ್ರಕರಣಗಳ ಕುರಿತು ತಪಾಸಣೆ ಮಾಡಿದ ದಾಖಲೆಗಳ ಬಗ್ಗೆ ಮಾತನಾಡಿದ ಅವರು ಕಾರ್ಮಿಕ ಇಲಾಖೆ ಅಧಿಕಾರಿಗಳ ಕಾರ್ಯ ವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸುತ್ತಾ ಮುಂದಿನ ದಿನಗಳಲ್ಲಿ ಶ್ರದ್ಧೆಯಿಂದ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು.



ಪ್ರತಿ ಕೆಡಿಪಿ ಸಭೆಯಲ್ಲಿಯೂ ಬಾಲಕಾರ್ಮಿಕರ ಬಗ್ಗೆ ಪರಿಶೀಲನೆಯಾಗಬೇಕು. ಜೊತೆಗೆ ಬಾಲಕಾರ್ಮಿಕ ಪ್ರಕರಣಗಳ ಉಲ್ಲಂಘನೆ ಕುರಿತಂತೆ ಸಭೆಗಳು ಜರುಗಬೇಕು. ಬಾಲಕಾರ್ಮಿಕ ಪದ್ಧತಿ ಹೋಗಲಾಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಜರುಗಿಸಿ ಪ್ರತಿ ತಿಂಗಳು ವರದಿ ಸಲ್ಲಿಸುವಂತೆ ಪೊಲೀಸ ಇಲಾಖೆಗೆ ಸೂಚನೆ ನೀಡಿದರು.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾಡಳಿತದ ಮುಖ್ಯಸ್ಥರು ಜಾಗೃತಿ ಕಾರ್ಯಕ್ರಮಗಳನ್ನು ಮಾಡುವುದರಿಂದ ಪರಿಣಾಮಕಾರಿ ಜಾಗೃತಿ ಮೂಡಲಿದೆ ಎಂದ ಅವರು ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಹೋಟೆಲ್ , ಬಾಯ್ಲರ್, ಕಟ್ಟಡ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಬಾಲ ಕಾರ್ಮಿಕರ ಬಳಕೆ ಮಾಡುವ ಬಗ್ಗೆ ಪರಿಶೀಲಿಸಬೇಕು ಅಲ್ಲದೇ ಕಾರ್ಮಿಕರಿಗೆ ಇರುವ ಸೌಲಭ್ಯಗಳ ಕುರಿತು ಅರಿವು ಮೂಡಿಸಿ ಸೌಲಭ್ಯಗಳು ತಲುಪಿರುವ ಬಗ್ಗೆ ಮನವರಿಕೆ ಮಾಡಿಕೊಳ್ಳಬೇಕೆಂದು ಹೇಳಿದರು.

ರಾಜ್ಯದಲ್ಲಿ 58 ಲಕ್ಷ ಕಾರ್ಮಿಕ ಕಾರ್ಡ ಹೊಂದಿದ್ದರೂ ಅವೆಲ್ಲವುಗಳನ್ನು ಕಟ್ಟುನಿಟ್ಟಾಗಿ ಪರಿಶೀಲಿಸಿ ಅಕ್ರಮ ಕಾರ್ಡಗಳನ್ನು ಅನರ್ಹಗೊಳಿಸುವ ಮೂಲಕ ರಾಜ್ಯದಲ್ಲಿ ಒಟ್ಟು 32 ಲಕ್ಷ ಕಾರ್ಡಗೆ ಮಿತಿಗೊಳಿಸಲಾಗಿದೆ. ಹೊಸ ಕಾರ್ಡ ನೊಂದಣಿ ಕುರಿತಂತೆ ಕಾರ್ಮಿಕ ಇಲಾಖೆಯಲ್ಲಿ ಅರ್ಜಿ ಪರಿಶೀಲನೆಯನ್ನು ಅಧಿಕಾರಿಗಳು ಸರಿಯಾಗಿ ಮಾಢಬೇಕು. ಇಲ್ಲದಿದ್ದಲ್ಲಿ ನಿಮ್ಮನ್ನೇ ಹೊಣೆಗಾರರನ್ನಾಗಿ ಶಿಕ್ಷಿಸಬೇಕಾಗುತ್ತದೆ ಎಂದು ಸಚಿವ ಸಂತೋಷ್ ಲಾಡ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಮಾತನಾಡಿ ಗದಗ ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ಬಳಕೆ ನಿಯಂತ್ರಣವಾಗಿರಬಹುದು. ನಿರ್ನಾಮವಾಗಿಲ್ಲ. ಅಧಿಕಾರಿ ವರ್ಗ ಬಾಲಕಾರ್ಮಿಕ ಬಳಕೆ ಆಗದಂತೆ ಸಂಪೂರ್ಣ ಶಿಸ್ತು ಕ್ರಮ ಕೈಗೊಳ್ಳಲಿ ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಮಾತನಾಡಿ ಏಪ್ರಿಲ್ 1 ರಿಂದ ಈವರೆಗೆ ಜಿಲ್ಲೆಯಲ್ಲಿ 1730 ತಪಾಸಣೆಗಳನ್ನು ನಡೆಸಲಾಗಿದ್ದು 361 ಕಾರ್ಮಿಕರ ಉಲ್ಲಂಘನಾ ಪ್ರಕರಣಗಳು ಕಂಡು ಬಂದಿವೆ. 296 ಉಲ್ಲಂಘನಾ ಪ್ರಕರಣಗಳನ್ನು ಸರಿಪಡಿಸಲಾಗಿದೆ. 62 ಉಲ್ಲಂಘನಾ ಪ್ರಕರಣಗಳಿಗೆ ಸಂಬಂಧಿಸಿದಂತೆ ನೋಟೀಸ್ ಪ್ರಕಟಿಸಲಾಗಿದೆ. 5 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಸಭೆಗೆ ವ ಯೋಜನೆಯಡಿ 26 ಫಲಾನುಭವಿಗಳಿಗೆ 2.75 ಲಕ್ಷ ರೂ, ದುರ್ಬಲತೆಯ ಪಿಂಚಣಿ ಯೋಜನೆಯಡಿ 3 ಫಲಾನುಭವಿಗಳಿಗೆ 6 ಸಾವಿರ ರೂ, ಪ್ರಮುಖ ವೈದ್ಯಕೀಯ ಧನ ಸಹಾಯ ಯೋಜನೆಯಡಿ 189 ಫಲಾನುಭವಿಗಳಿಗೆ 1.20 ಕೋಟಿ ರೂ, ಪಿಂಚಣಿ ಧನಸಹಾಯ ಯೋಜನೆಯಡಿ 95 ಫಲಾನುಭವಿಗಳಿಗೆ 2.85 ಲಕ್ಷ , ( ಅಪಘಾತ ) ಎಕ್ಸಿಡೆಂಟ್ ಅಸಿಸ್ಟನ್ಸ್ ಯೋಜನೆಯಡಿ 10 ಫಲಾನುಭವಿಗಳಿಗೆ 50 ಲಕ್ಷ ರೂ,ಅಂತ್ಯಕ್ರಿಯೆ ವೆಚ್ಚ ಮತ್ತು ಡೆತ್ ಅಸಿಸ್ಟನ್ಸ್ ಯೋಜನೆಯಡಿ 314 ಫಲಾನುಭವಿಗಳಿಗೆ 2.55 ಕೋಟಿ ರೂ, ಟೂಲ್ ಕಿಟ್ ಯೋಜನೆಯಡಿ 2032 ಫಲಾನುಭವಿಗಳಿಗೆ 97.81 ಲಕ್ಷ, ಪ್ರಿವೆಂಟಿವ್ ಹೆಲ್ತ ಕೇರ್ ಯೋಜನೆಯಡಿ 33500 ಫಲಾನುಭವಿಗಳಿಗೆ 9.85 ಕೋಟಿ ರೂ, , ಆರ್ ಪಿ ಎಲ್ ತರಬೇತಿ ಯೋಜನೆಯಡಿ 1826 ಫಲಾನುಭವಿಗಳಿಗೆ

64.49 ಲಕ್ಷ ರೂ ,ಆರ್‌ಪಿಎಲ್‌ಕಿಟ್ ಯೋಜನೆಯಡಿ 1826 ಫಲಾನುಭವಿಗಳಿಗೆ 46.16 ಲಕ್ಷ ರೂ, ಮೊಬೈಲ್ ಮೆಡಿಕಲ್ ಯುನಿಟ್ ಯೋಜನೆಯಡಿ 26241 ಫಲಾನುಭವಿಗಳಿಗೆ1.20 ಕೋಟಿ ರೂ. ಹೀಗೆ ಒಟ್ಟು ವಿವಿಧ ಯೋಜನೆಗಳಡಿ 68832 ಫಲಾನುಭವಿಗಳಿಗೆ 33.00 ಕೋಟಿ ರೂ. ವೆಚ್ಚ ಮಾಡಲಾಗಿದೆ ಎಂದು ಕಾರ್ಮಿಕ ಅಧಿಕಾರಿಗಳು ಸಭೆಗೆ ತಿಳಿಸಿದರು.

ಸಭೆಯಲ್ಲಿ ಶಾಸಕರಾದ ಜಿ.ಎಸ್.ಪಾಟೀಲ, ಡಾ.ಚಂದ್ರು ಲಮಾಣಿ, ಎಸ್.ವಿ.ಸಂಕನೂರ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಸೇರಿದಂತೆ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಾರತಿ ಡಿ, ಕಾರ್ಮಿಕ ಆಯುಕ್ತರಾದ ಡಾ. ಎಚ್. ಎನ್. ಗೋಪಾಲಕೃಷ್ಣ, ಹೆಚ್ಚುವರಿ ಕಾರ್ಮಿಕ ಆಯುಕ್ತರಾದ ಡಾ. ಎಸ್.ಬಿ.ರವಿಕುಮಾರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ನಗರದ ಆಸ್ತಿ ಮಾಲೀಕರ ಸ್ವತ್ತಿನ ದಾಖಲೆಗಳನ್ನು ಸೃಜಿಸಲು ನಕ್ಷಾ ಯೋಜನೆ ಸಹಕಾರಿ : ಸಚಿವ ಎಸ್. ಮಧು ಬಂಗಾರಪ್ಪ

**ಶಿವಮೊಗ್ಗ :** ನಗರ ಮತ್ತು ಪಟ್ಟಣ ಪ್ರದೇಶದಲ್ಲಿನ ಸಾರ್ವಜನಿಕರ ಅಸ್ತಿಗಳ ಭೂ ಮಾಲೀಕತ್ವದ ಕುರಿತು ಪ್ರತಿಯೊಬ್ಬ ನಾಗರಿಕರಿಗೆ ಸರ್ಕಾರದಿಂದಲೇ ಅಸ್ತಿಯ ಮಾಲೀಕತ್ವ ಪ್ರಮಾಣ ಪತ್ರವನ್ನು ಒದಗಿಸಿ ಕಾನೂನಾತ್ಮಕ ಸ್ಪಷ್ಟತೆ ಒದಗಿಸುವುದರ ಜೊತೆಗೆ ವಿವಾದಗಳನ್ನು ಪರಿಹರಿಸಿ ಅತಿಕ್ರಮಣಗಳನ್ನು ತಡೆಯಲು ನಕ್ಷಾ ಯೋಜನೆ ಸಹಕಾರಿಯಾಗಲಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪ ಅವರು ಹೇಳಿದರು.

ಅವರು ಇಂದು ಸೊರಬ ತಾಲ್ಲೂಕು ಆನವಟ್ಟಿಯ ಪಟ್ಟಣ ಪಂಚಾಯಿತಿ ಆವರಣದಲ್ಲಿ ಕಂದಾಯ ಇಲಾಖೆ, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ, ಹಾಗೂ ಪೌರಾಡಳಿತ ಇಲಾಖೆಯ ಸಹಯೋಗದಲ್ಲಿ ನಗರದ ಆಸ್ತಿ ಮಾಲೀಕರಿಗೆ ಸರ್ಕಾರದ ವತಿಯಿಂದಲೇ ಸರ್ವೇ ನಡೆಸಿ, ದಾಖಲೆಗಳನ್ನು ಸೃಜಿಸಿ, ಉಚಿತವಾಗಿ ನೀಡುವ ನಕ್ಷಾ

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ರಾಜ್ಯ ಸರ್ಕಾರವು ಇದೆ ಮೊದಲ ಬಾರಿಗೆ ರಾಜ್ಯದ ಹತ್ತು ಜಿಲ್ಲೆಗಳ ಆಯ್ದ ಹತ್ತು ಪ್ರದೇಶಗಳಲ್ಲಿ ಈ ಯೋಜನೆಯನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಶಿವಮೊಗ್ಗ ಜಿಲ್ಲೆಯ ಅನವಟ್ಟಿಯನ್ನು ಆಯ್ಕೆ ಮಾಡಿಕೊಂಡಿದೆ.



ಮುಂದಿನ ದಿನಗಳಲ್ಲಿ ಈ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳ ನಗರ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಿಗೂ ವಿಸ್ತರಿಸಲಾಗುವುದು ಎಂದರು.

ಅಸ್ತಿಗಳ ಮಾಲೀಕರು ತಮ್ಮ ಅಸ್ತಿ ಹಕ್ಕುಗಳಿಗೆ ಮೂಲ ದಾಖಲೆಯಾಗಿ ಈ ದಾಖಲೆಯನ್ನು ಪರಿಗಣಿಸಬಹುದಾಗಿದೆ ಅಲ್ಲದೆ ಮಾಲೀಕತ್ವವನ್ನು ಕಾನೂನಾತ್ಮಕರಾಗಿ ಹಾಗೂ ದಾಖಲೆಗಳ ಮೂಲಕ ಖಚಿತಪಡಿಸಿಕೊಳ್ಳಬಹುದಾಗಿದೆ ಎಂದರು.

ವಿಶೇಷವಾಗಿ ಸರ್ಕಾರಿ ಶಾಲೆ ಸೇರಿದಂತೆ ವಿವಿಧ ಇಲಾಖೆಗಳ

ಅಸ್ತಿಯನ್ನು ಗುರುತಿಸಿ, ಸಂರಕ್ಷಣೆ ಮಾಡಲು ಅನುಕೂಲವಾಗಲಿದೆ. ಅಲ್ಲದೆ ಜನರು ಅನಗತ್ಯವಾಗಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿದಂತಾಗಲಿದೆ, ಎಂದ ಅವರು ಸೊರಬ ತಾಲೂಕಿನಲ್ಲಿ ಸುಮಾರು 75ಲಕ್ಷ ಅಸ್ತಿಗಳಿದ್ದು, ಮುಂದಿನ ಆರು ತಿಂಗಳೊಳಗಾಗಿ ದಾಖಲೆಗಳನ್ನು ಸೃಜಿಸುವ ಕಾರ್ಯ ಪೂರ್ಣಗೊಳ್ಳುವ ನಿರೀಕ್ಷೆ ಇದೆ ಎಂದರು.

ಇದೆ ಸಂದರ್ಭದಲ್ಲಿ ಉಪಹಾರದೊಂದಿಗೆ ಪೌರಕಾರ್ಮಿಕರ ಅಹವಾಲುಗಳನ್ನು ಆಲಿಸಿದರು.

ಈ ಸಂದರ್ಭದಲ್ಲಿ ಸಾಗರ ಉಪವಿಭಾಗಾಧಿಕಾರಿ ಯತೀಶ್, ಭೂ ಮಾಪನ ಇಲಾಖೆಯ ಉಪನಿರ್ದೇಶಕ ಪಿ. ಶ್ರೀನಿವಾಸ್, ಸರ್ವೇ ಆಫ್ ಇಂಡಿಯಾದ ಪ್ರತಿನಿಧಿ ರಮೇಶ್, ಶ್ರೀಮತಿ ಮಂಜುಳಾ ಹೆಗಡಾಳ್, ಸಂತೋಷಕುಮಾರ್‌ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು, ಪೌರಸೇವಾ ಕಾರ್ಮಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಶಿಕಾರಿಪುರ: ಸಲಹಾ ಸಮಿತಿಗೆ ನಾಮನಿರ್ದೇಶನಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಹಿಂದುಳಿದ ವರ್ಗಗಳ ಅಲೆಮಾರಿ/ ಅರೆಅಲೆಮಾರಿ ಹಾಗೂ ಅರೆಅಲೆಮಾರಿ ಜನಾಂಗದವರಿಗೆ ಸೌಲಭ್ಯ ಹಾಗೂ ಮೀಸಲಾತಿ ಕಲ್ಪಿಸುವಲ್ಲಿ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಸಲಹಾ ಸಮಿತಿಯನ್ನು ಪುನರ್ ರಚಿಸಿ ಮುಂದಿನ 3 ವರ್ಷಗಳ ಅವಧಿಗೆ ವಿಸ್ತರಿಸಲಾಗಿದೆ.ಈ ಸಲಹಾ ಸಮಿತಿ ರಚಿಸಲು ಶಿಕಾರಿಪುರ ತಾಲೂಕು ಮಟ್ಟದ ಹಿಂದುಳಿದ ವರ್ಗಗಳ ಅಲೆಮಾರಿ ಜನಾಂಗದ ಅಭಿವೃದ್ಧಿ ಸಂಸ್ಥೆ ಪ್ರತಿನಿಧಿಯನ್ನು
ನಾಮ ನಿರ್ದೇಶಿಸುವ ಬಗ್ಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಮಾ.01 ರೊಳಗಾಗಿ ಜಿಲ್ಲಾ ಮಟ್ಟದ /ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿ ಸಂಸ್ಥೆ ಪ್ರತಿನಿಧಿಯವರು ಅಗತ್ಯ ದಾಖಲಾತಿಗಳೊಂದಿಗೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಡಿ. ದೇವರಾಜ ಅರಸು ಭವನ, ಐ.ಬಿ. ಹಿಂಭಾಗ, ಶಿರಾಳಕೊಪ್ಪ ರಸ್ತೆ, ಶಿಕಾರಿಪುರ ಕಚೇರಿಗೆ ದಾಖಲಾತಿಗಳನ್ನು ಸಲ್ಲಿಸುವಂತೆ ಇಲಾಖೆಯ ಹಿಂ.ವ. ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08187–295207 ನ್ನು ಸಂಪರ್ಕಿಸುವುದು.

## ಜೀವನ ಪ್ರಮಾಣ ಪತ್ರ ಸಲ್ಲಿಸುವಂತೆ ಸೂಚನೆ

**ಶಿವಮೊಗ್ಗ:** ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆಯ ಪಿಂಚಣಿ ಯೋಜನೆಯಡಿಯಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಪಿಂಚಣಿದಾರರು ಪಿಂಚಣಿ ಪಡೆಯುತ್ತಿದ್ದು, ಸುಮಾರು 5577 ಪಿಂಚಣಿದಾರರು ತಮ್ಮ ಜೀವನ ಪ್ರಮಾಣ ಪತ್ರವನ್ನು ಇದುವರೆಗೂ ಸಲ್ಲಿಸಿರುವುದಿಲ್ಲವಾದ್ದರಿಂದ ಪಿಂಚಣಿ ಸ್ಥಗಿತವಾಗಿರುತ್ತದೆ.
ಜೀವನ ಪ್ರಮಾಣ ಪತ್ರ ಸಲ್ಲಿಸದೇ ಇರುವ ಪಿಂಚಣಿದಾರರು ಅಂಚೆ ಕಚೇರಿಯಲ್ಲಿ ಅಥವಾ ಬ್ಯಾಂಕ್‌ನಲ್ಲಿ ಅಥವಾ ತಮ್ಮ ಆಂಡ್ರಾಯ್ಡ್ ಮೊಬೈಲ್ ಫೋನ್ ಮೂಲಕ ಫೇಸ್ ಅಥೆಂಟಿಕೇಷನ್ ಟೆಕ್ನಾಲಜಿಯನ್ನು ಅಳವಡಿಸಿಕೊಂಡು ಜೀವನ ಪ್ರಮಾಣ ಪತ್ರ ಸಲ್ಲಿಸುವಂತೆ ಕ್ಷೇತ್ರೀಯ ಭವಿಷ್ಯ ನಿಧಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ‘ಧ್ವನಿ ಕೊಟ್ಟ ಧನಿ’ ಪ್ರಶಸ್ತಿ

**ಚಿಕ್ಕಮಗಳೂರು:** ಮೈಸೂರು ಅನ್ವೇಶಣಾ ಟ್ರಸ್ಟ್ ಮತ್ತು ಅರಸು ಪತ್ರಿಕೆ 12 ನೇ ವಾರ್ಷಿಕೋತ್ಸವದ ಅಂಗವಾಗಿ ಮೈಸೂರಿನಲ್ಲಿ ನಡೆದ ಸಮಾರಂಭದಲ್ಲಿ ಸಮಾಜ ಸೇವೆ ಗುರುತಿಸಿ ಹಿರೇನಲ್ಲೂರು ಶಿವು ಅವರಿಗೆ ‘ಧ್ವನಿ ಕೊಟ್ಟ ಧನಿ’ ಎಂಬ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಿದರು.ಸಮಾರಂಭದಲ್ಲಿ ಚುಟುಕು ಯುಗಾಚಾರ್ಯ ಡಾ.ಎಂ.ಜಿ.ಆರ್.ಅರಸ್, ವಿಜಯಲಕ್ಷ್ಮಿ ಅರಸ್, ಆರ್ಯ ಅಮರನಾಥ ರಾಜೇ ಅರಸ್, ಎಂ.ಎಲ್ಸಿ. ಡಾ.ಡಿ.ತಿಮ್ಮಯ್ಯ, ರಾಜ್ಯ ಉಪಾಧ್ಯಕ್ಷ ಸೂರಜ್ ಹೆಗ್ಡೆ ಮುಖಂಡರುಗಳಾದ ವೆಂಕಟೇಶ್, ಚಂದ್ರಶೇಖರ್, ರತ್ನ, ಹಾಲಪ್ಪಗೌಡ ಮತ್ತಿತರರು ಉಪಸ್ಥಿತರಿದ್ದರು.

## ಶಾಸಕರಿಂದ ಸಂಜೀವಿನಿ ಕಟ್ಟಡ ಉದ್ಘಾಟನೆ

**ಚಿಕ್ಕಮಗಳೂರು:** ತಾಲ್ಲೂಕಿನ ಲಕ್ಕಮ್ಮನಹಳ್ಳಿ ಗ್ರಾ.ಪಂ. ಹಾಗೂ ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಇಲಾಖೆ ಸಹಯೋಗದಲ್ಲಿ 17 ಲಕ್ಷ ವೆಚ್ಚದಲ್ಲಿ ಗ್ರಾಮದಲ್ಲಿ ನಿರ್ಮಿಸಿರುವ ನೂತನ ಸಂಜೀವಿನಿ ಕಟ್ಟಡವನ್ನು ಶಾಸಕ ಹೆಚ್.ಡಿ.ತಮ್ಮಯ್ಯ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಅಧ್ಯಕ್ಷೆ ಶಶಿಕಲಾ, ಲಕ್ಕಮ್ಮನಹಳ್ಳಿ ಗ್ರಾ.ಪಂ. ಉಪಾಧ್ಯಕ್ಷ ಲಕ್ಷ್ಮಣ ಗೌಡ, ಸದಸ್ಯರಾದ ಸಣ್ಣಕಾಟೇಗೌಡ, ಚಂದ್ರಶೇಕರ್, ರತ್ನಮ್ಮ, ಹರೀಶ್, ಯಶೋಧ, ಲತಾ, ಪಿಡಿಓ ಕೆ.ಬಿ. ಮಂಜೇಗೌಡ, ಕಾರ್ಯದರ್ಶಿ ಬಿ.ಟಿ.ರುದ್ರೇಶ್ ಮತ್ತಿತರರು ಹಾಜರಿದ್ದರು.

## ಇಂದು ಡಿಜಿಟಲ್ ಇಂಡಿಯಾ ಭೂದಾಖಲೆಗಳ ಆಧುನೀಕರಣ

**ಚಿಕ್ಕಮಗಳೂರು:** ಕೇಂದ್ರ ಸರ್ಕಾರದ ಡಿಜಿಟಲ್ ಇಂಡಿಯಾ ಭೂದಾಖಲೆಗಳ ಆಧುನೀಕರಣ ಕಾರ್ಯಕ್ರಮದಡಿ ಕೋಲಾರ, ಬಳ್ಳಾರಿ, ಕೊಪ್ಪಳ, ಶಿವಮೊಗ್ಗ, ಬಾಗಲಕೋಟೆ, ಬೀದರ್, ಮೈಸೂರು, ಬೆಳಗಾವಿ ಮತ್ತು ಚಿಕ್ಕಮಗಳೂರು ನಗರ ಸಭೆಯನ್ನು ಆಯ್ಕೆ ಮಾಡಲಾಗಿದ್ದು, ಫೆ.18 ರಂದು ಬೆಳಗ್ಗೆ 10:30 ಗಂಟೆಗೆ ಚಿಕ್ಕಮಗಳೂರು ನಗರಸಭೆಯ ಸಭಾಂಗಣದಲ್ಲಿ ಯೋಜನೆಯ ಪ್ರಾರಂಭೋತ್ಸವವನ್ನು ಆಯೋಜಿಸಲಾಗಿದೆ ಎಂದು ನಗರಸಭೆ ಪೌರ ಆಯುಕ್ತರು ತಿಳಿಸಿದ್ದಾರೆ.

## ತರಕಾರಿ ಕಿಟ್ ವಿತರಣೆ

**ಚಿಕ್ಕಮಗಳೂರು:** ತೋಟಗಾರಿಕೆ ಇಲಾಖಾ ವತಿಯಿಂದ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ತರಕಾರಿ ಕಿಟ್ ವಿತರಣೆ ಮತ್ತು ಎಲ್ಲಾ ವರ್ಗದ ರೈತರಿಗೆ ರೈತರಿಗೂ ಸಹಾಯಧನ ಲಭ್ಯವಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಅಧಿಕಾರಿಗಳ ವಿವರ: ಕಸಬಾ ಹೋಬಳಿ ಅರುಣ್ ಕುಮಾರ್ ಕೆ.ಎಲ್. ಮೊ.ಸಂ. 9108948434, ಅಂಬಳೆ ಹೋಬಳಿ ಗುರುರಾಜ್ ಎಸ್. ಮೊ.ಸಂ. 7892338387, ವಸ್ತಾರೆ ಹೋಬಳಿ ಅಕ್ಷಯ್ ಹೆಚ್.ಆರ್., ಮೊ.ಸಂ. 8951253441, ಜಾಗರ&ಆವತಿ ಹೋಬಳಿ ನಟೇಶ್ ಕುಮಾರ್ ಹೆಚ್.ಎ. ಮೊ.ಸಂ. 7899048055, ಲಕ್ಯಾ ಹೋಬಳಿ ಅರುಣ್ ವಿ.ಎ. ಮೊ.ಸಂ. 8277038990, ಖಾಂಡ್ಯ ಹೋಬಳಿ ಸೀಮಾ ಹೆಚ್.ಎ. ಮೊ.ಸಂ. 9380956582, ಆಲ್ದೂರು ಹೋಬಳಿ ಭಾನುಶ್ರೀ ಮೊ.ಸಂ. 9380126498 ಇವರುಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

## ಒಕ್ಕಲಿಗರು ಸಂಘಟನೆಗೆ ಆದ್ಯತೆ ನೀಡಲಿ

**ಸೊರಬ:** ಒಕ್ಕಲಿಗರು ಶ್ರಮಜೀವಿಗಳಾಗಿದ್ದು, ಆರ್ಥಿಕವಾಗಿ ಸಬಲಗೊಳ್ಳುವು ದರೊಂದಿಗೆ ಸಂಘಟನೆಗೆ ಆದ್ಯತೆ ನೀಡಬೇಕೆಂದು ಸೊರಬ ತಾಲ್ಲೂಕು ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಉಮಾಕಾಂತ ಬಿ. ಗೌಡ ನೆಲ್ಲೂರು ಕರೆ ನೀಡಿದರು.ಪಟ್ಟಣದ ಮುರುಘಾಮಠದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ತಾಲ್ಲೂಕು ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ 9ನೇ ವರ್ಷದ ಪ್ರತಿಭಾ ಪುರಸ್ಕಾರ ಮತ್ತು ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಸಮುದಾಯ ಸಂಘಟನೆ ಜನರಲ್ಲಿ ಐಕ್ಯತೆಯನ್ನುಂಟು ಮಾಡಬಲ್ಲದು. ಸಮು ದಾಯದ ಪ್ರತಿಯೊಬ್ಬರೂ ತಮ್ಮ ವೈಯಕ್ತಿಕ ಜೀವನದ ಒಟ್ಟೊಟ್ಟಿಗೆ ಸಮಾ ಜದ ಸೇವೆ ಮಾಡಿದಾಗ ಮಾತ್ರ ಸಮುದಾಯ ಸಂಘಟನೆ ಸಾಧ್ಯವಿದ್ದು ಸಮುದಾಯ ಸಂಘಟನೆಯಲ್ಲಿ ಸಮಾಜ ಬಾಂಧವರ ಪಾಲ್ಗೊಳ್ಳುವಿಕೆ ಬಹು ಮುಖ್ಯ ಎಂದರು.ಕಾರ್ಯಕ್ರಮ ಉದ್ಘಾಟಿಸಿದ ಸಂಘದ ಗೌರವಾಧ್ಯಕ್ಷ ಮಂಜಪ್ಪ ಬನದಕೊಪ್ಪ ಮಾತನಾಡಿ, ಸಮಾಜ ಬಾಂಧವರು ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿ ಸಿಕೊಳ್ಳಬೇಕು. ನಮ್ಮ ಕೌಟುಂಬಿಕ ಜೀವನದ ಒಟ್ಟಿಗೆ ಸಮಾಜದ ಜನರ ಏಳ್ಗೆಗೆ ಅಳಿಲು ಸೇವೆ ಮಾಡಬೇಕು. ಇಂದಿನ ಯುವ ಪೀಳಿಗೆ ಸಂಘ ಮತ್ತು ಸಮುದಾಯ ಮುನ್ನಡೆಸಿಕೊಂಡು ಹೋಗುವ ಬಾಧ್ಯತೆ ಹೊಂದಬೇಕು ಎಂದರು.

# ಜವಹರ್ ನವೋದಯ ವಿದ್ಯಾರ್ಥಿಗಳಿಗೂ “ಸಕ್ಷಮ” ವಿಸ್ತರಿಸಲು ಪೋಷಕರ ಮನವಿ

**ದಾವಣಗೆರೆ.ಫೆ.19;** ಜಿಲ್ಲೆಯ ದ್ವಿತೀಯ ಪಿಯುಸಿ ವಿಜ್ಞಾನ ವಿಷಯದ ವಿದ್ಯಾರ್ಥಿಗಳಿಗಾಗಿ ಸಕ್ಷಮ ಯೋಜನೆಯಡಿ ನೀಡಲಾಗುತ್ತಿರುವ ನೀಟ್ ಹಾಗೂ ಜೆಇಇ ತರಬೇತಿಯನ್ನು ಜವಹರ್ ನವೋದಯ ಶಾಲೆಯ ವಿದ್ಯಾರ್ಥಿಗಳಿಗೂ ವಿಸ್ತರಿಸಬೇಕೆಂದು ಪೋಷಕರು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಮನವಿ ಮಾಡಿದ್ದಾರೆ.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಸಂಸದರ ಕಚೇರಿಯಲ್ಲಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಭೇಟಿ ಮಾಡಿದ ನವೋದಯ ಶಾಲೆಯ ವಿದ್ಯಾರ್ಥಿಗಳ ಪೋಷಕರು ತಮ್ಮ ಮನವಿಯನ್ನು ಸಲ್ಲಿಸಿದ್ದಾರೆ. ದಾವಣಗೆರೆಯ ಜಿಲ್ಲೆಯ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಸಕ್ಷಮ ಕಾರ್ಯಕ್ರಮದಡಿ ವಿಶೇಷ ತರಬೇತಿ ನೀಡುತ್ತಿರುವುದರಿಂದ ಸಾಕಷ್ಟು ಅನುಕೂಲವಾಗುತ್ತಿದೆ ಇದನ್ನು ಜಿಲ್ಲೆಯ ಜವಹರ್ ನವೋದಯ ವಿದ್ಯಾಲಯದ ವಿದ್ಯಾರ್ಥಿಗಳಿಗೂ ವಿಸ್ತರಿಸಿದರೆ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲಿದೆ ಎಂದು ಮನವರಿಕೆ ಮಾಡಿದ್ದಾರೆ.

ಈ ವಿಚಾರ ಕುರಿತು ಮಾತನಾಡಿದ ಸಂಸದರು ಇತ್ತೀಚೆಗೆ ನವದೆಹಲಿಯಲ್ಲಿ ಕೇಂದ್ರ ಶಿಕ್ಷಣ ಸಚಿವರಾದ ಧರ್ಮೇಂದ್ರ ಪ್ರಧಾನ್ ಅವರನ್ನು ಭೇಟಿಯಾಗಿ ಶೈಕ್ಷಣಿಕ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ್ದೇನೆ ಶೀಘ್ರದಲ್ಲೇ ಈ ಬಗ್ಗೆ ಕ್ರಮಕೈಗೊಳ್ಳುತ್ತೇನೆ ಎಂದರು.

ಇದೇ ವೇಳೆ ಸಂಸದರು ದಾವಣಗೆರೆ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಸಾರ್ವಜನಿಕರ ಅಹವಾಲುಗಳು ಹಾಗೂ ಕುಂದುಕೊರತೆಗಳನ್ನು ಆಲಿಸಿದರು.ಜನರ ಬೇಡಿಕೆಗಳಿಗೆ ಸ್ಪಂದಿಸುವಂತೆ ಅಧಿಕಾರಿ ವರ್ಗದವರಿಗೆ ಸೂಚನೆ ನೀಡಿದರು. ಗ್ರಾಮೀಣಭಾಗದಿಂದ ಬಂದಿದ್ದ ಜನರ ಅಹವಾಲುಗಳನ್ನು ಸ್ವೀಕರಿಸಿ ಸಾಧ್ಯವಾದಷ್ಟು ಶೀಘ್ರದಲ್ಲೇ ಎಲ್ಲರ ಬೇಡಿಕೆಗಳ ಈಡೇರಿಸುವುದಾಗಿ ಭರವಸೆ ನೀಡಿದರು. ವಿಶೇಷವಾಗಿ ವಿಶೇಷಚೇತನರು ಉದ್ಯೋಗ ಕಲ್ಪಿಸುವಂತೆ ತಮ್ಮ ಸಂಜ್ಞೆಯ ಭಾಷೆಯ ಮೂಲಕ ಮಾಡಿದ ಮನವಿಗೆ ಸ್ಪಂದಿಸಿದ ಸಂಸದರು ಕ್ರಮ ವಹಿಸುವುದಾಗಿ ತಿಳಿಸಿದರು



# ಅಭಿವೃದ್ಧಿಗೆ ‘ಗ್ಯಾರಂಟಿ’ ಅಡ್ಡಿಯಾಗಿಲ್ಲ



**ಚಿಕ್ಕಮಗಳೂರು:** ಸರ್ಕಾರವು ಕೇವಲ ಗ್ಯಾರಂಟಿ ಯೋಜನೆಗಳಿಗೆ ಸೀಮಿತವಾಗದೆ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದೆ. ಗ್ಯಾರಂಟಿ ಯೋಜನೆಗಳು ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಯಾಗಿಲ್ಲ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ತಾಲ್ಲೂಕಿನ ಬಿಳೇಕಲ್ಲಹಳ್ಳಿ ಹಾಗೂ ಲಕ್ಕಮ್ಮನಹಳ್ಳಿ ಗ್ರಾ.ಪಂ. ವ್ಯಾಪ್ತಿಯಲ್ಲಿ ರಸ್ತೆ, ದೇವಸ್ಥಾನ, ಸಮುದಾಯ ಭವನ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ, ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಸರ್ಕಾರವು ಕ್ಷೇತ್ರದ ಅಭಿವೃದ್ಧಿ ದೃಷ್ಠಿಯಿಂದ 25 ಕೋಟಿ ವಿಶೇಷ ಅನುದಾನ ನೀಡಿದೆ. ಈ ಅನುದಾನದೊಂದಿಗೆ ವಿವಿಧ ಕಾಮಗಾರಿಗಳನ್ನು ಕೈಗೊಂಡು ಕ್ಷೇತ್ರವನ್ನು ಅಭಿವೃದ್ಧಿ ಪಡಿಸುವುದು ನನ್ನ ಜವಾಬ್ದಾರಿ ಎಂದರು.

ಲಕ್ಯ ಹೋಬಳಿ ಲಕ್ಕಮ್ಮನಹಳ್ಳಿ ಪಂಚಾಯಿತಿಯಲ್ಲಿ ವ್ಯಾಪ್ತಿಯಲ್ಲಿ 50 ಲಕ್ಷ ಕಾಮಗಾರಿ ಈಗಾಗಲೇ ಪೂರ್ಣಗೊಂಡಿದೆ. ಬಾಳೇನಹಳ್ಳಿ ಬೀರಲಿಂಗೇಶ್ವರ ದೇವಾಲಯಕ್ಕೆ 10 ಲಕ್ಷ ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆ 10 ಲಕ್ಷ, ಸಿರಬಡಿಗೆ ಗ್ರಾಮದಲ್ಲಿ 20 ಲಕ್ಷ ಕಾಂಕ್ರೀಟ್ ರಸ್ತೆ, ಸೇರಿದಂತೆ ಕುನ್ನಾಳು ರಸ್ತೆ, ದೇವಾಲಯ ಹಾಗೂ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಒಟ್ಟು 1 ಕೋಟಿ 10 ಲಕ್ಷ ಅನುದಾನವನ್ನು ಲಕ್ಕಮ್ಮನಹಳ್ಳಿ ಗ್ರಾ.ಪಂ.ಗೆ ನೀಡಲಾಗಿದೆ. ಬಿಳೇಕಲ್ಲಹಳ್ಳಿ ಗ್ರಾ.ಪಂ.ವ್ಯಾಪ್ತಿಯಲ್ಲಿ ಉದ್ದೆಬೋರನಹಳ್ಳಿ ದೇವಾಲಯಕ್ಕೆ 5 ಲಕ್ಷ, ಉದ್ದೆಬೋರನಹಳ್ಳಿ ಗ್ರಾಮದ ಕಾಂಕ್ರೀಟ್ ರಸ್ತೆಗೆ 20 ಲಕ್ಷ ಹಾಗೂ ಗ್ರಾಮದ ಸಾರ್ವಜನಿಕ ಸಮುದಾಯ ಭವನಕ್ಕೆ 10 ಲಕ್ಷ ಸೇರಿದಂತೆ ಒಟ್ಟು 1 ಕೋಟಿ 15 ಲಕ್ಷ ಕಾಮಗಾರಿಗೆ ಅನುದಾನ ನೀಡಲಾಗಿದೆ ಎಂದರು.ರೈತರ ಹಿತದೃಷ್ಟಿಯಿಂದ ಬಾಳೇನಹಳ್ಳಿಯಿಂದ ಕಟ್ಟೆಹೊಳೆಗೆ ನೀರು ತುಂಬಿಸುವ ಯೋಜನೆಗೆ 1 ಕೋಟಿ 50 ಲಕ್ಷ ಅನುಮೋದನೆ ದೊರಕಿದೆ. ಸದ್ಯದಲ್ಲೆ ಟೆಂಡರ್ ಕರೆದು ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಕಿಸಾನ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಭರತ್, ಲಕ್ಕಮ್ಮನಹಳ್ಳಿ ಗ್ರಾ.ಪಂ. ಅಧ್ಯಕ್ಷೆ ಶಶಿಕಲಾ ಮಾತನಾಡಿದರು. ಬಿಳೇಕಲ್ಲಹಳ್ಳಿ ಗ್ರಾ.ಪಂ. ಅಧ್ಯಕ್ಷ ಭಾನು ಪ್ರಕಾಶ್, ಲಕ್ಕಮ್ಮನಹಳ್ಳಿ ಗ್ರಾ.ಪಂ. ಉಪಾಧ್ಯಕ್ಷ ಲಕ್ಷಣ್ ಗೌಡ, ಪುಟ್ಟೇಗೌಡ, ಚಂದ್ರಶೇಕರ್, ಸಣ್ಣ ಕಾಟೆಗೌಡ, ಹರೀಶ್, ಯಶೋಧ, ಲತಾ, ರತ್ನಮ್ಮ ಜಗದೀಶ್, ನಾಗರತ್ನ, ಗೋಪಿಕೃಷ್ಣ, ಲೋಲಾಕ್ಷಿ, ದೌರ್ಜನ್ಯ ಸಮಿತಿ ಸದಸ್ಯ ರಮೇಶ್ ಯು.ಸಿ., ಗ್ರಾಮಸ್ಥರು ಉಪಸ್ಥಿತರಿದ್ದರು.

# ಮೌಢ್ಯವನ್ನು ತೊಲಗಿಸಿದವರು ಶರಣರು

**ಚನ್ನಗಿರಿ:** 12ನೇ ಶತಮಾನದ ಶರಣರು ಕಾಯಕಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡುತ್ತಿದ್ದು, ಅದರಿಂದ ದೊರೆಯುತ್ತಿದ್ದ ಆದಾಯದಿಂದ ದಾಸೋಹ ಮಾಡುತ್ತಾ ಸೌಹಾರ್ದತೆಯನ್ನು ಮೆರೆಯುವಲ್ಲಿ ತಾರತಮ್ಯ ಮಾಡದೆ ಸರ್ವರನ್ನು ಸಮಾನವಾಗಿ ಕಾಣುವಂತಹ ಕಾಲ 12ನೇ ಶತಮಾನದ್ದಾಗಿತ್ತು ಎಂದು ರಾಜ್ಯ ಮಾನವ ಬಂದುತ್ವ ವೇದಿಕೆಯ ಸಂಚಾಲಕ ಎ.ಬಿ.ರಾಮಚಂದ್ರಪ್ಪ ಹೇಳಿದರು.

ತಾಲೂಕಿನ ಪಾಂಡೋಮಟ್ಟಿ ಗ್ರಾಮದಲ್ಲಿನ ವಿರಕ್ತಮಠದಲ್ಲಿ ಏರ್ಪಡಿಸಿದ್ದ ಶರಣ ಜೇಡರ ದಾಸಿಮಯ್ಯನವರ ಸ್ಮರಣೋತ್ಸವ ಮತ್ತು 868ನೇ ಮಾಸಿಕ ಶಿವಾನುಭವ ಗೋಷ್ಠಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶರಣರ ಕಾಲದಲ್ಲಿ ಲಿಂಗಾಯತ ಧರ್ಮ ಶ್ರಮದ ಬೆವರಿಗೆ ಬೆಲೆಯನ್ನು ಕೊಡುತ್ತಿತ್ತು. ಆಗಿನ ಕಾಲದ ಶರಣರು ಸಾಮಾಜಿಕ ಮೌಢ್ಯವನ್ನು ತೊಲಗಿಸುವಲ್ಲಿ ಜಾಗೃತಿ ಮೂಡಿಸಿ ಮೌಢ್ಯತೆಯನ್ನು ತೊಲಗಿಸಲು ಶ್ರಮಿಸಿದಂತಹ ವಿಚಾರವಂತ ಶರಣರಾಗಿದ್ದರು ಎಂದು ತಿಳಿಸಿದರು.ತುಮ್‌ಕೋಸ್ ನಿರ್ದೇಶಕ ಎಚ್. ಎಸ್.ಶಿವಕುಮಾರ್ ಮಾತನಾಡಿ, ಸ್ವರ್ಗ ನರಕ ಎನ್ನುವುದು ಎಲ್ಲಿಯೂ ಇಲ್ಲ. ನಾವು ಮಾಡುವ ಕಾಯಕದಲ್ಲಿ ಸ್ವರ್ಗ ಮತ್ತು ನರಕಗಳು ಇರುತ್ತವೆ ಎಂದು ಜಗಜ್ಯೋತಿ ಬಸವೇಶ್ವರರು ಹೇಳಿದ್ದಾರೆ. ಪ್ರತಿಯೊಬ್ಬರು ಸಾಮಾಜಿಕವಾಗಿ ಜೀವಿಸುವಾಗ ಸೌಹಾರ್ದತೆಯಿಂದ ನಮ್ಮ ಬದುಕುಗಳನ್ನು ಸಾಗಿಸಿದರೆ ನೆಮ್ಮದಿಯ ಜೀವನ ನಡೆಸುವ ಜೊತೆಗೆ ಯಶಸ್ಸು ನಮ್ಮದಾಗಲಿದೆ ಎಂದು ಹೇಳಿದರು. ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಮಠದ ಡಾ.ಶ್ರೀ ಗುರುಬಸವ ಮಹಾಸ್ವಾಮಿಗಳು, ಜೇಡರ ದಾಸಿಮಯ್ಯನವರ ವಚನ ಸಾಹಿತ್ಯವು 12ನೇ ಶತಮಾನದಲ್ಲಿ ಮೊದಲಿಗೆ ವಚನ ಸಾಹಿತ್ಯವನ್ನು ರಚಿಸಿದವರಾಗಿದ್ದು, ಅವರ ಚಿಂತನೆಗಳು ಇಂದಿನ ದಿನಮಾನಕ್ಕೆ ಅವಶ್ಯಕವಾಗಿ ಬೇಕಾಗಿದೆ. ಕಾಯಕ, ದಾಸೋಹ ಮತ್ತು ದಾನಕ್ಕೆ ಮಹತ್ವ ನೀಡಿದ್ದು ಶರಣರ ಪರಂಪರೆಯಾಗಿದೆ ಎಂದು ಹೇಳಿದರು.

ಮಾಯಕೊಂಡ ಕ್ಷೇತ್ರದ ಮಾಜಿ ಶಾಸಕ ಬಸವರಾಜ ನಾಯ್ಕ್, ಕೃಷಿಕ ಸಮಾಜದ ಅಧ್ಯಕ್ಷ ಅಶೋಕ್ ಪಾಟೀಲ್, ಬಿಇಒ ಎಲ್.ಜಯಪ್ಪ, ಹಾಸ್ಯ ಕಲಾವಿದ ಜಗನ್ನಾಥ್, ಡಾ.ಇಂಚರ, ಕು.ಇಂಪನ ಮಾತನಾಡಿದರು.

ಬಸವ ತತ್ವ ಸಮ್ಮೇಳನದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಗರಗ ಶಿವಲಿಂಗಪ್ಪ, ಬಿದರೆ ಸಿದ್ದಲಿಂಗಮೂರ್ತಿ, ಖಗ್ಗಿ ಶ್ರೀಕಂಠಮೂರ್ತಿ, ಅತ್ತಿಮೊಗ್ಗೆ ಚಂದ್ರಶೇಖರ್, ಸಿದ್ದಮಠದ ಎಸ್.ಆರ್.ಕುಮಾರ್, ಕಾಕನೂರು ಎಂ.ಬಿ.ನಾಗರಾಜ್, ಶಿವಮೂರ್ತಪ್ಪ, ಧನಂಜಯ ಇದ್ದರು.



# 1.34 ಕೋಟಿ ವೆಚ್ಚದ ವಾಣಿಜ್ಯ ಸಂಕೀರ್ಣ ನಿರ್ಮಾಣಕ್ಕೆ ಭೂಮಿಪೂಜೆ



**ಹೊನ್ನಾಳಿ:** ಪಟ್ಟಣದ ತುಮ್ಮಿನಕಟ್ಟೆ ರಸ್ತೆಯಲ್ಲಿರುವ ಟಿಎಪಿಸಿಎಂಎಸ್‌ಗೆ ಸೇರಿದ (ಪಶು ಆಸ್ಪತ್ರೆಯ ಮುಂಭಾಗದಲ್ಲಿ) 72*45 ಅಳತೆಯ ನಿವೇಶನದಲ್ಲಿ ಎರಡು ಅಂತಸ್ತಿನ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲಾಗುವುದು ಎಂದು ಸಂಘದ ನಿರ್ದೇಶಕರು, ಶಾಸಕ ಡಿ.ಜಿ. ಶಾಂತನಗೌಡ ಹೇಳಿದರು.

ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಜಾಗದಲ್ಲಿ ತುಂಬಾ ಹಳೇಯದಾದ ಕಟ್ಟಡವಿತ್ತು. ತುಮ್ಮಿನಕಟ್ಟೆ ರಸ್ತೆ ಅಗಲೀಕರಣ ಕೂಡ ಇದೇ ಸಂದರ್ಭದಲ್ಲಿ ಬಂದಿದ್ದರಿಂದ ಈ ಹಳೆಯದಾದ ಕಟ್ಟಡವನ್ನು ತೆರವುಗೊಳಿಸಿದ್ದು, ಇದೀಗ 1.34 ಕೋಟಿ ರೂ. ವೆಚ್ಚದಲ್ಲಿ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುರುಗೇಶ್ ಮಾತನಾಡಿ, ನಮ್ಮ ಸಂಘದ ನಿವೇಶನದ ಒಂದಿಷ್ಟು ಜಾಗ ರೋಡ್ ಮಾರ್ಜಿನ್‌ಗೆ ಹೋಗಿದ್ದರಿಂದ ಅದಕ್ಕೆ ಪರಿಹಾರವಾಗಿ ಸಿಕ್ಕ 32 ಲಕ್ಷ ರೂ., ನಬಾರ್ಡ್‌ನಿಂದ 50 ಲಕ್ಷ ರೂ., ನಮ್ಮ ಸಂಘದಿಂದ 20 ಲಕ್ಷ ರೂ. ಹಣವನ್ನು ಕ್ರೂಢೀಕರಿಸಿ, ಬ್ಯಾಂಕಿನಿಂದ 32 ಲಕ್ಷ ರೂ. ಸಾಲವನ್ನು ಪಡೆದು ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷರಾದ ಎಚ್.ಬಸವರಾಜ್, ಉಪಾಧ್ಯಕ್ಷರಾದ ಎಚ್.ಡಿ.ಬಸವರಾಜಪ್ಪ ಬಸವನಹಳ್ಳಿ, ನಿರ್ದೇಶಕರಾದ ಡಿ.ಮಂಜುನಾಥ್, ಕೆ.ಚೇತನ್, ಎಚ್.ಸಿ. ಶೇಖರಪ್ಪ, ಎಂ.ಜಿ.ಹಾಲಪ್ಪ, ಬಸಮ್ಮ, ಎಚ್.ಜಿ. ಶಂತಮೂರ್ತಿ, ಕೆ.ಬಿ.ಸಿದ್ದನಗೌಡ, ನಾಗಮ್ಮ, ಅನಂತನಾಯ್ಕ, ರಾಜು ಸರಳಿನಮನೆ, ಎಂ.ಎಚ್. ಗಜೇಂದ್ರಪ್ಪ, ಎಚ್.ಸಿ. ಪ್ರಕಾಶ್, ಸಂಘದ ಸಿಬ್ಬಂದಿ ಗೋಪಿನಾಥ್, ಸುರೇಶ್ ಇದ್ದರು.

## ಒಳ್ಳೆಯ ಕೆಲಸಗಳಿಗೆ ದಾನ: ಜೀವನ ಸಾರ್ಥಕ

**ಶಿವಮೊಗ್ಗ:** ಶ್ರೀಮಂತರು, ಅನುಕೂಲಸ್ಥರು ತಾವು ಗಳಿಸಿದ್ದರಲ್ಲಿ ಸ್ವಲ್ಪ ಭಾಗ ವನ್ನಾದರೂ ಮಠ–ಮಾನ್ಯ, ಸಂಘಸಂಸ್ಥೆಗಳಿಗೆ ಒಳ್ಳೆಯ ಕೆಲಸಗಳಿಗೆ ದಾನ ಮಾಡುವುದರ ಮೂಲಕ ಜೀವನ ಸಾರ್ಥಕ ಮಾಡಿಕೊಳ್ಳಬೇಕು ಎಂದು ಶ್ರೀ ಬೆಕ್ಕಿನ ಕಲ್ಮಠದ ಡಾ.ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.ಭಾನುವಾರ ಇಲ್ಲಿಯ ಶ್ರೀ ಬೆಕ್ಕಿನಕಲಠದಲ್ಲಿ ಶ್ರೀ ಬಸವೇಶ್ವರ ವೀರಶೈವ ಲಿಂಗಾಯತ ಸಮಾಜ ಸೇವಾ ಸಂಘವು ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.ಶಿಕ್ಷಣ ಸಮಗ್ರ ಬೆಳವಣಿಗೆಗೆ ಪೂರಕವಾಗಿರಬೇಕು. ಅಲ್ಲದೆ ಗುಣಮಟ್ಟದ ನಿರೀಕ್ಷೆಯನ್ನು ಹೊಂದಿರಬೇಕು ಎಂದ ಅವರು ಹಿಂದಿನ ಮೌಲ್ಯಗಳು ಈಗಿಲ್ಲ. ಇಂದಿನ ಟ್ರೆಂಡ್ ಎಲ್ಲಿಗೆ ತಲುಪುತ್ತದೆ ಎಂಬುದು ಊಹೆಗೂ ನಿಲುಕದ ಸಂಗತಿ ಎಂದು ತಿಳಿಸಿದರು.ಸ್ನಾತಕೋತ್ತರ ಪದವಿ ಪಡೆದವರಿಗೆ ಹಲವರಿಗೆ ಸರಿಯಾಗಿ ಒಂದು ವಾಕ್ಯ ವನ್ನೂ ಬರೆಯಲು ಬರುತ್ತಿಲ್ಲ. ಆ ಮಟ್ಟಕ್ಕೆ ಶಿಕ್ಷಣ ಕುಸಿಯುತ್ತಿದೆ ಎಂದು ವಿಷಾದಿಸಿದರು. ಎಎಸ್.ಎಸ್.ಎಲ್.ಸಿ., ಪಿಯುಸಿಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದವರಿಗೆ ಹಾಗೂ ಇನ್ನಿತರ 18 ಸಾಧಕರಿಗೆ ಸುಮಾರು 12 ಲಕ್ಷ ಮೊತ್ತದ ನಗದು ಬಹುಮಾನ ನೀಡಲಾಗುವುದು ಎಂದು ಸಂಘದ ಗೌರವ ಕಾರ್ಯದರ್ಶಿ ಎಸ್.ಪಿ.ದಿನೇಶ್ ಪ್ರಾಸ್ತಾವಿಕ ನುಡಿಯಲ್ಲಿ ಮಾಹಿತಿ ನೀಡಿ ದರು.ಮಂಗಳೂರಿನ ಆರ್.ಜೆ.ನಯನಾ ಶೆಟ್ಟಿ ವಿಶೇಷ ಉಪನ್ಯಾಸ ನೀಡಿದರು. ಬಸವ ಕೇಂದ್ರದ ಡಾ.ಮರುಳಸಿದ್ಧ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಸಮಾಜದ ಮುಖಂಡರಾದ ಎಸ್.ಎಸ್,ಜ್ಯೋತಿಪ್ರಕಾಶ್, ರೇಣುಕಾರಾಧ್ಯ, ಮೋಹನ ಬಾಳಿಕಾಯಿ, ಪಿ.ರುದ್ರೇಶ್, ಬಳ್ಳೆಕೆರೆ ಸಂತೋಷ್, ಮಹೇಶ ಮೂರ್ತಿ, ರತ್ನಮ್ಮ, ಅನಿತಾ ರವಿಶಂಕರ, ತಾರಾನಾಥ್ ಮೊದಲಾದ ವರಿದ್ದರು.

## ದಲಿತ ಸಾಹಿತ್ಯ ನಾಡಿನಾದ್ಯಂತ ಪಸರಿಸಲಿ

**ಚಿಕ್ಕಮಗಳೂರು:** ನದಿಗಳು ಉಗಮಗೊಂಡು ಸಣ್ಣ ತೊರೆಗಳಾಗಿ ಕಡಲತೀರಕ್ಕೆ ಸೇರುವಂತೆ, ದಲಿತ ಸಾಹಿತ್ಯ ಚಟುವಟಿಕೆಗಳು ಹಂತ ಹಂತವಾಗಿ ನಾಡಿನಾದ್ಯಂತ ಪಸರಿಸಬೇಕು. ಬೃಹಾದಕಾರವಾಗಿ ಬೆಳೆದು ಸಾಹಿತ್ಯದ ಕಡಲಿನತ್ತ ಸಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.ನಗರದ ಕನ್ನಡ ಭವನದಲ್ಲಿ ಭಾನುವಾರ ದಲಿತ ಸಾಹಿತ್ಯ ಪರಿಷತ್ ಜಿಲ್ಲಾ, ಮಹಿಳಾ ಹಾಗೂ ಯುವ ಘಟಕಗಳ ಉದ್ಘಾಟನಾ ಹಾಗೂ ಪದಗ್ರಹಣ ಕಾರ್ಯಕ್ರಮದ ಅಂಗವಾಗಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಭಾನುವಾರ ಅವರು ಮಾತನಾಡಿದರು.ಸಾಹಿತ್ಯಾತ್ಮಕ ಚಟುವಟಿಕೆ ಟೊಳ್ಳು ಬೀಜಗಳಾಗದೇ, ಗಟ್ಟಿಬೀಜವಾಗಿ ಹೊರಹೊಮ್ಮಬೇಕು. ಸ್ವಾರ್ಥ ಅಥವಾ ಸಂಕುಚಿತ ಭಾವನೆಯಿಂದ ಸಾಹಿತ್ಯವು ಹೆಚ್ಚು ಕಾಲಗಳ ಉಳಿಯುವುದಿಲ್ಲ. ಬದಲಾಗಿ ಮನಸ್ಸಿನ ಒಡಲಾಳ ಧ್ವನಿಯಾಗಿ ಬೆಳಕು ಚೆಲ್ಲುವ ಜೊತೆಗೆ ಸರಿಯಾದ ಮಾರ್ಗದಿಂದ ಸಾಗಿಸಿದರೆ ಶಾಶ್ವತವಾಗಿ ಮನದಾಳದಲ್ಲಿ ನೆಲೆಯೂರಲು ಸಾಧ್ಯ ಎಂದರು.ಸಾಹಿತ್ಯ ಲೋಕದಲ್ಲಿ ಸದ್ವಿಚಾರ, ಸದುದ್ದೇಶದಿಂದ ಕೂಡಿದಾಗ ಚಿರಕಾಲ ಉಳಿಯುತ್ತದೆ. ರಾಷ್ಟ್ರದಲ್ಲಿನ ರಾಜಮಹಾರಾಜರು, ಶ್ರೀಮಂತರು, ಹಣ ಗಳಿಸಿದವರನ್ನು ಜಗತ್ತು ಮರೆತಿದೆ. ಆದರೆ ಸಮಾಜಮುಖಿ ಕರ್ತವ್ಯ ನಿರ್ವಹಿಸಿದ ಅಂಬೇಡ್ಕರ್, ಬಸವಣ್ಣ, ಶ್ರೀರಾಮರನ್ನು ಇಂದಿಗೂ ನೆನೆಯುವಂಥ ಕೆಲಸವಾಗಲು ಅವರ ಕೊಡುಗೆಗಳೇ ಮುಖ್ಯ ಕಾರಣ ಎಂದರು.ದಸಾಪ ಜಿಲ್ಲಾಧ್ಯಕ್ಷ ಕೆ.ಎನ್.ಶಾಂತಮೂರ್ತಿ ಮಾತನಾಡಿದರು. ಐಡಿಎಸ್‌ಜಿ ಪ್ರಾಂಶುಪಾಲೆ ಪುಷ್ಪಭಾರತಿ ಉಪನ್ಯಾಸ ನೀಡಿದರು. ದಸಾಪ ನೂತನ ಜಿಲ್ಲಾ ಘಟಕ : ಕೆ. ಎನ್.ಶಾಂತಮೂರ್ತಿ (ಅಧ್ಯಕ್ಷ), ಗೌರವಾಧ್ಯಕ್ಷ ಆರ್.ನರಸಿಂಪ್ಪ, ಧರಗುಣಿ ಮಂಜುನಾಥ್ (ಪ್ರ.ಕಾರ್ಯದರ್ಶಿ), ಜಯಣ್ಣ (ಗೌರವ ಸಲಹೆಗಾರ), ಹೆಚ್.ಸಿ.ಸೋಮಶೇಖರ್ (ಕೋಶಾಧ್ಯಕ್ಷ), ಮಂಜುನಾಥ್ (ಸಹ ಕಾರ್ಯದರ್ಶಿ), ಅಭಿಷೇಕ, ಮಹಾದೇವಪ್ಪ, (ಸಂಘಟನಾ ಕಾರ್ಯದರ್ಶಿ), ಪ್ರವೀಣ್ (ಸಂಚಾಲಕ). ಮಹಿಳಾ ಜಿಲ್ಲಾ ಘಟಕ : ಮೀನಾ ಕುಮಾರಿ (ಅಧ್ಯಕ್ಷೆ), ಡಿ.ಯಶೋಧ (ಉಪಾಧ್ಯಕ್ಷೆ), ಅರುಣ (ಪ್ರ. ಕಾರ್ಯದರ್ಶಿ), ಲೀಲಾವತಿ (ಸಹ ಕಾರ್ಯದರ್ಶಿ), ಸುಮಿತ್ರ (ಕೋಶಾಧ್ಯಕ್ಷೆ), ಜಯಮ್ಮ, ಪ್ರಮೀಳ (ನಿರ್ದೇಶಕರು), ಮೀನಾಕ್ಷಮ್ಮ (ಸಂಚಾಲಕಿ), ಕವಿತಾ (ಸಂಘಟನಾ ಕಾರ್ಯದರ್ಶಿ). ಜಿಲ್ಲಾ ಯುವಘಟಕ : ಮಂಜುನಾಥ್ (ಅಧ್ಯಕ್ಷ), ಕು.ಶಿವಾನಿ (ತಾ.ಅಧ್ಯಕ್ಷೆ), ದೇವರಾಜ್ (ಉಪಾಧ್ಯಕ್ಷ), ಕು.ಬಾಂಧವ್ಯ ಕಾರ್ಯ ದರ್ಶಿ), ಖುಷಿ, ಕೃತಿಕಾ (ಸದಸ್ಯರು).ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ಮೈಸೂರು ವಿಭಾಗೀಯ ಸಂಯೋಜಕ ಡಾ.ಚಂದ್ರಗುಪ್ತ ವಹಿಸಿ ದ್ದರು. ಮೆಸ್ಕಾಂ ಉಗ್ರಾಣ ಪಾಲಕ ಜಯಣ್ಣ, ಸಾಮಾಜಿಕ ಕಾರ್ಯಕರ್ತೆ ಚೇತನ, ಸಾಹಿತಿ ಸಿ.ಜಿ.ಸುರೇಶ್, ಪ್ರಗತಿಪರ ಮುಖಂಡ ಉಮೇಶ್‌ಕುಮಾರ್, ದಸಾಪ ಚಿಕ್ಕಮಗಳೂರು ಅಧ್ಯಕ್ಷ ಡಾ.ವಿಜಯ್‌ಕುಮಾರ್, ಮೂಡಿಗೆರೆ ಅಧ್ಯಕ್ಷ ಪಿ.ಕೆ.ಮಂಜುನಾಥ, ತರೀಕೆರೆ ಅಧ್ಯಕ್ಷ ಶೇಖರಪ್ಪ, ಶೃಂಗೇರಿ ಅಧ್ಯಕ್ಷೆ ಜಲಜ, ವಕೀಲರ ಸಂಘದ ಕಾರ್ಯದರ್ಶಿ ಅನಿಲ್, ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ಹುಣಸೇಮಕ್ಕಿ ಲಕ್ಷ್ಮಣ್ ಮತ್ತಿತರರಿದ್ದರು.




# ಬೀಕನಹಳ್ಳಿ ಮುರಾರ್ಜಿ ಶಾಲೆ ಪ್ರಾಂಶುಪಾಲರ ಅಮಾನತ್ತಿಗೆ ಆಗ್ರಹಿಸಿ ಮನವಿ

**ಚಿಕ್ಕಮಗಳೂರು:** ಇಲ್ಲಿನ ಬೀಕನಹಳ್ಳಿ ಮುರಾರ್ಜಿ ಶಾಲೆ ಪ್ರಾಂಶುಪಾಲ ಮಧುಸೂದನ್ ಅವರನ್ನು ಕೂಡಲೆ ಅಮಾನತ್ತು ಗೊಳಿಸಿಸುವಂತೆ ಆಗ್ರಹಿಸಿ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಶಾಖೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ಇಂದು ಜಿಲ್ಲಾಧಿಕಾರಿ ಕಚೇರಿಯಲ್ಲಿ ಮನವಿ ಸಲ್ಲಿಸಿ ನಂತರ ಮಾತನಾಡಿದ ದಸಂಸ ರಾಜ್ಯ ಸಮಿತಿ ಸದಸ್ಯ ಮರ್ಲೆ ಅಣ್ಣಯ್ಯ ಹೊರಗುತ್ತಿಗೆಯಲ್ಲಿ ಕೆಲಸ ಮಾಡುತ್ತಿರುವ ಅರ್ಪಿತಾಳನ್ನು ವಿನಾಕಾರಣ ಕರ್ತವ್ಯಕ್ಕೆ ಬಾರದಂತೆ ರಜೆಯ ಮೇಲೆ ಕಳುಹಿಸಿದ್ದಾರೆ. ನಂತರ ಅರ್ಪಿತ ನೀಡಿದ ದೂರಿನ ಸಂಬಂಧವಾಗಿ ವಿಚಾರಿಸಲು ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅನೇಕ ನ್ಯೂನ್ಯತೆಗಳು ಕಂಡುಬಂದಿದ್ದು, ಇದರ ಬಗ್ಗೆ ಚರ್ಚೆ ಮಾಡುತ್ತಿರುವಾಗ ಶಾಲೆಯಲ್ಲಿ ಅನೈತಿಕ ಸಂಬಂಧ ಹೊಂದಿರುವ ಹೊರಗುತ್ತಿಗೆ ಅಡಿಗೆ ನೌಕರರಾದ ಮಧು ಮತ್ತು ವಿದ್ಯಾರನ್ನು ಕರೆಸಿ ಅಕ್ರಮವಾಗಿ ಶಾಲೆಗೆ ಪ್ರವೇಶ ಮಾಡಿದ್ದಾರೆಂದು ನಮ್ಮ ಸಂಘಟನೆಯ ಪ್ರಮುಖರನ್ನು ಹೊರದಬ್ಬಲು ಹೇಳಿದರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅರ್ಪಿತಾಳಿಗೆ ಹಾಗೂ ಅವಳ ಗಂಡಕುಮಾರನಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಹೊಡೆದು ಹೊರದಬ್ಬಿದ್ದಾರೆ. ಈ ಸಂಬಂಧವಾಗಿ ಮಧುಸೂದನ್ ಹಾಗೂ ಮಧು ವಿದ್ಯಾರ ಮೇಲೆ ಜಾತಿ ನಿಂದನೆ ದೌರ್ಜನ್ಯ ಕಾಯ್ದೆ ಅಡಿ ದೂರುದಾಖಲಾಗಿದ್ದು, ಇವರ ಮೇಲೆ ಯಾವುದೇ ಕ್ರಮವಾಗಿಲ್ಲ ಮತ್ತು ಈ ಸಂಬಂಧವಾಗಿ ಮಧುಸೂದನ್‌ರವರು ನಿರ್ವಾಣ ಸಮಿತಿ ಎಂಬ ಅಕ್ರಮ ಸಮಿತಿಯ ಹೆಸರಿನಲ್ಲಿ ಅವರ ಜಾತಿಗೆ ಸೇರಿದ ಸಮುದಾಯವನ್ನು ಎತ್ತಿಕಟ್ಟಿ ಸಂಘಟನೆ ಪ್ರಮುಖರ ಮೇಲೆ ಇಲ್ಲಸಲ್ಲದ ದೂರುಗಳನ್ನು ನೀಡಿ ಪತ್ರಿಕಾಗೋಷ್ಠಿ ನಡೆಸಿದ್ದಾರೆ ಎಂದು ಆರೋಪಿಸಿದರು.

ದಲಿತ ಸಂಘರ್ಷ ಸಮಿತಿ 40 ವರ್ಷಗಳಿಂದಲೂ ಶೋಷಿತರ ಪರವಾಗಿ ಹೋರಾಟ ಮಾಡುತ್ತಿದ್ದು, ಇದರಿಂದ ಸಂಘಟನೆಗೆ ಕೆಟ್ಟ ಹೆಸರು ಬರುತ್ತಿದೆ. ಮಧುಸೂದನ್‌ರವರು ಮುರಾರ್ಜಿ ಶಾಲೆಗಳ ಪ್ರಾಂಶುಪಾಲರುಗಳನ್ನು ಎತ್ತಿಕಟ್ಟಿ ರಾಜಕೀಯ ಮಾಡುತ್ತಿದ್ದು, ಮುರಾರ್ಜಿ ಶಾಲೆಗೆ ಇರುವ ಹೆಸರನ್ನು ಹಾಳುಮಾಡುತ್ತಿದ್ದಾರೆ ಇದರಿಂದ ಮಕ್ಕಳ ವಿದ್ಯಾಭ್ಯಾಸದ ಮೇಲೆ ಪರಿಣಾಮ ಬೀರುತ್ತಿದೆ. ಈ ಬಗ್ಗೆ ಕ್ರಮ ಕೈಗೊಳ್ಳಲು ಕ್ರೈಸ್ ಮುಖ್ಯಸ್ಥರಿಗೂ ದೂರು ನೀಡಿದ್ದು, ಇದುವರೆಗೂ ಯಾವುದೇ ಕ್ರಮವಾಗಿರುವುದಿಲ್ಲ ಎಂದು ದೂರಿದರು.



Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**